# ಮಲ್ಲಮ್ಮ ನುಡಿ

VOLUME - 13 ಸಂಪುಟ-13 | ISSUE - 181 ಸಂಚಿಕೆ- 181 | PAGE-8 ಪುಟ-8 | ಶನಿವಾರ 30.08.2025 | RS.2/- ಬೆಲೆ 2/-

## ಹುಮನಾಬಾದ್ ಕ್ಷೇತ್ರಕ್ಕೆ ಮಾಜಿ ಸಚಿವ ರಾಜಶೇಖರ ಪಾಟೀಲ ಕೊಡುಗೆ ಅಮೂಲ್ಯ

ಮಲ್ಲಮನುಡಿವಾರ್ತೆಹುಮನಾಬಾದ್, ಆ.29: ಮಾಜಿ ಸಚಿವ ಹಾಗೂ ಮಾಜಿ ಶಾಸಕರಾದ ರಾಜಶೇಖರ ಪಾಟೀಲ ಅವರು ತಮ್ಮ ಆಡಳಿತಾವಧಿಯಲ್ಲಿ ನೂರಕ್ಕೂ ಅಧಿಕ ಗ್ರಾಮಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸಿದ ಘಟನೆಗಳಿವೆ. "ಪ್ರತಿಭಾವಂತ ನಾಯಕರು ಕಚೇರಿಯಿಂದ ಅಲ್ಲ, ಜನರ ನಡುವೆ ಕಂಡುಬರುವರು" ಎಂಬ ಮಾತಿಗೆ ಪಾಟೀಲರ ಸೇವಾ ಶೈಲಿ ಸಾಕ್ಷಿಯಾಗಿದೆ. ಬೇಸಿಗೆ ನೀರಿನ ಸಮಸ್ಯೆ, ವಿದ್ಯುತ್ ಅಸ್ಥಿರತೆ, ರಸ್ತೆ ಅಭಿವೃದ್ಧಿ, ಪಾನೀಯ ನೀರು ಯೋಜನೆಗಳು – ಹೀಗೆ ವಿವಿಧ ಅಂಶಗಳಲ್ಲಿ ರಾಜಶೇಖರ ಪಾಟೀಲ ಅವರು ಜನರ ಬೇಡಿಕೆಗೆ ಸ್ಪಂದಿಸಿದ್ದರು. ಗ್ರಾಮಸ್ಥರೊಂದಿಗೆ ಕಳೆದು ಮೆರೆಯುತ್ತಾ, ನಿರಂತರ



ಸಂಚಾರದ ಮೂಲಕ ಹತ್ತಿರದ ಸಂಬಂಧವನ್ನೇ ಬೆಳೆಸಿದ್ದರು. "ನಮ್ಮ ಊರಿಗೆ ಪಾಠಶಾಲೆ ಬಂತು, ರಸ್ತೆಗೆ ಅಸ್ಫಾಲ್ಟ್ ಬಂತು, ನೀರು ಆಯಿತು – ಇವೆಲ್ಲವೂ ಪಾಟೀಲರ ಕಾಲದಲ್ಲೇ ಸಾಧ್ಯವಾಯಿತು" ಎಂಬುದಾಗಿ ಹಲವಾರು ಹಿರಿಯರು ಮತ್ತು ಗ್ರಾಮಸ್ಥರು ಸಂತೋಷದಿಂದ ಹೇಳಿಕೊಳ್ಳುತ್ತಾರೆ. ಅವರ ಅಧ್ಯಕ್ಷತೆಯಲ್ಲಿ ನಡೆದ ಹಲವಾರು ಅಭಿವೃದ್ಧಿ ಸಭೆಗಳು ಹಾಗೂ ಯೋಜನೆಗಳ ಅನುಷ್ಠಾನದಿಂದಾಗಿ ಹುಮನಾಬಾದ್ ಕ್ಷೇತ್ರದಲ್ಲಿ ಮೂಲಭೂತ ಸೌಕರ್ಯಗಳ ಗತಿ ವೇಗವಾಗಿತ್ತು ಎನ್ನುವುದು ಹಲವರ ಅಭಿಪ್ರಾಯವಾಗಿದೆ

ಇತ್ತೀಚೆಗೆ ಮಳೆಯಿಂದ ರೈತರ ಬೆಳೆ ನಾಶವಾದ ಬಳಿಕವೂ, "ಅಧಿಕಾರಿಗಳು ಧಾವಿಸಿ ರೈತರ ನೆರವಿಗೆ ಬರಬೇಕು" ಎಂಬುದಾಗಿ ಧ್ವನಿ ಎತ್ತಿ, ಜನಪರ ಭಾವನೆ ವ್ಯಕ್ತಪಡಿಸಿದರು. ಇದ-ರಿಂದ ಅವರದ್ದು ನಾಟಕೀಯ ರಾಜಕಾರಣವಲ್ಲ, ನಿಜವಾದ ಸೇವಾ ಮನೋಭಾವ ಎಂಬುದು ಸ್ಪಷ್ಟವಾಗುತ್ತದೆ.

## ಜಿಎಸ್‌ಟಿ ಸರಳೀಕರಣದಿಂದ ರಾಜ್ಯಗಳ ಆದಾಯ 2.5 ಲಕ್ಷ ಕೋಟಿ ನಷ್ಟ : ಸಚಿವ ಕೃಷ್ಣ ಬೈರೇಗೌಡ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.29: ಕೇಂದ್ರ ಸರ್ಕಾರ ಪ್ರಸ್ತಾಪಿಸಿರುವ ಜಿಎಸ್ಟಿ ಸರಳೀಕರಣ ವ್ಯವಸ್ಥೆಯಿಂದ ರಾಜ್ಯಗಳ ಆದಾಯ 85,000 ಕೋಟಿಯಿಂದ 2.5 ಲಕ್ಷ ಕೋಟಿ ವರೆಗೆ ನಷ್ಟ ಉಂಟಾಗಲಿದ್ದು, ಜಿಎಸ್ಟಿ ಸ್ಥಿರಗೊಳ್ಳುವವರೆಗೆ ಜಿಎಸ್ಟಿ ಕೌನ್ಸಿಲ್ ನಷ್ಟ ಪರಿಹಾರ ನೀಡಲಿ ಎಂದು ಸಚಿವ ಕೃಷ್ಣ ಬೈರೇಗೌಡ ಒತ್ತಾಯಿಸಿದರು.

ಜಿಎಸ್ಟಿ ಸರಳೀಕರಣ ಹಾಗೂ ರಾಜ್ಯಗಳ ಸ್ವಾಯತ್ತತೆಗೆ ಸಂಬಂಧಿಸಿ ಶುಕ್ರವಾರ ದೆಹಲಿಯ ಕರ್ನಾಟಕ ಭವನದಲ್ಲಿ ಸಮಾನ ಮನಸ್ಕ ಎಂಟು ರಾಜ್ಯಗಳ ಸಚಿವರು ಹಾಗೂ ಅಧಿಕಾರಿಗಳ ಸಭೆ ನಡೆಸಲಾಯಿತು. ಈ ಸಭೆಯಲ್ಲಿ



ತೆಲಂಗಾಣ ರಾಜ್ಯದ ಹಣಕಾಸು ಸಚಿವ ತಂಗಮ್ ತೆನ್ನರಸು, ಹಿಮಾಚಲ ಪ್ರದೇಶದ ಹಣಕಾಸು ಸಚಿವ ರಾಜೇಶ್ ಧರ್ಮನಿ, ಜಾರ್ಖಂಡ್ ಹಣಕಾಸು ಸಚಿವ ರಾಧಾ ಕೃಷ್ಣ ಕಿಶೋರ್, ಪಂಜಾಬ್ ಹಣಕಾಸು ಸಚಿವ ಹರ್ಪಾಲ್ ಸಿಂಗ್ ಚೀಮಾ, ಕೇರಳ ಹಣಕಾಸು ಸಚಿವ ಬಾಲಗೋಪಾಲ್, ತೆಲಂಗಾಣ ಹಣಕಾಸು ಸಚಿವ ಮಲ್ಲು ಭಟ್ಟಿ ವಿಕ್ರಮಾರ್ಕ, ಪಶ್ಚಿಮ ಬಂಗಾಳ ಸರ್ಕಾರದ ಪರವಾಗಿ ವಲಯ ಅಧಿಕಾರಿ ಉಜ್ಜೈನಿ ದತ್ತ ಪಾಲ್ಗೊಂಡಿದ್ದರು. ಸಭೆಯ ನಂತರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ, ಜಿಎಸ್ಟಿ ಕೌನ್ಸಿಲ್ ನಮ್ಮ ಮುಂದಿಟ್ಟಿರುವ ಜಿಎಸ್ಟಿ ತೆರಿಗೆ ಸರಳೀಕರಣ ವ್ಯವಸ್ಥೆಯನ್ನು ನಾವು ಸ್ವಾಗತಿಸುತ್ತೇವೆ. ಆದರೆ, ಈ ವ್ಯವಸ್ಥೆ ರಾಜ್ಯಗಳ ತೆರಿಗೆ ಆದಾಯವನ್ನು ರಕ್ಷಿಸುವಂತಿರಬೇಕು ಹಾಗೂ ಇದರ ಸಂಪೂರ್ಣ ಲಾಭ ದೇಶದ ಜನಸಾಮಾನ್ಯರಿಗೆ ಸಿಗುವಂತಿರಬೇಕೇ ಹೊರತು ಕೆಲವು ಕಂಪನಿಗಳಿಗೆ ಮಾತ್ರ ಲಾಭ ಆಗುವಂತಿರಬಾರದು ಎಂದರು.

ಪ್ರಸ್ತಾವಿತ ಜಿಎಸ್ಟಿ ಸರಳೀಕರಣದಿಂದ ರಾಜ್ಯ ಸರ್ಕಾರಗಳಿಗೆ ಯಾವ

(2ನೇ ಪುಟ ನೋಡಿ)

## ಬೆಳೆ ಹಾನಿಗೆ ಸೂಕ್ತ ವಿಮೆ ಪರಿಹಾರ ಕೊಡಿಸಲು: ಈಶ್ವರ ಖಂಡ್ರೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 29: ವಿಪರೀತ ಮಳೆಯಿಂದ ಜಿಲ್ಲೆಯಲ್ಲಿ ಆಗಿರುವ ಬೆಳೆ ಹಾನಿಯ ಬಗ್ಗೆ ಕೂಡಲೇ ಸಮೀಕ್ಷೆ ನಡೆಸಿ, ರೈತರಿಗೆ ಬೆಳೆ ವಿಮೆ ಕಂಪನಿಗಳಿಂದ ಸೂಕ್ತ ಪರಿಹಾರ ದೊರಕಿಸಲು ಕ್ರಮ ವಹಿಸುವಂತೆ ಜಿಲ್ಲಾಡಳಿತ ಮತ್ತು ಕೃಷಿ ಅಧಿಕಾರಿಗಳಿಗೆ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಸೂಚನೆ ನೀಡಿದ್ದಾರೆ.

ಜಿಲ್ಲಾ ಪಂಚಾಯ್ತಿಯಲ್ಲಿಂದು

(2ನೇ ಪುಟ ನೋಡಿ)

## ಲೋಕಾ ಬಲೆಗೆ ಸಿಕ್ಕಿಬಿದ್ದ ಎಸಿಪಿ ಸುಬೇದಾರ್ ಸೇರಿ ಐವರ ಸೆರೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಅ.29: ಪ್ರಕರಣವೊಂದರ ತನಿಖೆ ಮುಗಿಸುವ ಸಲುವಾಗಿ 40 ಲಕ್ಷ ರೂ. ಲಂಚಕ್ಕೆ ಬೇಡಿಕೆಯಿಟ್ಟು ಹಣ ಪಡೆಯುತ್ತಿರುವಾಗಲೇ ನಗರ ಪೊಲೀಸ್ ಆಯುಕ್ತಾಲಯದ ದಕ್ಷಿಣ ಉಪ ವಿಭಾಗದ ಎಸಿಪಿ ಸೇರಿದಂತೆ ಐವರು ರೆಡ್ ಹ್ಯಾಂಡ್ ಆಗಿ ಸಿಕ್ಕಿ ಬಿದ್ದಿರುವ ಘಟನೆ ಶುಕ್ರವಾರ ನಡೆದಿದೆ. ಕಲಬುರಗಿ ನಗರ ಪೊಲೀಸ್ ಆಯುಕ್ತಾಲಯದ ದಕ್ಷಿಣ ಉಪ ವಿಭಾಗದ ಎಸಿಪಿ ಆಗಿರುವ ಶರಣಬಸಪ್ಪ ಸುಬೇದಾರ್, ರೈಟರ್ ಚಂದ್ರಕಾಂತ್, ಕಾನ್‌ಸ್ಟೇಬಲ್



ರಾಘವೇಂದ್ರ ಸೇರಿ ಒಟ್ಟು ಐವರು ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾರೆ ಎಂದು ತಿಳಿದು ಬಂದಿದೆ. ಐವರು ಸಹ ಪ್ರಕರಣವೊಂದರ ತನಿಖೆ ಮುಗಿಸುವ ಸಂಬಂಧ ರೇವಣಸಿದ್ದಪ್ಪ ಎಂಬುವರ ಬಳಿ 40 ಲಕ್ಷ ರೂ. ಹಣಕ್ಕೆ ಬೇಡಿಕೆ ಇಟ್ಟು ಹಣ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾರೆ ಎಂದು ತಿಳಿದು ಬಂದಿದೆ. ಎಸ್ಪಿ ಬಿ.ಕೆ.ಉಮೇಶ್ ನೇತೃತ್ವದಲ್ಲಿ ಐವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿದುಬಂದಿದೆ.



ಕಮಲನಗರ: ತಾಲೂಕಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಮನೆಗಳು ಕುಸಿದು, ಬೆಳೆಗಳು ಹಾನಿಗೊಳಗಾಗಿ, ರಸ್ತೆ ಸಂಪರ್ಕ ಕಡಿತಗೊಂಡು ಜನಜೀವನ ಅಸ್ತವ್ಯಸ್ತಗೊಂಡಿದ ಹಿನ್ನೆಲೆಯಲ್ಲಿ ಶುಕ್ರವಾರ ಕಾಂಗ್ರೆಸ್ ಮುಖಂಡರಾದ ಡಾ ಭೀಮಸೇನರಾವ್ ಸಿಂಧೆ ಅವರು ಕಮಲನಗರ, ಬಾಲೂರ್(ಕೆ) ಹೊರಂಡಿ ಗ್ರಾಮಗಳಿಗೆ ಅವರು ಭೇಟಿ ನೀಡಿ, ಮನೆ ಕುಸಿತ ಮತ್ತು ಬೆಳೆ ಹಾನಿ ಪ್ರದೇಶಗಳನ್ನು ಪರಿಶೀಲಿಸಿದರು.

## ಕೆಜಿಎಫ್ ನಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ, ಸ್ವಯಂ ಚಾಲಿತ ಚಾಲನಾ ಪಥ ಉದ್ಘಾಟಿಸಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ




ಮಲ್ಲಮ್ಮ ನುಡಿ ವಾರ್ತೆ ಕೋಲಾರ:ಆ.29:

ಕೆ.ಜಿ.ಎಫ್ ನಲ್ಲಿ ನೂತನ ಪ್ರಾದೇಶಿಕ ಸಾರಿಗೆ ಕಛೇರಿ ಮತ್ತು ಸ್ವಯಂ ಚಾಲಿತ ಚಾಲನಾ ಪಥವನ್ನು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಉದ್ಘಾಟಿಸಿದರು.

ನೂತನ ಪ್ರಾದೇಶಿಕ ಸಾರಿಗೆ ಕಛೇರಿ 5 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಿದ್ದು, ಸ್ವಯಂ ಚಾಲಿತ ಚಾಲನಾ ಪಥವನ್ನೂ 5 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಿದ್ದು, ಹೊಸದಾಗಿ ಸೇವೆಗೆ ಮುಕ್ತಗೊಳಿಸಲಾಗಿದೆ. ಇದಲ್ಲದೆ ಸಾರಿಗೆ ಇಲಾಖೆಯ ರಾಜ್ಯದಲ್ಲಿ

(2ನೇ ಪುಟ ನೋಡಿ)

## ಚಂದ್ರಯಾನ-5 ಮಿಷನ್: ಒಪ್ಪಂದಕ್ಕೆ ಭಾರತ-ಜಪಾನ್ ಸಹಿ

ಮಲ್ಲಮ್ಮ ನುಡಿ ವಾರ್ತೆ ಟೋಕಿಯೋ:ಅ.29: ಭಾರತ ಮತ್ತು ಜಪಾನ್ ಶನಿವಾರ ಜಂಟಿಯಾಗಿ ಚಂದ್ರಯಾನ-5 ಮಿಷನ್ ಅನುಷ್ಠಾನ ಒಪ್ಪಂದಕ್ಕೆ ಸಹಿ ಹಾಕಿವೆ. ಇದು ಉಭಯ ದೇಶಗಳ ಬಾಹ್ಯಾಕಾಶ ಸಂಸ್ಥೆಗಳು ಚಂದ್ರನ ಧ್ರುವ ಪ್ರದೇಶದ ಜಂಟಿ ಪರಿಶೋಧನೆಯಾಗಿದೆ.

ಮುಂಬರುವ ಚಂದ್ರಯಾನ-5 ಕಾರ್ಯಾಚರಣೆಗಾಗಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ(ಇಸ್ರೋ) ಮತ್ತು ಜಪಾನ್ ಏರೋಸ್ಪೇಸ್ ಪರಿಶೋಧನಾ ಸಂಸ್ಥೆ ಜಂಟಿ ಅನುಷ್ಠಾನ ಒಪ್ಪಂದಕ್ಕೆ ಸಹಿ ಹಾಕಲಾಯಿತು ಎಂದು ಜಪಾನ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಘೋಷಿಸಿದ್ದಾರೆ.


ಟೋಕಿಯೋದಲ್ಲಿ ಜಪಾನ್ ಪ್ರಧಾನಿ ಶಿಗೇರು ಇಶಿಬಾ ಅವರೊಂದಿಗೆ ಮಾತುಕತೆಯ ನಂತರ ಜಂಟಿ ಪತ್ರಿಕಾಗೋಷ್ಠಿಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಏಷ್ಯಾದ ಎರಡು ಪ್ರಜಾಪ್ರಭುತ್ವ ದೇಶಗಳ ನಡುವೆ ಬೆಳೆಯುತ್ತಿರುವ ಕಾರ್ಯತಂತ್ರ ಮತ್ತು ವೈಜ್ಞಾನಿಕ ಪಾಲುದಾರಿಕೆಯನ್ನು ಎತ್ತಿ ತೋರಿಸಿದರು.

ಚಂದ್ರಯಾನ-5 ಮಿಷನ್ ಚಂದ್ರನ ದಕ್ಷಿಣ ಧ್ರುವದಲ್ಲಿ ಶಾಶ್ವತವಾಗಿ ನೆರಳಿನ ಪ್ರದೇಶದ ಸುತ್ತಮುತ್ತಲಿನ ಚಂದ್ರನ ನೀರು ಸೇರಿದಂತೆ ಚಂದ್ರನ ಬಾಷ್ಪಶೀಲ ವಸ್ತುಗಳನ್ನು ಅಧ್ಯಯನ ಮಾಡುವ ಗುರಿ ಹೊಂದಿದೆ.

ಈ ಕಾರ್ಯಾಚರಣೆಯು ಜಪಾನ್‌ನ ಎಚ್3 ರಾಕೆಟ್ ಅನ್ನು ಬಳಸಿಕೊಳ್ಳಲಿದ್ದು, 2027-28 ರ ಉಡಾವಣೆಗೆ ಯೋಜಿಸಲಾಗಿದೆ. ನೀರಿನ ಮಂಜುಗಡ್ಡೆಯನ್ನು ಪತ್ತೆಹಚ್ಚಲು ಮತ್ತು ವಿಶ್ಲೇಷಿಸಲು ಚಂದ್ರನ ದಕ್ಷಿಣ ಧ್ರುವ ಪ್ರದೇಶವನ್ನು ಅನ್ವೇಷಿಸುವ ಗುರಿಯನ್ನು ಇದು ಹೊಂದಿದೆ. ಪಾಲುದಾರಿಕೆಯ ಭಾಗವಾಗಿ,

(2ನೇ ಪುಟ ನೋಡಿ)

## ಭಾರತದಲ್ಲಿ 7000 ಕಿ.ಮೀ ಬುಲೆಟ್ ರೈಲು ಓಡಲಿದೆ: ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ ಟೋಕಿಯೋ:ಅ.29: ಜಪಾನ್ ಸಹಭಾಗಿತ್ವದಲ್ಲಿ ಭಾರತದಲ್ಲಿ ದೊಡ್ಡ ಪ್ರಮಾಣದಲ್ಲಿ ಬುಲೆಟ್ ರೈಲು ವಿಸ್ತರಣೆಯನ್ನು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ. ಮುಂಬೈ-ಅಹಮದಾಬಾದ್ ಹೈಸ್ಪೀಡ್ ರೈಲು (ಬುಲೆಟ್ ರೈಲು) ಭಾರತ ಮತ್ತು ಜಪಾನ್ ನಡುವಿನ ಪ್ರಮುಖ ಯೋಜನೆಯಾಗಿದೆ ಎಂದು ಪ್ರಧಾನಿ ಮೋದಿ ಜಪಾನ್‌ನಲ್ಲಿ ಹೇಳಿದರು. ಕೆಲವು ವರ್ಷಗಳಲ್ಲಿ ಪ್ರಯಾಣಿಕರಿಗೆ ಸೇವೆಗಳನ್ನು ಒದಗಿಸುವುದು ನಮ್ಮ ಗುರಿಯಾಗಿದೆ. ಈ ಸಮಯದಲ್ಲಿ

(2ನೇ ಪುಟ ನೋಡಿ)

## ವಿವಿಧ ಪ್ರವಾಹ ಪೀಡಿತ ಪ್ರದೇಶಗಳಿಗೆ ಸಚಿವ ರಹೀಮ್ ಖಾನ್ ಭೇಟಿ



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 29 : ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಮ್ ಖಾನ್ ಅವರು ಇಂದು ಬೀದರ ತಾಲ್ಲೂಕಿನ ವಿಲಾಸಪುರ, ರಾಜನಾಳ,

(2ನೇ ಪುಟ ನೋಡಿ)

## ಸಂವಿಧಾನ ಬದ್ಧವಾಗಿದ್ದರೆ ಯಾರು ಬೇಕಾದ್ರು ದಸರಾ ಉದ್ಘಾಟನೆ ಮಾಡ್ಬಹುದು: ಯು.ಟಿ.ಖಾದರ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.29: ಸಂವಿಧಾನ ಪ್ರಕಾರವಾಗಿ ದಸರಾ ಉದ್ಘಾಟನೆ ಬಗ್ಗೆ ಸರ್ಕಾರ ನಿರ್ಧಾರ ಸ್ವಾಗತ ಮಾಡಿದ್ರೆ ನಾವು ಅದನ್ನ ಒಪ್ಪಬೇಕು



ಎಂದು ಸ್ಪೀಕರ್ ಯು.ಟಿ.ಖಾದರ್ ತಿಳಿಸಿದ್ದಾರೆ.

ಬಾನು ಮುಷ್ತಾಕ್ ದಸರಾ ಉದ್ಘಾಟನೆಗೆ ಬಿಜೆಪಿ ವಿರೋಧ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ದಸರಾ ಉದ್ಘಾಟನೆ ವಿಚಾರದಲ್ಲಿ ಆಡಳಿತ ಹಾಗೂ ವಿಪಕ್ಷಗಳು ಮಾತಾಡಲಿ. ಸಂವಿಧಾನ ಬದ್ಧವಾಗಿ ಇದ್ಯಾ, ಇಲ್ವಾ ಅಂತ ಮಾತ್ರ ನಾವು ನೋಡ್ತೀವಿ ಎಂದಿದ್ದಾರೆ.

ಸಂವಿಧಾನದ ಪ್ರಕಾರ ಇದ್ದರೆ ಎಲ್ಲವನ್ನು ನಾವು ಒಪ್ಪಬೇಕು. ಸಂವಿಧಾನ ಪ್ರಕಾರ ಎಲ್ಲವೂ ಇದ್ದರೆ ಯಾವುದು ತಪ್ಪು ಅಲ್ಲ. ಸಂವಿಧಾಬ ಬದ್ಧವಾಗಿದ್ದರೆ ಯಾರೂ ಬೇಕಾದ್ರು ದಸರಾ ಉದ್ಘಾಟನೆ ಮಾಡ್ಬಹುದು ಎಂದು ಹೇಳಿದ್ದಾರೆ.

ಇದೇ ವೇಲೆ ಧರ್ಮಸ್ಥಳ ಕೇಸ್ ವಿಚಾರದ ಬಗ್ಗೆ ಮಾತನಾಡಿ, ಧರ್ಮಸ್ಥಳ ಕೇಸ್‌ನಲ್ಲಿ ಎಸ್‌ಐಟಿ ತನಿಖಾ ವರದಿ ಬರೋವರೆಗೂ ಯಾರು ಕೂಡಾ ನ್ಯಾಯಾಧೀಶರು ಆಗಬಾರದು. ಸರ್ಕಾರ ಎಸ್‌ಐಟಿ ತನಿಖೆ ರಚನೆ ಮಾಡಿದೆ. ತನಿಖೆ ಆಗ್ತಿದೆ. ಎಸ್‌ಐಟಿ ತನಿಖೆ ಆಗೋವರೆಗೂ ನಾವು ನ್ಯಾಯಾಧೀಶರು ಆಗೋದು ಬೇಡ. ಕ್ಷೇತ್ರದ ಪಾವಿತ್ರ್ಯತೆ ನಮಗೆ ಮುಖ್ಯ ಎಂದರು.

ಒಂದು ಶಿಕ್ಷಣ ಸಂಸ್ಥೆಯ ಗೌರವ ಉಳಿಯೋದು ಮುಖ್ಯ. ಒಂದು ಸಂಸ್ಥೆಯನ್ನ ಕಟ್ಟೋದು ತುಂಬಾ ಕಷ್ಟ. ಕಪ್ಪು ಚುಕ್ಕೆ ಮಾಡೋದು ಸುಲಭ. ಎಸ್‌ಐಟಿ ತನಿಖೆ ವರದಿ ಬರಲಿ. ಅಲ್ಲಿಯವರೆಗೆ ಎಲ್ಲರು ಕಾಯಬೇಕು. ತನಿಖೆ ವರದಿ ಬರಲಿ ಅಮೇಲೆ ಎಲ್ಲರು ಮಾತಾಡಿ ಅಂತ ತಿಳಿಸಿದರು.

## ಭ್ರಷ್ಟ ಅಧಿಕಾರಿಗಳನ್ನು ನಾನು ಬಿಡುವುದಿಲ್ಲ: ಜಸ್ಟೀಸ್ ಬಿ ವೀರಪ್ಪ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 29: ಈಗಾಗಲೇ ನಾನು ನನ್ನ ಆಸ್ತಿಯನ್ನು ಡಿಕ್ಲೇರ್ ಮಾಡಿದ್ದೇನೆ. ನಾನು ಬಂದಿರೋದೇ ಧರ್ಮ, ನ್ಯಾಯ ಸಂಸ್ಥಾಪನೆ ಮಾಡೋಕೆ. ಭ್ರಷ್ಟ ಅಧಿಕಾರಿಗಳ್ನು ಬಿಡುವುದಿಲ್ಲ ಎಂದು ಕರ್ನಾಟಕ ರಾಜ್ಯ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ ವೀರಪ್ಪ ಅವರು ಆಕ್ರೋಶ ವ್ಯಕ್ತಪಡಿಸಿದರು.

ರಾಯಚೂರ ಜಿಲ್ಲಾ ಪ್ರವಾಸದಲ್ಲಿರುವ ಅವರು ಆಗಸ್ಟ್ 29ರಂದು ಬೆಳಗ್ಗೆ ಅನಿರೀಕ್ಷಿತ ಭೇಟಿ ನಂತರ ಕೃಷಿ ವಿವಿಯ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಅಹವಾಲು ಆಲಿಸಿ ಅವರು ಮಾತನಾಡಿದರು.

ನಾನು ಆಗಸ್ಟ್ 28ರಂದು ಇಡೀ ದಿನ ರಾಯಚೂರು ಸುತ್ತಿದ್ದೇನೆ. 15ಕ್ಕು ಹೆಚ್ಚು ಕಚೇರಿಗಳಿಗೆ ಭೇಟಿ ನೀಡಿದ್ದೇನೆ. ಮಳೆಯಲ್ಲು ಹಾಸ್ಟೇಲ್ ಭೇಟಿ ಮಾಡಿದ್ದೇನೆ. ಲೋಪ ಕಂಡು ಬಂದಲ್ಲಿ ಸ್ಥಳದಲ್ಲೇ 14 ಸ್ವಯಂ ಪ್ರೇರಿತ ದೂರು ದಾಖಲಿಸಿ ಎಚ್ಚರಿಕೆ ನೀಡಿದ್ದೇನೆ. ಹಾಸ್ಟೆಲಗಳಿಗೆ ಹೋದಾಗ ಮಕ್ಕಳ ಊಟದ ಹಣ ಕದಿಯುತ್ತಿದ್ದ ವಾರ್ಡನಗೆ ಅಮಾನತು ಶಿಕ್ಷೆಗೆ ಗುರಿಪಡಿಸಿದ್ದೇನೆ ಎಂದು ಉಪ ಲೋಕಾಯುಕ್ತರು ಹೇಳುತ್ತಿದ್ದಂತೆ, ಸಭಾಂಗಣದಲ್ಲಿ ಸೇರಿದ್ದ ಜನರಿಂದ ಕರತಾಡನ ಕೇಳಿ ಬಂದಿತು.

ಸಂವಿಧಾನ ರಚನೆ ಮಾಡಿದಂತಹ ಡಾ.ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದಲ್ಲಿ ಸಂವಿಧಾನ ಜಾ-ರಿಯಾದ ಮೇಲೆ ಭಾರತದ ಜನಗಳಾದ ನಮ್ಮಿಂದ ನೊಂದ ಜನರಿಗೆ ಸರಿಯಾಗಿ ನ್ಯಾಯ ಕೊಡಲಾಗುತ್ತಿಲ್ಲ ಎನ್ನುವ ನೋವು ನನಗೆ ಕಾಡುತ್ತಿದೆ ಎಂದು ಇದೆ ವೇಳೆ ಉಪ ಲೋಕಾಯುಕ್ತರು ಭಾವುಕರಾದರು.

ಅಧಿಕಾರಿಗಳು ಮತ್ತು ಸಿಬ್ಬಂದಿ ಒಳ್ಳೆಯವರಿದ್ದರೆ ನಾನು ಅವರ ಪಾದಮುಟ್ಟಿ ಕಾಲು ಮುಗಿಯುತ್ತೇನೆ. ಭ್ರಷ್ಟರಿದ್ದರೆ ಕತ್ತು ಹಿಡಿದು ಕಾನೂನು ಬದ್ಧವಾಗಿ ಏನು ಮಾಡಬೇಕು ಅದು ಮಾಡುತ್ತೇನೆ ಎಂದು ಅವರು ಎಚ್ಚರಿಕೆ ನೀಡಿದರು.

ನಾನು ಬಂದಿರೋದೇ ಈ ಭ್ರಷ್ಟಾಚಾರದ ಪಿಡುಗನ್ನು ತೊಲಗಿಸೋಕೆ. ಈ ಜನರ ಋಣ ತೀರಿಸುವುದೇ ನನ್ನ ಧ್ಯೇಯ ಎಂದು ಭಾವಿಸಿದ್ದೇನೆ. ತಪ್ಪು ಕಂಡು ಬಂದರೆ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳುತ್ತೇನೆ ಎಂದರು.

ಈಗ ಶಾಸಕಾಂಗ ಬಲಹೀನವಾಗಿದೆ ಎಂದು ಅಭಿಪ್ರಾಯಪಟ್ಟ ಉಪ ಲೋಕಾಯುಕ್ತರು, ಕಾರ್ಯಾಂಗದ ವೈಖರಿ ಮೇಲೆ ಸಂಶಯ ಮೂಡಿದೆ. ನ್ಯಾಯಾಂಗದ ಮೇಲೆ ಮಾತ್ರ ಸ್ವಲ್ಪಮಟ್ಟಿನ ವಿಶ್ವಾಸವಿದೆ ಎಂದರು.

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಕೊಡಿಸಲು: ಈಶ್ವರ ಖಂಡ್ರೆ ಸೂಚನೆ

ನಡೆದ ಸಭೆಯಲ್ಲಿ ಪರಾಮರ್ಶೆ ನಡಸಿದ ಸಚಿವರು, ಕಳೆದ 15 ದಿನಗಳ ಹಿಂದೆ ಹಾಗೂ ಕಳೆದ ಮೂರು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದ ಹಲವು ಗ್ರಾಮಗಳು ರಸ್ತೆ ಸಂಪರ್ಕ ಕಡಿತವಾಗಿದ್ದು, ಈ ಸಂಪರ್ಕಗಳ ಪುನರ್ ಸ್ಥಾಪನೆಗೆ ತತ್ ಕ್ಷಣ ಕ್ರಮ ವಹಿಸಬೇಕು. ಕಾರ್ಯ ನಿರ್ವಾಹಕ ಎಂಜಿನಿಯರುಗಳು ವಾಟ್ಸ್ ಅಪ್ ನಲ್ಲಿ ಮಾಹಿತಿ ತರಿಸಿಕೊಳ್ಳುವ ಪ್ರವೃತ್ತಿ ಬಿಟ್ಟು, ತಾವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ತುರ್ತು ಕ್ರಮ ಕೈಗೊಳ್ಳುವಂತೆ ಆದೇಶಿಸಿದರು.

ಮಳೆಯಿಂದ ರಸ್ತೆ ಸಂಪರ್ಕ ಕಡಿತವಾಗಿ ಹಲವು ಗ್ರಾಮಗಳಿಗೆ ಬಸ್ ಸಂಚಾರ ಸ್ಥಗಿತವಾಗಿದೆ. ಔರಾದ್, ಕಮಲನಗರ, ಭಾಲ್ಕಿ ತಾಲೂಕುಗಳ ಹೆಚ್ಚಿನ ಗ್ರಾಮಗಳಲ್ಲಿ ಬಸ್ ಸಂಚಾರ ಸ್ಥಗಿತವಾಗಿದ್ದು, ಕೂಡಲೇ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಮತ್ತು ಸಾರಿಗೆ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಗುಂಡಿ ಮುಚ್ಚಲು ಸೂಚನೆ: ಒಂದು ವಾರದಲ್ಲಿ ಬೀಳುವ ಮಳೆ ಒಂದೇ ದಿನದಲ್ಲಿ ಬಿದ್ದಿರುವ ಪರಿಣಾಮವಾಗಿ ಹಲವು ರಸ್ತೆಗಳು ಗುಂಡಿ ಬಿದ್ದಿದ್ದು, ದ್ವಿಚಕ್ರ ವಾಹನ ಚಾಲಕರು ಬಿದ್ದು ಗಾಯಗೊಳ್ಳುತ್ತಿದ್ದಾರೆ. ಕೂಡಲೇ ಈ ಎಲ್ಲ ಗುಂಡಿಗಳನ್ನು ಸಮರೋಪಾದಿಯಲ್ಲಿ ತಾತ್ಕಾಲಿಕವಾಗಿ ಮುಚ್ಚುವಂತೆ ಸೂಚಿಸಿದ ಈಶ್ವರ ಖಂಡ್ರೆ, ಮಳೆಗಾಲ ಮುಗಿದ ತರುವಾಯ ಅಕ್ಟೋಬರ್ ತಿಂಗಳಲ್ಲಿ ಶಾಶ್ವತವಾಗಿ ಈ ರಸ್ತೆಗಳ ದುರಸ್ತಿ ಕಾರ್ಯ ಕೈಗೊಳ್ಳುವಂತೆ ತಿಳಿಸಿದರು.

ಎಸ್.ಡಿ.ಆರ್.ಎಫ್. ಮತ್ತು ಎನ್.ಡಿ.ಆರ್.ಎಫ್. ಅಡಿ ಎಷ್ಟು ಹಣ ಲಭ್ಯವಾಗಲಿದೆ ಎಂಬ ಬಗ್ಗೆ ಅಂದಾಜು ಮಾಡಿ, ಮಳೆಯಿಂದ ಆಗಿರುವ ಹಾನಿಗೆ ಸೂಕ್ತ ಪರಿಹಾರ ದೊರಕಿಸುವಂತೆ ತಿಳಿಸಿದ ಸಚಿವರು, ತಾತ್ಕಾಲಿಕವಾಗಿ ಕೈಗೊಳ್ಳಬೇಕಾದ ಕ್ರಮಗಳನ್ನು ಯಾವುದೇ ವಿಳಂಬವಿಲ್ಲದೆ ಕೈಗೊಳ್ಳುವಂತೆ ಮತ್ತು ಶಾಶ್ವತ ಕಾಮಗಾರಿ ಕೈಗೊಳ್ಳಲು ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದರು.

ನೀರು ತೆರವುಗೊಳಿಸಲು ಸೂಚನೆ: ಭಾಲ್ಕಿ ತಾಲೂಕಿನ ಕೆಲವು ಪ್ರದೇಶಗಳಲ್ಲಿ ಶಾಲೆಗಳೂ ಜಲಾವೃತವಾಗಿವೆ. 2–3 ಅಡಿ ನೀರು ನಿಂತಿದ್ದು, ಮಕ್ಕಳು ಶಾಲೆಗೆ ಹೋಗಲಾಗದ ಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಈ ನೀರನ್ನು ತೆರವು ಮಾಡಲು ಮತ್ತು ಮುಂದಿನ ದಿನಗಳಲ್ಲಿ ಈ ರೀತಿ ಸಮಸ್ಯೆ ಎದುರಾಗದಂತೆ ಸೂಕ್ತ ಕ್ರಮ ವಹಿಸಲು ಹಾಗೂ ಅಗತ್ಯ ಇರುವ ಕಡೆ ಕಾಳಜಿ ಕೇಂದ್ರ ತೆರೆಯಲು ತಿಳಿಸಿದರು.

ನೌಬಾದ್– ಹೈದ್ರಾಬಾದ್ ರಿಂಗ್ ರಸ್ತೆ (ಗಡಿವರೆಗೆ) ಕಾಮಗಾರಿಯನ್ನು ಚರಂಡಿಯಿಂದ ಚರಂಡಿಯವರೆಗೆ ಕೈಗೊಳ್ಳಲು ಮತ್ತು ಈ ರಸ್ತೆಯಲ್ಲಿ ಸಾರ್ವಜನಿಕ ಉಪಯೋಗಕ್ಕೆ ಸ್ಥಳ ಬಿಟ್ಟು ಎಷ್ಟು ಕಿಲೋಮೀಟರ್ ರಸ್ತೆ ಅಭಿವೃದ್ಧಿಪಡಿಸಬೇಕಾಗುತ್ತದೆ ಎಂಬು ಸಮೀಕ್ಷೆ ನಡೆಸಿ, ಕೂಡಲೇ ಕಾಮಗಾರಿ ಆರಂಭಿಸಲು ಸೂಚಿಸಿದರು.

ಶಾಲೆ ದುರಸ್ತಿಗೆ ಸೂಚನೆ: ಅನಾಹುತ ಸಂಭವಿಸಿದರೆ ಅಧಿಕಾರಿಗಳೇ ಹೊಣೆ– ಈಶ್ವರ ಖಂಡ್ರೆ: ಬೀದರ್ ಜಿಲ್ಲೆಯಲ್ಲಿ ಇರುವ ಸರ್ಕಾರಿ ಶಾಲೆಗಳ ಕಟ್ಟಡದ ಸ್ಥಿತಿಗತಿಯ ಬಗ್ಗೆ ಕೂಡಲೇ ಅಧ್ಯಯನ ಆಗಬೇಕು. ಸೋರುತ್ತಿರುವ ಕಟ್ಟಡಗಳನ್ನು ತತ್ ಕ್ಷಣವೇ ದುರಸ್ತಿ ಮಾಡಬೇಕು. ಶಿಥಿಲವಾಗಿದ್ದರೆ, ಆ ಕಟ್ಟಡ ಕೆಡವು ಹೊಸ ಕಟ್ಟಡ ಕಟ್ಟಬೇಕು. ಇದಕ್ಕೆ ಹಣದ ಕೊರತೆ ಇಲ್ಲ. ತುರ್ತು ಕ್ರಮ ವಹಿಸದೆ ಯಾವುದೇ ಸರ್ಕಾರಿ ಶಾಲಾ ಕಟ್ಟಡದಲ್ಲಿ ಅನಾಹುತ ಸಂಭವಿಸಿದರೆ ಸಂಬಂಧಿತ ಬಿಇಓ ಮತ್ತು ಡಿಡಿಪಿಐಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದ ಸಚಿವರು, ಅಂಗನವಾಡಿಗೂ ಇದೇ ನಿಯಮ ಅನ್ವಯಿಸುತ್ತದೆ. ಹೊಸ ಅಂಗನವಾಡಿ ಕಟ್ಟಡಗಳ ಗುಣಮಟ್ಟದ ಪರೀಕ್ಷೆ ಮಾಡುವಂತೆ ಮತ್ತು ಶಾಸಕರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ತಿಳಿಸಿದರು.

ಸಾಂಕ್ರಾಮಿಕ ರೋಗ ತಡೆಗೂ ಸೂಚನೆ: ಮಳೆ ಬಂದು, ಮನೆಗೆ ನೀರು ನುಗ್ಗಿದ ಬಳಿಕ ತೇವಾಂಶದಿಂದ ನಾನಾ ರೀತಿಯ ಸೋಂಕು ಮತ್ತು ಸಾಂಕ್ರಾಮಿಕ ಕಾಯಿಲೆ ಹರಡುತ್ತದೆ. ವೈರಲ್ ಜ್ವರವೂ ಹೆಚ್ಚುತ್ತದೆ ಜಿಲ್ಲಾಡಳಿತ ಹೆಚ್ಚು ಮಳೆಯಾಗಿರುವ ಪ್ರದೇಶಗಳಲ್ಲಿ ನೀರು ನಿಂತು ಸೊಳ್ಳೆಗಳಿಂದ ಸಮುದಾಯ ಆರೋಗ್ಯ ಕೆಡದಂತೆ ಎಚ್ಚರಿಕೆ ವಹಿಸಬೇಕು. ಸಾಂಕ್ರಾಮಿಕ ರೋಗ ಹಬ್ಬದಂತೆ ಎಚ್ಚರಿಕೆ ವಹಿಸಬೇಕು. ತಪಾಸಣೆ ಮಾಡಬೇಕು ಎಂದು ತಿಳಿಸಿದರು.

ಎ.ಎನ್.ಎಂ. ಕೇಂದ್ರ, ಆಸ್ಪತ್ರೆ ಕಟ್ಟಡಗಳು ಶಿಥಿಲವಾಗಿದ್ದರೆ ಅಥವಾ ಸೋರುತ್ತಿದ್ದರೆ ಕೂಡಲೇ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಎಲ್ಲ ಪಿಡಿಓಗಳು, ಸಬ್ ಇನ್ಸ್ ಪೆಕ್ಟರ್ ಗಳು, ತಾಲೂಕು ಮತ್ತು ಪ್ರಾಥಮಿಕ ಆರೋಗ್ಯಾಧಿಕಾರಿಗಳು ತಮ್ಮ ಕೇಂದ್ರ ಸ್ಥಾನದಲ್ಲೇ ರಾತ್ರಿ ವಾಸ್ತವ್ಯ ಮಾಡುವಂತೆ, ಒಂದೊಮ್ಮೆ ಒಬ್ಬ ಪಿಡಿಓಗೆ ಎರಡು ಮೂರು ಗ್ರಾಮ ಪಂಚಾಯ್ತಿ ಜವಾಬ್ದಾರಿ ನೀಡಿದ್ದರೆ ಹೆಚ್ಚು ಸಮಸ್ಯೆ ಇರುವ ಗ್ರಾಮದಲ್ಲಿ ಇರುವಂತೆ ತಿಳಿಸಿ ಎಂದರು. ಜೊತೆಗೆ ಈಗಾಗಲೇ ವರ್ಗಾವಣೆಗೊಂಡಿರುವ ಅಧಿಕಾರಿಗಳ ಜಾಗಕ್ಕೆ ನಿಯೋಜಿತರಾದ ಅಧಿಕಾರಿ ಬಂದು ಹೊಣೆ ವಹಿಸಿಕೊಳ್ಳುವವರೆಗೆ ಬಿಡುಗಡೆ ಮಾಡದಂತೆಯೂ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ನೀರಾವರಿ ಯೋಜನೆಯ ಡಿಪಿಆರ್ ಮಾಡದ ಎಂಜಿನಿಯರುಗಳನ್ನು ತರಾಟೆಗೆ ತೆಗೆದುಕೊಂಡ ಸಚಿವರು, ಈ ಸಭೆಯಲ್ಲಿ ಸೂಚಿಸಿದ ಕಾರ್ಯ ಮಾಡದಿದ್ದರೆ ಶಿಸ್ತುಕ್ರಮ ಜರುಗಿಸುವ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಹಜ್ ಮತ್ತು ಪೌರಾಡಳಿತ ಸಚಿವ ರಹೀಂ ಖಾನ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಚಾಲನಾ ಪಥ ಉದ್ಘಾಟಿಸಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ

7 ಸ್ವಂತ ಕಛೇರಿ ಕಟ್ಟಡವನ್ನು ವೆಚ್ಚ ರೂ. 45.74 ಕೋಟಿಗಳಲ್ಲಿ ಹೊಂದಿದೆ. ಖಖಿಔ 8 ಸ್ವಂತ ಕಟ್ಟಡ ಕಛೇರಿಗಳು ನಿರ್ಮಾಣ ವೆಚ್ಚ ರೂ. 70.00 ಕೋಟಿಗಳು ಕಾಮಗಾರಿ ಪ್ರಗತಿಯಲ್ಲಿದೆ. ಮಧುಗಿರಿ ಮತ್ತು ಹೊನ್ನಾವರ ಕಛೇರಿ ಕಟ್ಟಡಗಳ ಕಾಮಗಾರಿಗಳನ್ನು ಒಟ್ಟು ರೂ.10.05 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲಾಗಿದ್ದು. ಶೀಘ್ರದಲ್ಲಿಯೇ ಪ್ರಾರಂಭಿಸಲಾಗುವುದು ಎಂದು ಸಾರಿಗೆ ಇಲಾಖೆ ಮಾಹಿತಿ ನೀಡಿದೆ.ಸ್ವಯಂ ಚಾಲಿತ ಪರೀಕ್ಷಾ ಪಥಗಳ ನಿರ್ಮಾಣ ಕಾಮಗಾರಿ, 9 ಡ್ರೈವಿಂಗ್ ಟ್ರ್ಯಾಕ್ ವೆಚ್ಚ ರೂ.44.21 ಕೋಟಿಗಳು ನಿರ್ಮಿಸಲಾಗಿದೆ. 28 ಡ್ರೈವಿಂಗ್ ಟ್ರ್ಯಾಕ್ ಕಾಮಗಾರಿ ಪ್ರಗತಿಯಲ್ಲಿದ್ದು, ಒಟ್ಟು ವೆಚ್ಚ ರೂ.203 ಕೋಟಿಗಳಾಗಲಿದೆ, ಹೊನ್ನಾವರ, ಚಾಮರಾಜನಗರ ಮತ್ತು ಚಿತ್ರದುರ್ಗ ಗಳಲ್ಲಿ ರೂ.21 ಕೋಟಿಗಳ ವೆಚ್ಚದಲ್ಲಿ ಡ್ರೈವಿಂಗ್ ಟ್ರ್ಯಾಕ್ ನಿರ್ಮಾಣ ಕೈಗೊಳ್ಳಲು ಉದ್ದೇಶಿಸಿದೆ ಎಂದು ಇಲಾಖೆ ಇಳಿಸಿದೆ.

ಸ್ವಯಂ ಚಾಲಿತ ವಾಹನ ಪರೀಕ್ಷಾ ಕೇಂದ್ರ ಸ್ಥಾಪನೆಗೆ ಕ್ರಮ:

ರಾಜ್ಯದಲ್ಲಿ ಜಿಲ್ಲೆಗೆ ಒಂದರಂತೆ ಪಿ.ಪಿ.ಪಿ. ಅಡಿ 32 ಸ್ಥಳಗಳಲ್ಲಿ ಸ್ವಯಂ ಚಾಲಿತ ವಾಹನ ಪರೀಕ್ಷಾ ಕೇಂದ್ರ ಸ್ಥಾಪಿಸಲು ಉದ್ದೇಶಿಸಲಾಗಿದೆ.ಭಾರಿ ವಾಹನ ಚಾಲಕರ ತರಬೇತಿ ಕೇಂದ್ರಗಳು ರಾಜ್ಯದಲ್ಲಿ ಗುಣಮಟ್ಟದ ಚಾಲಕರನ್ನು ತರಬೇತಿಗೊಳಿಸುವ ನಿಟ್ಟಿನಲ್ಲಿ ಭಾರಿ ವಾಹನ ಚಾಲಕರ 4 ತರಬೇತಿ ಕೇಂದ್ರಗಳನ್ನು ರೂ. 60.76 ಕೋಟಿಗಳಲ್ಲಿ ಸ್ಥಾಪಿಸಲಾಗಿದೆ. 1 ತರಬೇತಿ ಕೇಂದ್ರ ಕಾಮಗಾರಿ ಪ್ರಗತಿಯಲ್ಲಿದ್ದು, ಅದರ ವೆಚ್ಚ 6.50 ಕೋಟಿ ಗಳಾಗಿದೆ.ಇದರೊಂದಿಗೆ, ವಿಜಯಪುರ, ಬಳ್ಳಾರಿ ಮತ್ತು ನಾಗಮಂಗಲ ಗಳಲ್ಲಿ ಭಾರಿ ವಾಹನ ಚಾಲಕರ ತರಬೇತಿ ಕೇಂದ್ರಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ಮಾಹಿತಿ ನೀಡಿದ್ದಾರೆ.ಈ ಕಾರ್ಯಕ್ರಮದಲ್ಲಿ ಆಹಾರ,ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್.ಮುನಿಯಪ್ಪ,ಶಾಸಕರಾದ ರೂಪಾ ಶಶಿಧರ್,ನಾರಾಯಣಸ್ವಾಮಿ ನಾರಾಯಣ ಸ್ವಾಮಿ, ಮಾಜಿ ಶಾಸಕರು, ಸಾರಿಗೆ ಆಯುಕ್ತರು, ವ್ಯವಸ್ಥಾಪಕ ನಿರ್ದೇಶಕರು ಉಪಸ್ಥಿತರಿದ್ದರು.

# ಸಚಿವ ರಹೀಮ್ ಖಾನ್ ಭೇಟಿ

ಅಲಿಯಂಬರ್, ಜನವಾಡ, ಚಾಂಬೋಳ್ ಹಾಗೂ ಶ್ರೀಮಂಡಲ ಸೇರಿದಂತೆ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು. ಭಾರೀ ಮಳೆಯಿಂದಾಗಿ ರೈತರ ಹೊಲಗಳಲ್ಲಿ ಬೆಳಯಲಾದ ಹೆಸರು, ಸೋಯಾಬೀನ್, ಟೊಮೆಟೊ ಸಂಪೂರ್ಣವಾಗಿ ನಾಶವಾಗಿವೆ ಮತ್ತು ವಿವಿಧ ಸ್ಥಳಗಳಲ್ಲಿ ಅನೇಕ ಮನೆಗಳು ಕುಸಿದಿವೆ.

ಪ್ರತಿಯೊಂದು ವಿಪತ್ತು ಮತ್ತು ಹಾನಿಯ ವರದಿ ಮಾಡಲು ಮತ್ತು ರೈತರಿಗೆ ಸಕಾಲದಲ್ಲಿ ಪರಿಹಾರ ನೀಡಲು ಅಂತರ ಇಲಾಖಾ ಸಮೀಕ್ಷೆಯನ್ನು ಮಾಡಲು ಅಧಿಕಾರಿಗಳಿಗೆ ನಿರ್ದೇಶಿಸಿದರು.

ನಂತರ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರೊಂದಿಗೆ ಜಿಲ್ಲೆಯ ಜೀವನಾಡಿಯಾದ ಕಾರಂಜಾ ಜಲಾಶಯಕ್ಕೆ ಭೇಟಿ ನೀಡಿ, ಅಧಿಕಾರಿಗಳೊಂದಿಗೆ ಜಲಾಶಯದ ಸ್ಥಿತಿಯ ಬಗ್ಗೆ ಚರ್ಚಿಸಿದರು. ಪ್ರಸ್ತುತ 7 ಟಿಎಂಸಿ ಸಾಮರ್ಥ್ಯದ ಜಲಾಶಯ ಸಂಪೂರ್ಣವಾಗಿ ತುಂಬಿದೆ, 10 ಸಾವಿರ ಕ್ಯೂಸೆಕ್ ನೀರು ಒಳಹರಿವು ಮತ್ತು 13 ಸಾವಿರ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ.

ನಿಯಮಗಳ ಪ್ರಕಾರ ಜಲಾಶಯದ ಸ್ಥಿತಿಯನ್ನು ಕಾಪಾಡಿಕೊಳ್ಳಲು ಮತ್ತು ಜನರ ಜೀವ ಮತ್ತು ಆಸ್ತಿಗೆ ಯಾವುದೇ ಅಪಾಯವಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು.

# ಜಸ್ಟೀಸ್ ಬಿ ವೀರಪ್ಪ ಆಕ್ರೋಶ

ಕಳವಳ: ಹಿಂದಿನ ಜನರಲ್ಲಿದ್ದ ಆ ಕೆಚ್ಚು, ರೊಚ್ಚು ಈಗಿನ ಜನರಲ್ಲಿ ಇಲ್ಲ. ಸ್ವಾತಂತ್ರ್ಯದ ಸಂದರ್ಭ 100ಕ್ಕೆ 95 ಜನ ದೇಶಭಕ್ತರು ಇದ್ದರು. ಈಗಿನ ಪರಿಸ್ಥಿತಿ ಬೇರೆಯಾಗಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ನಮ್ಮ ದೇಶದಲ್ಲಿ ಶಿಕ್ಷಣದ ಪ್ರಮಾಣವು ಶೇ.18 ರಷ್ಟು ಇತ್ತು. ಈಗ ಅದರ ಪ್ರಮಾಣ ಶೇ.80ರಷ್ಟು ಹೆಚ್ಚಾಗಿದೆ. ಆದರು ನಾವು ಜನರಿಗೆ ಪೂರ್ಣ ಪ್ರಮಾಣದಲ್ಲಿ ಸ್ಪಂದಿಸುತ್ತಿಲ್ಲ ಎನ್ನುವ ನೋವು ನನಗಿದೆ ಎಂದು ಉಪ ಲೋಕಾಯುಕ್ತರು ಕಳವಳ ವ್ಯಕ್ತಪಡಿಸಿದರು.

ಒಬ್ಬ ಯೋಧ ತೀರಿದರೆ ಆತನ ಹೆಂಡತಿ ವಿಧವೆಯಾಗುತ್ತಾಳೆ. ಆತನ ಮಕ್ಕಳು ತಬ್ಬಲಿಯಾಗುತ್ತಾರೆ. ಅವರ ಕುಟುಂಬ ಅತಂತ್ರವಾಗುತ್ತದೆ. ಅನೇಕ ಯೋದರು ಗಡಿಭಾಗದಲ್ಲಿ ನಿಮಿಷ ನಿಮಿಷಕ್ಕೂ ಸಾಯುತ್ತಿದಾರೆ. ಅವರ ಪ್ರಾಣಾರ್ಪಣೆಯಿಂದ ನಮ್ಮ ರಕ್ಷಣೆ ಆಗುತ್ತಿದೆ. ಆದರೆ ನಾವು ನಮ್ಮ ಸ್ವಾರ್ಥಕೋಸ್ಕರ ದೇಶ ಹಾಳು ಮಾಡುತಿದ್ದೇವೆ ಎಂದು ತಿಳಿಸಿದರು.ಸುಳ್ಳು ಅರ್ಜಿಗೆ ಮಾನ್ಯ ಮಾಡಲ್ಲ: ಲೋಕಾಯುಕ್ತ ಕಚೇರಿಯಲ್ಲಿ 25 ಸಾವಿರ ಕೇಸ್ ಪೆಂಡಿಂಗ್ ಇದೆ. ರಾಜ್ಯದ 7 ಕೋಟಿ ಜನರಿಗೆ ಲೋಕಾಯುಕ್ತರ ಸಂಖ್ಯೆ ಬೆರಳೆಣಿಕೆಯಷ್ಟಿದೆ. ರಾಜ್ಯದೆಲ್ಲೆಡೆ ಸುತ್ತಿ ನಾವು ದೂರುಗಳ ವಿಲೆಗೆ ಶಕ್ತಿ ಮೀರಿ ಪ್ರಯತ್ನಿಸುತ್ತಿದ್ದೇವೆ. ಸುಖಾಸುಮ್ಮನೆ ಕಾಡುವ, ವೈಯಕ್ತಿಕ ಹಿತಾಸಕ್ತಿಯ ಅರ್ಜಿಗಳಿಗೆ ನಾವು ಮಾನ್ಯ ಮಾಡುವುದಿಲ್ಲ. ನ್ಯಾಯಯುತ ಅರ್ಜಿಗಳಿಗೆ ನಾವು ಪ್ರಾಮಾಣಿಕವಾಗಿ ಸ್ಪಂದಿಸುತ್ತೇವೆ ಎಂದು ತಿಳಿಸಿದ ಉಪ ಲೋಕಾಯುಕ್ತರು, ಸುಳ್ಳು ಅರ್ಜಿದಾರರಿಗೆ ಕಲಂ 20ರಡಿ ಜೈಲು ಮತ್ತು ದಂಡ ಶಿಕ್ಷೆಗೆ ಗುರಿಪಡಿಸುತ್ತೇವೆ. ಪ್ರಾಮಾಣಿಕವಾಗಿ ಕೆಲಸ ಮಾಡುವ ಅಧಿಕಾರಿಗಳು ಮತ್ತು ಸಿಬ್ಬಂದಿಯು ಲೋಕಾಯುಕ್ತ ಎಂದಾಕ್ಷಣ ಹೆದರಬಾರದು ಎಂದರು.

# 2.5 ಲಕ್ಷ ಕೋಟಿ ನಷ್ಟ : ಸಚಿವ ಕೃಷ್ಣ ಬೈರೇಗೌಡ

ಪ್ರಮಾಣದಲ್ಲಿ ಆದಾಯ ಖೋತಾ ಆಗಬಹುದು ಎಂಬ ಅಂದಾಜಿನ ಕುರಿತು ಕೇಂದ್ರ ಸರ್ಕಾರ ಈವರೆಗೆ ಯಾವುದೇ ಮಾಹಿತಿ ನೀಡಿಲ್ಲ. ಕೆಲವು ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳು ರಾಜ್ಯಗಳಿಗೆ ಭಾಗಶಃ 85 ಸಾವಿರ ಕೋಟಿಯಿಂದ 2.5 ಲಕ್ಷ ಕೋಟಿ ವರೆಗೆ ನಷ್ಟ ಉಂಟಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಿವೆ. ರಾಜ್ಯ ಸರ್ಕಾರಗಳಿಗೆ ಆದಾಯ ನಷ್ಟ ಉಂಟಾದರೆ ಕೇಂದ್ರ ಸರ್ಕಾರಕ್ಕೂ ನಷ್ಟವಾಗಲಿದೆ. ಹೀಗಾಗಿ, ಜಿಎಸ್ಟಿ ಸ್ಥಿರಗೊಳ್ಳುವ ವರೆಗೆ ಕೇಂದ್ರ ಸರ್ಕಾರ ತಮ್ಮ ಖಜಾನೆಯಿಂದ ಒಂದು ರೂಪಾಯಿಯನ್ನೂ ನೀಡುವ ಅಗತ್ಯವಿಲ್ಲ. ಬದಲಿಗೆ ಜಿಎಸ್ಟಿ ಕೌನ್ಸಿಲ್ ಪರಿಧಿಯಲ್ಲೇ ಪ್ರತಿಯೊಂದು ರಾಜ್ಯಗಳಿಗೂ ಪರಿಹಾರ ನೀಡಲಿ ಎಂದು ಒತ್ತಾಯಿಸಿದರು.

ಕೇಂದ್ರದ ಆದಾಯದಲ್ಲಿ ಜಿಎಸ್ಟಿ ಪಾಲು ಕೇವಲ ಶೇ. 28ರಷ್ಟು ಮಾತ್ರ. ಉಳಿದ ಶೇ.72ರಷ್ಟು ಆದಾಯವನ್ನು ಕೇಂದ್ರ ವಿವಿಧ ಮೂಲಗಳಿಂದ ಗಳಿಸುತ್ತದೆ. ನೇರ ತೆರಿಗೆ, ಆದಾಯ ತೆರಿಗೆ, ಕಸ್ಟಮ್ಸ್, ಡೆವಿಡೆಂಟ್ ಹಾಗೂ ವಿವಿಧ ಸೆಸ್‌ಗಳು ಕೇಂದ್ರದ ಆದಾಯದ ಮೂಲ. ಸೆಸ್ ಮೂಲಕವೇ ಕೇಂದ್ರ ಸರ್ಕಾರ ಶೇ.17 ರಿಂದ ಶೇ.20 ರಷ್ಟು ಆದಾಯ ಗಳಿಸುತ್ತದೆ. ಸೆಸ್ ಆದಾಯದಲ್ಲಿ ಒಂದು ರೂಪಾಯಿಯನ್ನೂ ಸಹ ಕೇಂದ್ರ ಸರ್ಕಾರ ರಾಜ್ಯಗಳ ಜೊತೆ ಹಂಚಿಕೊಳ್ಳುವುದಿಲ್ಲ. ಆದರೆ, ರಾಜ್ಯಗಳ ಆದಾಯದಲ್ಲಿ ಜಿಎಸ್ಟಿ ಪಾಲು ಶೇ.50 ರಷ್ಟು. ಹೀಗಾಗಿ, ಅಭಿವೃದ್ಧಿಗಾಗಿ ಹಾಗೂ ಆದಾಯ ಸಂಗ್ರಹಣೆಗೆ ರಾಜ್ಯಗಳು ಜಿಎಸ್ಟಿಯನ್ನೇ ನೆಚ್ಚಿಕೊಂಡಿವೆ. ಇಂತಹ ಸಂದರ್ಭದಲ್ಲಿ ರಾಜ್ಯಗಳ ಆದಾಯದ ಶೇ.20ರಷ್ಟು ನಷ್ಟವಾದರೆ ರಾಜ್ಯಗಳ ಆರ್ಥಿಕ ಸ್ವಾಯತ್ತತೆ ಪ್ರಶ್ನಾರ್ಥಕವಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

ಜಿಎಸ್ಟಿಯನ್ನು ಪರಿಚಯಿಸುವಾಗ ಈ ನೂತನ ತೆರಿಗೆ ವ್ಯವಸ್ಥೆ ಆರ್ಥಿಕ ಚಟುವಟಿಕೆಗಳನ್ನು ಪ್ರೋತ್ಸಾಹಿಸುತ್ತದೆ ಎನ್ನಲಾಗಿತ್ತು. ಇದು ನಿಜವಾಗಿದ್ದರೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಆದಾಯ ದುಪ್ಪಟ್ಟಾಗಬೇಕಿತ್ತು. ಆದರೆ, ಕಳೆದ 7–8 ವರ್ಷಗಳ ಅನುಭವದಲ್ಲಿ ಈ ಹೇಳಿಕೆ ಸುಳ್ಳು ಎಂದು ಸಾಬೀತಾಗಿದೆ. ಪ್ರತಿ ವರ್ಷವೂ ಎಲ್ಲಾ ರಾಜ್ಯಗಳ ನಿವ್ವಳ ಆದಾಯ ಗಣನೀಯವಾಗಿ ಇಳಿಯುತ್ತಲೇ ಇದೆ. ಜಿಎಸ್ಟಿ ಗೆ ಮುನ್ನ ವ್ಯಾಟ್ ಅಡಿಯಲ್ಲಿ ತೆರಿಗೆ ಸಂಗ್ರಹಿಸುತ್ತಿದ್ದ ಕಾಲದಲ್ಲಿ ದೇಶದ ಜಿಡಿಪಿಗೆ ವ್ಯಾಟ್ ಕೊಡುಗೆ ಶೇ 6.1 ರಷ್ಟು ಇತ್ತು. ಆದರೆ, ಈಗ ಜಿಎಸ್ಟಿ ಜಾರಿಯಾದ ಬಳಿಕ ಈ ಪ್ರಮಾಣ ಈವರೆಗೆ ಶೇ. 6.1 ಕ್ಕೆ ತಲುಪಲಾಗಿಲ್ಲ. ಪ್ರಸ್ತುತ ಜಿಡಿಪಿಗೆ ಜಿಎಸ್ಟಿ ಕೊಡುಗೆ ಕೇವಲ ಶೇ. 5.9 ರಷ್ಟು ಮಾತ್ರ. ಒಟ್ಟರೆ ಜಿಎಸ್ಟಿಯಿಂದಾಗಿ ರಾಜ್ಯ ಹಾಗೂ ಕೇಂದ್ರಕ್ಕೆ ಆದಾಯ ನಷ್ಟವಾಗುತ್ತಿರುವುದು ಸ್ಪಷ್ಟವಾಗಿದೆ ಎಂದರು.

ಜಿಎಸ್ಟಿ ತೆರಿಗೆ ವ್ಯವಸ್ಥೆಯನ್ನು 2017ರಲ್ಲಿ ಪರಿಚಯಿಸುವಾಗ ಕೇಂದ್ರ ಸರ್ಕಾರ ಜಿಎಸ್ಟಿ ಸ್ಥಿರಗೊಳ್ಳುವವರೆಗೆ ರಾಜ್ಯಗಳಿಗೆ ತೆರಿಗೆ ನಷ್ಟ ಪರಿಹಾರ ನೀಡಬೇಕು ಎಂದು ಹೇಳಿತ್ತು. ಆದರೆ, ಪರಿಹಾರ ವ್ಯವಸ್ಥೆಯನ್ನು 2022ಕ್ಕೆ ತೆಗೆದುಹಾಕಲಾಗಿತ್ತು. ಪರಿಣಾಮ ಬಹುಪಾಲು ರಾಜ್ಯಗಳು ಶೇ.25 ರಷ್ಟು ಆದಾಯ ನಷ್ಟ ಎದುರಿಸಿದ್ದವು. ರಾಜ್ಯಗಳ ಆದಾಯ ಶೇ.25 ರಷ್ಟು ಕುಸಿಯುತ್ತಿದ್ದ ಸಂದರ್ಭದಲ್ಲಿ ಜಿಎಸ್ಟಿ ಸ್ಥಿರಗೊಂಡಿದೆ ಎಂದು ನೀವು ಹೇಗೆ ಹೇಳುತ್ತೀರಿ? ಎಂದು ಪ್ರಶ್ನಿಸಿದ ಸಚಿವ ಕೃಷ್ಣ ಬೈರೇಗೌಡ ಅವರು, ಜಿಎಸ್ಟಿ ಸರಳೀಕರಣ ವ್ಯವಸ್ಥೆ ಜಾರಿಯಾಗಿ ರಾಜ್ಯಗಳ ಆದಾಯ ಹಾಗೂ ಜಿಎಸ್ಟಿ ಸ್ಥಿರಗೊಳ್ಳುವವರೆಗೆ ಜಿಎಸ್ಟಿ ಕೌನ್ಸಿಲ್ ಪರಿಹಾರ ನೀಡಲಿ ಎಂದು ಒತ್ತಾಯಿಸಿದರು.

ನಾವು ತೆರಿಗೆ ಸರಳೀಕರಣದ ಪರ ಇದ್ದೇವೆ. ಆದರೆ, ರಾಜ್ಯದ ಆದಾಯವನ್ನೂ ಕಾಪಾಡಬೇಕು. ಸಂವಿಧಾನ 2/3 ಜನರ ಯೋಗಕ್ಷೇಮ ಹಾಗೂ ಅಭಿವೃದ್ಧಿ ಕರ್ತವ್ಯವನ್ನು ರಾಜ್ಯಕ್ಕೆ ನೀಡಿದೆ. ಆದರೆ, 2/3 ರಷ್ಟು ಆದಾಯವನ್ನು ಕೇಂದ್ರಕ್ಕೆ ನೀಡಿದೆ. ಈ ನಿಯಮ ರಾಜ್ಯಗಳ ಸುಸ್ಥಿರ ಅಭಿವೃದ್ಧಿಗೆ ಮಾರಕ. ಹೆಚ್ಚಿನ ಪ್ರಮಾಣದ ಅಭಿವೃದ್ಧಿ ಕೆಲಸಗಳನ್ನು ರಾಜ್ಯಗಳೇ ಮಾಡಬೇಕು. ಆದರೆ, ಆದಾಯ ಮಾತ್ರ ಕೇಂದ್ರದ ಪಾಲಾದರೆ ರಾಜ್ಯದ ಅಭಿವೃದ್ಧಿ ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಅವರು, ಸಾರ್ವಜನಿಕರೂ ಸಹ ಅವರ ಯೋಗಕ್ಷೇಮದ ಬೇಡಿಕೆ ಹಾಗೂ ಅಭಿವೃದ್ಧಿ ಅಗತ್ಯತೆಗಳಿಗೆ ರಾಜ್ಯ ಸರ್ಕಾರಗಳನ್ನೇ ಅವಲಂಭಿಸಿದ್ದಾರೆ. ಕೇಂದ್ರಗಳ ಕೊಡುಗೆಯೂ ಇದೆ. ಆದರೆ, ರಾಜ್ಯ ಸರ್ಕಾರಗಳ ಕಾರ್ಯಕ್ರಮಗಳೇ ಅಧಿಕ.

ರಾಜ್ಯಗಳಿಗೆ ಅಧಿಕ ನಷ್ಟವಾದರೆ ಅಂತಿಮವಾಗಿ ಜನಸಾಮಾನ್ಯರು ಸಂಕಷ್ಟಕ್ಕೆ ಒಳಗಾಗುತ್ತಾರೆ. ರಾಜ್ಯಗಳ ಸ್ವಾಯತ್ತತೆ ತುಂಬಾ ಮುಖ್ಯವಾದ ವಿಚಾರ. ಪ್ರತಿಯೊಂದು ರಾಜ್ಯಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸುಸ್ಥಿರ ಆದಾಯ ಅತ್ಯಂತ ಮುಖ್ಯ. ಆದರೆ, ಆದಾಯ ಕೊರತೆ ಉಂಟಾಗಿ ಸ್ವಂತ ಸರ್ಕಾರ ನಡೆಸಲು ಕೇಂದ್ರದ ಕಡೆ ಕೈಚಾಚುವಂತಾದರೆ ರಾಜ್ಯಗಳ ಸ್ವಾಯತ್ತೆ ಎಂಬ ಪದವೇ ಅರ್ಥ ಕಳೆದುಕೊಳ್ಳುತ್ತದೆ. ಸಹಕಾರಿ ಒಕ್ಕೂಟವಾದ ಪದಗಳಲ್ಲಿ ಮಾತ್ರವಲ್ಲದೆ ಕೆಲಸದಲ್ಲೂ ಚಾಲ್ತಿ ಇದ್ದರೆ ಮಾತ್ರ ಸ್ವಾಯತ್ತತೆ ಉಳಿಯಲು ಸಾಧ್ಯ ಎಂದರು.

## ಒಪ್ಪಂದಕ್ಕೆ ಭಾರತ-ಜಪಾನ್ ಸಹಿ

ಜಪಾನ್ ಏರೋಸ್ಪೇಸ್ ಪರಿಶೋಧನಾ ಸಂಸ್ಥೆ ರೋವರ್ ಅನ್ನು ಅಭಿವೃದ್ಧಿಪಡಿಸುತ್ತದೆ ಮತ್ತು ಇಸ್ರೋ ಲ್ಯಾಂಡರ್ ಅನ್ನು ಕೊಡುಗೆಯಾಗಿ ನೀಡುತ್ತದೆ.

ಇಸ್ರೋ, ಚಂದ್ರನ ಲ್ಯಾಂಡರ್ ಅನ್ನು ಅಭಿವೃದ್ಧಿಪಡಿಸುವುದರ ಜೊತೆ–ಗೆ, ಚಂದ್ರನ ಧ್ರುವ ಪ್ರದೇಶದಲ್ಲಿ ಕಾಯ್ದಿರಿಸಿದ ಬಾಷ್ಪಶೀಲ ವಸ್ತುಗಳ ಪರಿಶೋಧನೆ ಮತ್ತು ಸ್ಥಳದಲ್ಲೇ ವಿಶ್ಲೇಷಣೆಗಾಗಿ ಮಿಷನ್‌ಗಾಗಿ ಕೆಲವು ವೈಜ್ಞಾನಿಕ ಉಪಕರಣಗಳನ್ನು ಅಭಿವೃದ್ಧಿಪಡಿಸುವ ಜವಾಬ್ದಾರಿ ಹೊಂದಿದೆ.

## ಚಿಕ್ಕಸೂಗುರ ಬಳಿಯ ಜಲ ಶುದ್ಧೀಕರಣ ಘಟಕಕ್ಕೆ ಉಪ ಲೋಕಾಯುಕ್ತರ ಭೇಟಿ

ರಾಯಚೂರು ಆ 29: ಚಿಕ್ಕಸೂಗುರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇವರ ಅಧೀನದಲ್ಲಿ ನಿರ್ಮಿಸಲಾದ 10.00 ಎಂಎಲ್ ಡಿ ಸಾಮರ್ಥ್ಯದ ಜಲ ಶುದ್ಧೀಕರಣ ಘಟಕಕ್ಕೆ ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಆಗಸ್ಟ್ 29ರಂದು ಬೆಳಗ್ಗೆ ಭೇಟಿ ನೀಡಿದರು.ಅಲ್ಲಿನ ಪ್ರಯೋಗಾಲಯದಲ್ಲಿನ ಕೆಮಿಕಲ್, ಸಾಮಗ್ರಿ ಮತ್ತು ಇನ್ನಿತರ ಘಟಕಗಳ ವೀಕ್ಷಣೆ ನಡೆಸಿ ನೀರು ಶುದ್ಧೀಕರಣದ ವಿಧಾನಗಳ ಬಗ್ಗೆ ಮಾಹಿತಿ ಪಡೆದು–ಕೊಂಡರು.

ಈ ಘಟಕದಿಂದ ರಾಯಚೂರ ಸಿಟಿಗೆ ಪ್ರತಿ ದಿನ 40 ಎಂಎಲ್ ಡಿ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಅಲ್ಲಿನ ಅಧಿಕಾರಿಗಳು ಮತ್ತು ಸಿಬ್ಬಂದಿ ತಿಳಿಸಿದರು.ನೀರು ಶುದ್ಧೀಕರಿಸಲು ಬಳಸುವ ಆಲಂ ಮತ್ತು ಬ್ಲಿಚಿಂಗ್ ಪೌಡರನ್ನು ಉಪ ಲೋಕಾಯುಕ್ತರು ಇದೆ ವೇಳೆ ಪರಿಶೀಲಿಸಿದರು.ಕೃಷ್ಣ ನದಿ ನೀರಿನ ಸದ್ಯದ ಸ್ಥಿತಿ, ನೀರಿನ ಪರೀಕ್ಷೆ ಸೇರಿದಂತೆ ನಾನಾ ಮಾಹಿತಿ ಪಡೆದುಕೊಂಡರು.ಶಿಸ್ತಿನ ಪಾಠ: ಜಲ ಶುದ್ದೀಕರಣ ಘಟಕದಲ್ಲಿ ನಿತ್ಯ ಕೆಲಸ ಮಾಡುವ ಸಿಬ್ಬಂದಿಗೆ ಇದೆ ವೇಳೆ ಉಪ ಲೋಕಾಯುಕ್ತರು ಆರೋಗ್ಯದ ಪಾಠ ಮಾಡಿದರು. ಘಟಕದಲ್ಲಿ ಶುಚಿತ್ವ ಇರಬೇಕು. ಕಾಲಾವಧಿ ನೋಡಿ ವಸ್ತುಗಳ ಬಳಕೆ ಮಾಡಬೇಕು. ವೈಯಕ್ತಿಕ ಆರೋಗ್ಯದ ಬಗ್ಗೆ ಕೂಡ ಗಮನ ಹರಿಸಬೇಕು ಎಂದು ಸಲಹೆ ಮಾಡಿದರು.

ಈ ವೇಳೆ ಗೌರವಾನ್ವಿತ ಹಿರಿಯ ದಿವಾಣಿ ನ್ಯಾಯಾಧೀಶರಾದ ಹೆಚ್ ಎ ಸಾತ್ವಿಕ್, ಬೆಂಗಳೂರಿನ ಉಪ ಲೋಕಾಯುಕ್ತ ಕಚೇರಿಯ ಅಪರ ನಿಬಂಧಕರಾದ ರಮಾಕಾಂತ ಚವ್ಹಾಣ್, ಶಿವಾಜಿ ಅನಂತ ನಲವಾಡೆ, ಉಪ ನಿಬಂಧಕರಾದ ಅರವಿಂದ, ರಾಯಚೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಬಿ.ಚಿಟುಗುಬ್ಬಿ, ಕರ್ನಾಟಕ ಲೋಕಾಯುಕ್ತದ ಡಿಎಸ್ಪಿಗಳಾದ ರವಿ ಪುರುಷೋತ್ತಮ, ವಸಂತಕುಮಾರ, ಪೊಲೀಸ್ ನಿರೀಕ್ಷಕರಾದ ಕಾಳಪ್ಪ ಬಡಿಗೇರ, ಚಂದ್ರಪ್ಪ, ಸುನೀಲ್ ಮೇಗಲಮನಿ, ಶೈಲಜಾ, ನಾಗರತ್ನ ಹಾಗೂ ಲೋಕಾಯುಕ್ತ ಕಚೇರಿಯ ಸಿಬ್ಬಂದಿ ಇದ್ದರು.

# ಬುಲೆಟ್ ರೈಲು ಓಡಲಿದೆ: ಪ್ರಧಾನಿ ಮೋದಿ

ಮುಂಬೈ–ಅಹಮದಾಬಾದ್ ಬುಲೆಟ್ ರೈಲು ಯೋಜನೆಯ ಹೊರತಾಗಿ, ದೇಶದಲ್ಲಿ 7,000 ಕಿ.ಮೀ ಉದ್ದದ ಹೈ ಸ್ಪೀಡ್ ರೈಲು (ಬುಲೆಟ್ ರೈಲು) ಜಾಲವನ್ನು ನಿರ್ಮಿಸುವುದು ಗುರಿಯಾಗಿದೆ ಎಂದು ಹೇಳಿದರು.

ಜಪಾನ್‌ನ ಪತ್ರಿಕೆ 'ಯೋಮಿಯುರಿ ಶಿಂಬುನ್'ಗೆ ನೀಡಿದ ಸಂದರ್ಶನದಲ್ಲಿ ಪ್ರಧಾನಿ ಮೋದಿ, ಅದರಲ್ಲಿ ಹೆಚ್ಚಿನದನ್ನು 'ಮೇಕ್ ಇನ್ ಇಂಡಿಯಾ' ಮೂಲಕ ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು. ಆದ್ದರಿಂದ ಈ ಕಾರ್ಯಕ್ರಮವು ಸುಸ್ಥಿರ ಮತ್ತು ಪ್ರಾಯೋಗಿಕವಾಗಿರುತ್ತದೆ. "ಈ ಪ್ರಯತ್ನದಲ್ಲಿ ಜಪಾನಿನ ಕಂಪನಿಗಳ ಸಕ್ರಿಯ ಭಾಗವಹಿಸುವಿಕೆಯನ್ನು ನಾನು ಸ್ವಾಗತಿಸುತ್ತೇನೆ. ಭಾರತ–ಜಪಾನ್ ಸಹಕಾರವು ಹೈಸ್ಪೀಡ್ ರೈಲಿನ ಜೊತೆಗೆ ಬಂದರುಗಳು, ವಾಯುಯಾನ, ಹಡಗು ನಿರ್ಮಾಣ, ರಸ್ತೆ ಸಾರಿಗೆ, ರೈಲ್ವೆಗಳು ಮತ್ತು ಲಾಜಿಸ್ಟಿಕ್ಸ್ ಸೇರಿದಂತೆ ಇತರ ಸಾರಿಗೆ ಕ್ಷೇತ್ರಗಳನ್ನು ಸಂಪರ್ಕಿಸುವ ಸಾಮರ್ಥ್ಯವನ್ನು ಹೊಂದಿದೆ ಎಂದು ಅವರು ಗಮನಸೆಳೆದರು. ಅಲ್ಲಿ ಭಾರತವು ಮಹತ್ವಾಕಾಂಕ್ಷೆಯ ಉಪಕ್ರಮಗಳನ್ನು ತೆಗೆದುಕೊಂಡಿದೆ. ಸ್ಪಷ್ಟವಾಗಿ, ಈ ಕ್ಷೇತ್ರಗಳಲ್ಲಿ ಜಪಾನ್‌ನ ತಾಂತ್ರಿಕ ಪ್ರಗತಿ, ಭಾರತದ ವಿಸ್ತಾರ, ಉತ್ಪಾದನೆ ಮತ್ತು ನಾವೀನ್ಯತೆ ಶಕ್ತಿಯೊಂದಿಗೆ ಸೇರಿ, ಎರಡೂ ಕಡೆಯವರಿಗೆ ಅಪಾರ ಮೌಲ್ಯವನ್ನು ಸೃಷ್ಟಿಸಬಹುದು ಎಂದು ಮೋದಿ ಹೇಳಿದರು.

ರೈಲು ಜಾಲದ ಜೊತೆಗೆ ಬಾಹ್ಯಾಕಾಶ ಪರಿಶೋಧನಾ ಕ್ಷೇತ್ರದಲ್ಲಿ ಜಪಾನ್ ಭಾರತದ ದೊಡ್ಡ ಪಾಲುದಾರನಾಗಲಿದೆ. ಈ ಸಂದರ್ಭದಲ್ಲಿ, ಭಾರತದ ಬಾಹ್ಯಾಕಾಶ ಪ್ರಯಾಣವು ನಮ್ಮ ವಿಜ್ಞಾನಿಗಳ ದೃಢನಿಶ್ಚಯ, ಕಠಿಣ ಪರಿಶ್ರಮ ಮತ್ತು ನಾವೀನ್ಯತೆಯ ಕಥೆಯಾಗಿದೆ ಎಂದು ಪ್ರಧಾನಿ ಹೇಳಿದರು. ಈಗ ಇಸ್ರೋ ಜೊತೆಗೆ ಜಪಾನ್‌ನ ಬಾಹ್ಯಾಕಾಶ ಸಂಸ್ಥೆ ಬಾಹ್ಯಾಕಾಶದಲ್ಲಿ ಹೊಸ ಅಧ್ಯಾಯವನ್ನು ಸೇರಿಸಲಿದೆ ಎಂದರು.

ಭಾರತ ಮತ್ತು ಜಪಾನ್ ನಡುವಿನ ರಕ್ಷಣಾ ಕ್ಷೇತ್ರದಲ್ಲಿ ಸಹಕಾರವು ಯಶಸ್ಸಿನ ದೊಡ್ಡ ಕಥೆಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಇಂಡೋ–ಪೆಸಿಫಿಕ್ ಪ್ರದೇಶದ ಶಾಂತಿ, ಭದ್ರತೆ ಮತ್ತು ಸ್ಥಿರತೆಯಲ್ಲಿ ಎರಡೂ ದೇಶಗಳು ಸಾಮಾನ್ಯ ಆಸಕ್ತಿಯನ್ನು ಹೊಂದಿವೆ. ಇಂದು ನಮ್ಮ ಪಾಲುದಾರಿಕೆ ಮೂರು ಸೇನೆಗಳಿಗೆ ವಿಸ್ತರಿಸುತ್ತದೆ. ನಾವು ನಿಯಮಿತವಾಗಿ ದ್ವಿಪಕ್ಷೀಯ ಮತ್ತು ಅಂತರರಾಷ್ಟ್ರೀಯ ಸಭೆಗಳನ್ನು ನಡೆಸುತ್ತೇವೆ. ನಾವು ಬಹುಪಕ್ಷೀಯ ವ್ಯಾಯಾಮಗಳನ್ನು ನಡೆಸುತ್ತೇವೆ. ನಾವು ಬಲವಾದ ರಕ್ಷಣಾ ಉಪಕರಣಗಳು ಮತ್ತು ತಾಂತ್ರಿಕ ಸಹಕಾರವನ್ನು ನಿರ್ಮಿಸುತ್ತಿದ್ದೇವೆ ಎಂದರು.

ಆರ್ಥಿಕ ಪಾಲುದಾರಿಕೆಯು ಭಾರತ–ಜಪಾನ್ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯ ಪ್ರಮುಖ ಸ್ತಂಭಗಳಲ್ಲಿ ಒಂದಾಗಿದೆ ಎಂದು ಪ್ರಧಾನಿ ಹೇಳಿದರು. ವಿಶ್ವದ ಪ್ರಮುಖ ಆರ್ಥಿಕತೆಗಳಾಗಿ, ನಾವು ಪರಸ್ಪರರ ಬೆಳವಣಿಗೆ, ಸ್ಪರ್ಧಾತ್ಮಕತೆ ಮತ್ತು ಚೈತನ್ಯಕ್ಕೆ ಕೊಡುಗೆ ನೀಡುತ್ತಿದ್ದೇವೆ. ಪೀಳಿಗೆಯಿಂದ ಭಾರತದ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಜಪಾನ್ ವಿಶ್ವಾಸಾರ್ಹ ಪಾಲುದಾರನಾಗಿದ್ದು, ಆಟೋಮೋಟಿವ್, ಎಲೆಕ್ಟ್ರಾನಿಕ್ಸ್, ದೂರಸಂಪರ್ಕ, ರಾಸಾಯನಿಕಗಳು, ಹಣಕಾಸು ಮತ್ತು ಔಷಧದಂತಹ ಪ್ರಮುಖ ಕ್ಷೇತ್ರಗಳಲ್ಲಿ ಭಾರತಕ್ಕೆ ವಿದೇಶಿ ನೇರ ಹೂಡಿಕೆಯ ಪ್ರಮುಖ ಮೂಲವಾಗಿದೆ ಎಂದು ಮೋದಿ ಹೇಳಿದರು.

ಮುಂದಿನ ದಶಕದಲ್ಲಿ ಜಪಾನ್ ಭಾರತದಲ್ಲಿ 10 ಟ್ರಿಲಿಯನ್ ಹೂಡಿಕೆ ಮಾಡಲಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಮುಂದಿನ ದಶಕದಲ್ಲಿ ಭಾರತ ಜಪಾನ್‌ನೊಂದಿಗೆ ಗುರಿಯನ್ನು ನಿಗದಿಪಡಿಸಿದೆ. ಭಾರತದಲ್ಲಿ ಜಪಾನಿನ ಕಂಪನಿಗಳ ಸಂಖ್ಯೆ ಸ್ಥಿರವಾಗಿ ಸುಮಾರು 1,500ಕ್ಕೆ ಏರಿದೆ ಮತ್ತು 400ಕ್ಕೂ ಹೆಚ್ಚು ಭಾರತೀಯ ಕಂಪನಿಗಳು ಜಪಾನ್‌ನಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಪ್ರಧಾನಿ ಮೋದಿ ಹೇಳಿದರು. ಇದು ಕೇವಲ ಆರಂಭ, ನಿಜವಾದ ಸಾಧ್ಯತೆಗಳು ಇದಕ್ಕಿಂತ ಹೆಚ್ಚಿನದಾಗಿದೆ. ನಾವು ದೊಡ್ಡ ಗುರಿಯನ್ನು ಹೊಂದಿರಬೇಕು ಮತ್ತು ಮಹತ್ವಾಕಾಂಕ್ಷೆಯನ್ನು ಹೊಂದಿರಬೇಕು. ನಮಗೆ ಪ್ರಮುಖ ವ್ಯಾಪಾರ ಸಂಬಂಧಗಳಿವೆ. ಹೊಸ ಪ್ರಯತ್ನಗಳೊಂದಿಗೆ ನಾವು ನಮ್ಮ ವ್ಯಾಪಾರ ವಲಯವನ್ನು ವೈವಿಧ್ಯಗೊಳಿಸಬಹುದು. ಅದನ್ನು ಹೆಚ್ಚು ಸಮತೋಲಿತಗೊಳಿಸಬಹುದು ಮತ್ತು ಹೊಸ ಕ್ಷೇತ್ರಗಳನ್ನು ತೆರೆಯಬಹುದು ಎಂದು ನನಗೆ ವಿಶ್ವಾಸವಿದೆ ಎಂದರು.

# ಬಸವಣ್ಣನವರ ವಚನಗಳು ಅಖಂಡ ಕಾವ್ಯ



ಕಲಬುರಗಿ:ಅ.29:ಬಸವಣ್ಣನವರ ಒಂದೊಂದು ವಚನಗಳು ಅಖಂಡ ಕಾವ್ಯ,ಮಹಾಕಾವ್ಯ,ಮಹಾಗ್ರಂಥವಾಗಿವೆ. ಅವರ ವಚನಗಳು ಇಂದಿಗೂ ಪ್ರಸ್ತುತವಾಗಿದ್ದು, ವ್ಯಕ್ತಿಯ ಬದು–ಕಿಗೆ ಮಾರ್ಗದರ್ಶನ ನೀಡುವ ಜೀವನ ಸಂವಿಧಾನದಂತಿದೆ ಎಂದು ನಿವೃತ್ತ ಪ್ರಾಧ್ಯಾಪಕ ಡಾ.ನಾಗೇಂದ್ರ ಮಸೂತಿ ಹೇಳಿದರು.ಅಖಿಲ ಭಾರತ ಶಿವಾನುಭವ ಮಂಟಪ ಶರಣಬಸವೇಶ್ವರ ದೇವಸ್ಥಾನದಲ್ಲಿ ಶುಕ್ರವಾರ ಶ್ರಾವಣ ಮಾಸದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣ ವಿಷಯದ ಶೀರ್ಷಿಕೆ ಅಡಿಯಲ್ಲಿ ಬಸವಣ್ಣನವರ ವಚನ ಸಂಹಿತೆ ಎಂಬ ವಿಷಯ ಕುರಿತು ಮಾತನಾಡಿದರು.ಬಸವಣ್ಣನವರ ವಚನ ಸಂಹಿತೆಯು ಶರಣ ಸಂಸ್ಕೃತಿಯನ್ನು, ಸಮಾನತೆ, ಸಾರ್ವತ್ರಿಕ ಸತ್ಯ ಮತ್ತು ಮಾನವತಾವಾದದ ತತ್ವಗಳನ್ನು ಪ್ರತಿಪಾದಿಸುವ, ಕ್ರಾಂತಿಕಾರಿ ಮತ್ತು ಪ್ರಗತಿಶೀಲ ಸಾಹಿತ್ಯವಾಗಿದೆ. ಅವರ ವಚನಗಳು ಜಾತಿ, ವರ್ಗ, ಮತ್ತು ಲಿಂಗಭೇದಗಳನ್ನು ನಿರಾಕರಿಸಿ, ಸಮಾಜದಲ್ಲಿ ಎಲ್ಲರೂ ಸಮಾನರು ಎಂದು ಸಾರುತ್ತವೆ. ಹುಟ್ಟಿನಿಂದ ಯಾರು ಶ್ರೇಷ್ಠರಲ್ಲ, ಕೀಳು ಅಲ್ಲ. ಎಲ್ಲರೂ ಸಮಾನರು ಎಂಬ ವಿಚಾರವನ್ನು ಬಸವಣ್ಣನವರು ತಮ್ಮ ವಚನಗಳಲ್ಲಿ ಸ್ಪಷ್ಟವಾಗಿ ಹೇಳಿದ್ದಾರೆ. ವಚನಗಳ ಮೂಲಕ ಸಾಮಾಜಿಕ ಅಸಮಾನತೆ, ಜಾತಿ ವ್ಯವಸ್ಥೆಯನ್ನು ವಿರೋಧಿಸಿ, ಎಲ್ಲರೂ ಸಮಾನರು ಎಂಬ ಹೊಸ ಸಮಾಜದ ಅಡಿಪಾಯ ಹಾಕಿದರು. ಬಸವಣ್ಣನವರ ವಚನಗಳು ವಿಶ್ವದ ಸಾಹಿತ್ಯದ ಸಾಲಿನಲ್ಲಿ ಗಟ್ಟಿಯಾಗಿ ನಿಲ್ಲುವ ಪ್ರಜಾ ಸಾಹಿತ್ಯ ಮತ್ತು ಪ್ರಗತಿಶೀಲ ಸಾಹಿತ್ಯವಾಗಿದೆ. ಇದು ಮಾನವ ಸಮುದಾಯಕ್ಕೆ ದಿಕ್ಕು ತೋರಿಸುವ ಜೀವನ ದರ್ಶನ ನೀಡಿದೆ. ಕಾಯಕವೇ ಕೈಲಾಸ ಎಂಬ ತತ್ವವನ್ನು ತಮ್ಮ ವಚನಗಳಲ್ಲಿ ಸಾರಿದ್ದಾರೆ. ಶರಣರು ಕಾಯಕದಲ್ಲಿ ತೊಡಗಿಸಿಕೊಂಡು, ತಮ್ಮ ಬದುಕನ್ನು ಸತ್ಯಶುದ್ಧತೆಯಿಂದ ನಡೆಸಬೇಕೆಂಬುದನ್ನು ಬೋಧಿಸಿದರು. ಬಸವಣ್ಣನವರು ತಮ್ಮ ವಿಚಾರಗಳನ್ನು ವಚನಗಳ ಮೂಲಕ ಸಮಾಜಕ್ಕೆ ತಂದು, ಹೊಸ ಬೆಳಕನ್ನು ನೀಡಿದರು. ಲೌಕಿಕ ಸಂಪತ್ತಿಗಿಂತ ಆತ್ಮಶ್ರೀಮಂತಿಕೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿದ್ದಾರೆ. ಅವರ ವಚನಗಳು ಅನುಭಾವ ಸಾಹಿತ್ಯವಾಗಿದ್ದು, ಮಾನವೀಯ ಮೌಲ್ಯಗಳನ್ನು ಬೆಳೆಸಿದೆ ಎಂದು ಹೇಳಿದರು.ನಂತರ ಸಂಚಾಲಕ ಡಾ.ಶಿವರಾಜ ಶಾಸ್ತ್ರಿ ಹೇರೂರ್ ಮಾತನಾಡಿ, ವಚನ ಸಂಹಿತೆ ಮಾನವ ದರ್ಶನ ಸೂತ್ರವಾಗಿವೆ. ಮನುಷ್ಯ ಮನುಷ್ಯರ ಸಂಬಂಧ ಗಟ್ಟಿಯಾಗಬೇಕು, ಗೌರವಿಸಬೇಕು. ಅವರ ಎಲ್ಲ ವಚನಗಳು ಸಂಹಿತೆಯನ್ನು ಮೀರಿಲ್ಲ. ವಚನ ಸಾಹಿತ್ಯವು ಎಂದೆಂದಿಗೂ ಪ್ರಸ್ತುತವಾಗಿವೆ. ಮೌಲ್ಯಗಳನ್ನು ಕಟ್ಟಿ ಕೊಟ್ಟಿದ್ದಾರೆ. ಅವರ ವಚನಗಳಲ್ಲಿ ಲೌಕಿಕ ಸಂಪತ್ತು ಎಷ್ಟೇ ಇದ್ದರೂ ಪರಹಿತಕ್ಕಾಗಿ, ದಾಸೋಹಹಿತಕ್ಕಾಗಿ ಬಳಕೆಯಾಗಬೇಕು ಎಂದು ಹೇಳಿರುವರು ಎಂದರು. ಪತ್ರಿಕೋದ್ಯಮ ವಿಭಾಗದ ಡಾ.ಸುನೀತಾ ಪಾಟೀಲ ಮಾತನಾಡಿದರು.

## ಡೋಣಗಾಂವ:ಹೌವಗಿ ಸ್ವಾಮಿ ಪಲ್ಲಕ್ಕಿ ಉತ್ಸವ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.29: ತಾಲೂಕಿನ ಡೋಣಗಾಂವ(ಎಂ )ಗ್ರಾಮದ ಆರಾಧ್ಯ ದೈವರಾದ ಹೌವಗಿಸ್ವಾಮಿ ದೇವರ ಪಲ್ಲಕ್ಕಿ ಉತ್ಸವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತ್ತು.

ಡೋಣಗಾಂವ(ಎಂ )ದ ಹೌವಾಗಿ ಸ್ವಾಮಿ ಮಠದಲ್ಲಿ ನಿರಂತರವಾಗಿ ಸಾಗುವ ಭಜನೆ ಕಾರ್ಯಕ್ರಮ ನಡೆದು ಬೆಳಗಿನ ಜಾವ 6 ಘಂಟೆಗೆ ಹಾವಾಗಿ ಸ್ವಾಮಿ ದೇವರ ಪಲ್ಲಕ್ಕಿ ಉತ್ಸವಕ್ಕೆ ಶ್ರೀ ಶಂಭುಲಿಂಗ ಶಿವಾಚಾರ್ಯರು ಚಾಲನೆ ನೀಡಿದರು.

ಹೌವಾಗಿ ಸ್ವಾಮಿ ಮಠದಿಂದ ಹನುಮಾನ ಮಂದಿರ ,ಮಹಾದೇವ ಮಂದಿರ ಮಾರ್ಗವಾಗಿ ಅಗ್ನಿಕುಂಡಕ್ಕೆ ಸಾಗಿ ಬಂತು ಅಲ್ಲಿ ನೇರದ ಭಕ್ತರ ಸಮ್ಮುಖದಲ್ಲಿ ವಿಧಿ ವಿಧಾನಗಳೊಂದಿಗೆ ಪೂಜೆ ಪುನಸ್ಕಾರಗಳು ಸಾಗಿದ ನಂತರ ಪಲ್ಲಕ್ಕಿ ಮರಳಿ ದೇವಸ್ಥಾನಕ್ಕೆ ಬಂದು ತಲುಪಿತು.

ವರ್ಷಕ್ಕೊಮ್ಮೆ ನಡೆಯುವ ಭಕ್ತಿ ಭಾವದಿಂದ ಜರುಗುವ ಕಾರ್ಯಕ್ರಮ ಗ್ರಾಮದ ಪ್ರಮುಖ ಹಾದಿಬೀದಿಗಳಲ್ಲಿ ಸಾಗುವಾಗ ತಮ್ಮ ಮನೆ ಬಾಗಿಲಿನಿಂದ ಭಕ್ತರು ಹೊರಬಂದು ತೆಂಗಿನ ಕಾಯಿ ಕರ್ಪೂರ ಊದಕಡ್ಡಿ ಪೂಜೆ ಮಾಡಿ ಪುನೀತರಾದರು.

ಶಂಭುಲಿಂಗ ಶ್ರೀಗಳು ಪ್ರತಿಸ್ಥಾಪಿಸಿದ್ದ ಹಾವಗಿ ಸ್ವಾಮಿ ಮೂರ್ತಿ ಪಲ್ಲಕ್ಕಿಯಲ್ಲಿ ಇರಿಸಿ ವಿಶೇಷ ಪೂಜೆ ಮಾಡಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಮೆರವಣಿಗೆ ದಾರಿ ಉದ್ದಕ್ಕೂ 'ಓಂ ಭಲಾ ಶಂಕರ ಭಲಾ" ಜೈ ಘೋಷ ಮಾಡುತ್ತ ಹೆಜ್ಜೆಗೆ ಹೆಜ್ಜೆ ಹಾಕುತ್ತಾ ಭಕ್ತರು ಕುಣಿದು ಕುಪ್ಪಳಿಸಿದರು.

. ಈ ಜಾತ್ರೆಯಲ್ಲಿ, ಮಹಾರಾಷ್ಟ್ರ, ತೆಲಂಗಾಣ, ಅಂದ್ರಾಪ್ರದೇಶದ ಭಕ್ತರು ಅಲ್ಲದೆ ಮಹಿಳೆಯರು ಯುವಕರು ಮೆರವಣಿಯಲ್ಲಿ ಪಾಲ್ಗೊಂಡಿದರು, ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತು .

ಹಣೆಗಾಂವದ ಶ್ರೀಗಳು ಕೌಳಾಸ ಶ್ರೀಗಳು ಹೌವಾಗಿ ಸ್ವಾಮಿ ಮಠದ ಗುರುಗಳಾದ, ಉಮಾಕಾಂತ ದೇಶಿಕರು, ಸಮ್ಮುಖದಲ್ಲಿ ಕಾರ್ಯಕ್ರಮವು ಯಶಸ್ವಿಗೊಳಿಸಲಾಯಿತು.

ಈ ಸಂದರ್ಭದಲ್ಲಿ

ಗ್ರಾಮದ ಹಿರಿಯರಾದ ಅಪ್ಪಸಾಬ ದೇಶಮುಖ, ಶೈಲೆಸ ದೇಶಮುಖ ಅಶೋಕ್ ದೇವರ್ಸೆ ಮಹಾಂತೇಶ್ ದೇವರ್ಸೆ, ಸೈನಿಕ ಮಲ್ಲಿಕಾರ್ಜುನ ಹೊಂಡಾಳೆ, ಪರಮೇಶ ಮಠಪತಿ, ಗಣೇಶ ಕಾರಗಾಂವೆ, ಪ್ರವೀಣ್ ಹೊಂಡಾಳೆ, ಸಂಗಮೇಶ್ ಹೊಂಡಾಳೆ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆ. 31 ರಂದು "ಧರ್ಮಸ್ಥಳ ಸತ್ಯ ಯಾತ್ರೆ




ಕಲಬುರಗಿ :ಅ.29: ಶ್ರೀ ಕ್ಷೇತ್ರ ಧರ್ಮಸ್ಥಳ ವಿರುದ್ಧ ನಡೆಯುತ್ತಿರುವ ಅಪಪ್ರಚಾರ, ಷಡ್ಯಂತ್ರ ಹಾಗೂ ಸುಳ್ಳು ಆರೋಪಗಳ ವಿರುದ್ಧ ಜಾತ್ಯತೀತ ಜನತಾದಳ ವತಿಯಿಂದ ಧರ್ಮಸ್ಥಳ ಸತ್ಯಯಾತ್ರೆ ಕೈಗೊಳ್ಳಲಾಗಿದೆ ಎಂದು ಜೆಡಿಎಸ್ ಪಕ್ಷದ ಕಲಬುರಗಿ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ ಅವರು ತಿಳಿಸಿದರು.

ಇದೇ ಭಾನುವಾರ 31 ರಂದು ಧರ್ಮಸ್ಥಳಕ್ಕೆ ಜೆಡಿಎಸ್ ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ ಕುಮಾರಸ್ವಾಮಿ ನೇತೃತ್ವದಲ್ಲಿ ಜೆಡಿಎಸ್ ಪಕ್ಷದ ನಾಯಕರು ಕಾರ್ಯಕರ್ತರ ಭೇಟಿ ನೀಡಲಿದ್ದೇವೆ. ಧರ್ಮಸ್ಥಳಕ್ಕೆ ಅಪಮಾನ ಆಗುವ ತರ ಕೆಲವೊಂದು ಹೆಜ್ಜೆ ಈ ಸರ್ಕಾರ ಇಟ್ಟಿದೆ. ನಮ್ಮ ಪಕ್ಷ ಶಾಸಕರು, ಮಾಜಿ ಶಾಸಕರು, ಮುಖಂಡರು, ಕಾರ್ಯಕರ್ತರು ಧರ್ಮಸ್ಥಳ ಸತ್ಯ ಯಾತ್ರೆ ಮಾಡಿ, ವೀರೇಂದ್ರ ಹೆಗ್ಗಡೆ ಭೇಟಿ ಮಾಡಿ ಅವರಿಗೆ ಬೆಂಬಲ ನೀಡುತ್ತೇವೆ ಎಂದು ಹೇಳಿದರು.

800 ವರ್ಷಗಳ ಇತಿಹಾಸವಿರುವ ಪುಣ್ಯಕ್ಷೇತ್ರ ಧರ್ಮಸ್ಥಳ. ಕೋಟ್ಯಾಂತರ ಭಕ್ತರು ಶ್ರೀ ಕ್ಷೇತ್ರಕ್ಕೆ ಹೋಗ್ತಾರೆ. ಧರ್ಮಸ್ಥಳದಲ್ಲಿ ಧರ್ಮ, ನ್ಯಾಯವಿದೆ ಇಂತಹ ಶ್ರೀ ಕ್ಷೇತ್ರ ಬಗ್ಗೆ ಪಿತೂರಿ ನಡೆದಿದೆ. ಇದರ ಹಿಂದೆ ಒಂದು ಸಂಘಟನೆ ಇದೆ ಎಂದು ಆರೋಪಿಸಿದರು

ಧರ್ಮಸ್ಥಳ ಪ್ರಕರಣದಲ್ಲಿ ಸರ್ಕಾರ ತನಿಖೆ ಯಾವ ರೀತಿ ಮಾಡಿದ್ದಾರೆ. ಪಾರದರ್ಶಕವಾಗಿ ತನಿಖೆ ನಡೆಯಿದೀಯ.? ಇದರ ಹಿಂದೆ ಯಾರಿದ್ದಾರೆ. ಈ ಎಪಿಸೋಡ್ ಹಿಂದೆ ಇರುವ ಕಥೆ, ಚಿತ್ರಕಥೆ, ನಿರ್ಮಾಪಕ ಯಾರು ಅಂತ ಪತ್ತೆ ಮಾಡಬೇಕು. ಇದನ್ನ ಪತ್ತೆ ಮಾಡಬೇಕಾದರೆ ಎನ್‌ಐಎ ತನಿಖೆ ನಡೆಯಬೇಕು. ಧರ್ಮಸ್ಥಳ ಮಂಜುನಾಥನಿಗೆ ಕೋಟ್ಯಾಂತರ ಭಕ್ತರು ಇದ್ದಾರೆ. ನಾವು ಅವರ ಜೊತೆ ಇದ್ದೇವೆ ಎಂದು ಅವರು ಹೇಳಿದರು.

ಧರ್ಮಸ್ಥಳ ಯಾತ್ರೆಯಲ್ಲಿ ಯಾವುದೇ ರಾಜಕೀಯ ಇಲ್ಲ. ಪಕ್ಷಾತೀತವಾಗಿ ಈ ಯಾತ್ರೆ ಕೈಗೊಂಡಿದ್ದೇವೆ. ಇದ್ರಲ್ಲಿ ಯಾವುದೇ ರಾಜಕೀಯವಿಲ್ಲ. ಧರ್ಮಸ್ಥಳಕ್ಕೆ ದೊಡ್ಡ ಸಂಖ್ಯೆಯಲ್ಲಿ ಭೇಟಿ ನೀಡುತ್ತೇವೆ. ವೀರೇಂದ್ರ ಹೆಗ್ಗಡೆ ಮತ್ತು ಅವರ ಕುಟುಂಬಕ್ಕೆ ಒಂದುವರೆ ತಿಂಗಳಿಂದ ಮಾನಸಿಕ ಹಿಂಸೆ ನೀಡಿದ್ದರು. ಆದರೆ ಅವರ ಕುಟುಂಬದವರು ತಾಳ್ಮೆ ಮತ್ತೆ ಸಹನೆಯಿಂದ ನಡೆದುಕೊಂಡಿದ್ದಾರೆ. ನಾವು ಅವರ ಜೊತೆ ನಿಲ್ಲುತ್ತೇವೆ ಹೆಗ್ಗಡೆ ಕುಟುಂಬಕ್ಕೆ ಜೆಡಿಎಸ್ ಬೆಂಬಲವಿದೆ ಎಂದರು.

ಕಳೆದ ಹಲವಾರು ದಿನಗಳಿಂದ ಧರ್ಮಸ್ಥಳ ಕ್ಷೇತ್ರದ ಬಗ್ಗೆ ಅಪಮಾನ ಹಾಗೂ ಹಲವಾರು ಅನುಮಾನಗಳಿಗೆ ರಾಜ್ಯ ಸರ್ಕಾರ ಎಡೆ ಮಾಡಿಕೊಟ್ಟಿದೆ. ತರಾತುರಿಯಲ್ಲಿ ಎಸ್‌ಐಟಿ ರಚನೆ ಮಾಡಿದೆ. ಧರ್ಮಸ್ಥಳ ವಿಚಾರವಾಗಿ ಒಂದು ತಂಡವಾಗಿ ಪಿತೂರಿ ಮಾಡಿದ್ದನ್ನು ನೋಡಿದ್ದೇವೆ. ಒಬ್ಬ ಹೇಳಿಕೆಯನ್ನ ಪರಿಗಣಿಸಿ ಎಸ್‌ಐಟಿ ಯನ್ನ ಯಾಕೆ ರಚನೆ ಮಾಡಿದ್ರು.? ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಸ್ಕ್ ಮ್ಯಾನ್ ಬಂದು ಒಂದು ಬುರುಡೆ ಇದೆ. ಅನೇಕ ಕೊಲೆಗಳಾಗಿವೆ ಅಂತ ಹೇಳಿದ್ರೆ. ಅವನ ಮಾತು ಕೇಳಿ ಸರ್ಕಾರ ಎಸ್‌ಐಟಿ ರಚನೆ ಮಾಡ್ತಾರೆ. 17 ಕಡೆ ಅಗಿದಿದ್ದಾರೆ, ಆ ನಂತರ ಮಾಸ್ಕ್ ಮ್ಯಾನ್ ಉಲ್ಟಾ ಹೊಡೆದಿದ್ದಾನೆ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು.

ಧರ್ಮಸ್ಥಳ ಬಗ್ಗೆ ಯೂಟ್ಯೂಬರ್ಸ್‌ಗಳು ನಿರಂತರವಾಗಿ ಸುದ್ದಿ ಮಾಡಿದ್ದಾರೆ. ಇದರ ಹಿಂದೆ ಹಣ ಖರ್ಚು ಮಾಡಿದರ ಬಗ್ಗೆ ತನಿಖೆ ಆಗಬೇಕು. ಅದರಲ್ಲಿ ಸರ್ಕಾರ ಅರ್ಧ ಸತ್ಯ ಹೇಳಿದೆ ಚರ್ಚೆ ಮಾಡುತ್ತಿದ್ದಾರೆ. ಆದರೆ ಸರ್ಕಾರ 1% ಎಸ್‌ಐಟಿ ತನಿಖೆ ಬಗ್ಗೆ ಸತ್ಯ ಹೇಳಿಲ್ಲ. ಈ ಷಡ್ಯಂತ್ರದ ಹಿಂದೆ ಇರೋರನ್ನ ಪತ್ತೆ ಮಾಡಬೇಕಾದ್ರೆ ಎನ್‌ಐಎ ತನಿಖೆ ಮಾಡಬೇಕೆಂದು ಒತ್ತಾಯಿಸಿದರು.

ಆಗಸ್ಟ್ 31ರಂದು ಧರ್ಮಸ್ಥಳ ಸತ್ಯ ಯಾತ್ರೆ ಆರಂಭವಾಗುತ್ತೆ. ಮೊದಲಿಗೆ ಹಾಸನದಲ್ಲಿ ಸೆಂಟ-ರ್ ಮಾಡಿದ್ದೇವೆ. ರಾಜ್ಯಾದ್ಯಂತ ಮುಖಂಡರು, ಕಾರ್ಯಕರ್ತರು ಆಗಮಿಸಲಿದ್ದಾರೆ. ಅಲ್ಲಿ ತಿಂಡಿ ವ್ಯವಸ್ಥೆ ಮಾಡಲಾಗಿದೆ. ಅಲ್ಲಿಂದ ನೇತ್ರಾವತಿಗೆ ಹೋಗಿ ಅಲ್ಲಿಂದ ಪಾದಯಾತ್ರೆ ಮಾಡ್ತೇವೆ. ಅಲ್ಲಿ ವೇದಿಕೆ ರಚನೆ ಮಾಡಿದ್ದೇವೆ. ಅಲ್ಲಿಂದ ಕೆಲವು ಸಂದೇಶ ನೀಡುತ್ತೇವೆ ಎಂದು ತಿಳಿಸಿದರು.

# ಶಾಹೀನ್ ನಗರದಲ್ಲಿ ಪಾಸ್‌ಪೋರ್ಟ್ ಮೇಳ ಇಂದು



ಮಲ್ಲಮ್ಮ ನುಡಿ ವಾರ್ತೆ ಬೀದರ. ಆ. 29 : ಅಂಚೆ ಇಲಾಖೆ ಹಾಗೂ ಬೀದರ್ ಬೆಟರ್‌ಮೆಂಟ್ ಫೌಂಡೇಷನ್ ವತಿಯಿಂದ ಇಲ್ಲಿಯ ಶಹಾಪುರ ಗೇಟ್ ಸಮೀಪದ ಶಾಹೀನ್ ನಗರದ ಅಬ್ದುರ್ ರಹಮಾನ್ ಮಲ್ಟಿಪರ್ಪೋಸ್ ಹಾಲ್‌ನಲ್ಲಿ ಆ. 30 ರಂದು ಬೆಳಿಗ್ಗೆ 10 ರಿಂದ ಸಂಜೆ 5 ರ ವರೆಗೆ ಪಾಸ್‌ಪೋರ್ಟ್ ಮೇಳ ನಡೆಯಲಿದೆ.

ಪಾಸ್‌ಪೋರ್ಟ್‌ಗೆ ಮಧ್ಯವರ್ತಿಗಳಿಂದ ಆಗುವ ತೊಂದರೆ ತಪ್ಪಿಸುವುದು ಹಾಗೂ ಸುಲಭವಾಗಿ ಪಾಸ್‌ಪೋರ್ಟ್ ಪಡೆಯಲು ಜನರಿಗೆ ನೆರವಾಗುವುದು ಮೇಳ ಆಯೋಜನೆಯ ಉದ್ದೇಶವಾಗಿದೆ ಎಂದು ಶಾಹೀನ್ ಪದವಿಪೂರ್ವ ವಿಜ್ಞಾನ ಕಾಲೇಜಿನಲ್ಲಿ ಶುಕ್ರವಾರ ನಡೆದ ಮೇಳದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಬೀದರ್ ಅಂಚೆ ಅಧೀಕ್ಷಕ ವಿ.ಎಲ್. ಚಿತಕೋಟೆ ತಿಳಿಸಿದರು.

ಮೇಳದಲ್ಲಿ ಪಾಸ್‌ಪೋರ್ಟ್‌ಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗುವುದು. ಸರಿಯಾದ ದಾಖಲೆ ಇರುವ ಪಾಸ್‌ಪೋರ್ಟ್ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು ಎಂದು ಬೀದರ್ ಬೆಟರ್‌ಮೆಂಟ್ ಫೌಂಡೇಷನ್ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಹೇಳಿದರು. ಮೇಳದಲ್ಲಿ ಪಾಸ್‌ಪೋರ್ಟ್‌ಗೆ ಅವಶ್ಯಕವಾಗಿರುವ ದಾಖಲೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ಸಹ ಕೊಡಲಾಗುವುದು ಎಂದು ಅಂಚೆ ಇಲಾಖೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್ ತಿಳಿಸಿದರು. ಸಭೆಯಲ್ಲಿ ಸ್ವಯಂ ಸೇವಕರಿಗೆ ಮೇಳದ ಸಮಗ್ರ ಮಾಹಿತಿ ನೀಡಲಾಯಿತು.

# ರೈತರ ಬೆಳೆ, ಸೇತುವೆಗಳಿಗೆ ಹಾನಿ





ಬೀದರ. ಆ. 29 : ಕಮಲನಗರ್ ತಾಲ್ಲೂಕಿನಾದ್ಯಂತ ಬುಧವಾರ ರಾತ್ರಿಯಿಂದ ಸುರಿಯುತ್ತಿರುವ ಭಾರಿ ಮಳೆಗೆ ಹಲವು ಸೇತುವೆಗಳು ಜಲಾವೃತ್ತಗೊಂಡಿದ್ದು, ರೈತರ ಅಪಾರ ಪ್ರಮಾಣದ ಬೆಳೆಗಳು ಹಾನಿಗೀಡಾಗಿವೆ.

ಕಳೆದ ಒಂದು ವಾರದ ಹಿಂದೆ ಭಾರಿ ಮಳೆಯಿಂದ ಹಲವು ಕಡೆ ಸೇತುವೆ ಕೊಚ್ಚಿಕೊಂಡು ಹೋಗಿದ್ದವು.

ರೈತರ ಹೊಲಗಳಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿಯಾಗಿತ್ತು. ಬಳಿಕ ಈಗಷ್ಟೆ ಮಳೆ ಬಿಡುವು ಕೊಟ್ಟಿತ್ತು. ಆದರೆ ಮತ್ತೆ ಬುಧವಾರ ರಾತ್ರಿಯಿಂದ ಸುರಿಯುತ್ತಿರುವ ಮಳೆಗೆ ರೈತರ ಹೊಲಗಳಿಗೆ ಅಪಾರ ಪ್ರಮಾಣದ ನೀರು ನುಗ್ಗಿ ಬೆಳೆ ನೀರು ಪಾಲಾಗಿದೆ.

ಹಾಲಹಳ್ಳಿ-ಬೆಡಕುಂದಾ ಗ್ರಾಮದ ಮಧ್ಯದಲ್ಲಿ ಇರುವ ಹಳ್ಳಕ್ಕೆ ಪ್ರವಾಹ ಬಂದು ಹೊಲಗಳಿಗೆ ನೀರು ನುಗ್ಗಿ ಹೆಸರು, ಉದ್ದು, ಸೋಯಾಬಿನ್, ತೊಗರಿ ಬೆಳೆಗಳಿಗೆ ಹಾನಿಯಾಗಿದೆ. ಬೆಡಕುಂದಾ ಗ್ರಾಮದಲ್ಲಿ ಮನೆಗಳಿಗೆ ನೀರು ನುಗ್ಗಿದೆ.

ಸೇತುವೆಗಳ ಸಂಪರ್ಕ ಕಡಿತ:

ಕಮಲನಗರ-ಸೋನಾಳ ಮಧ್ಯದ ದೇವನಾಲಾ, ಕಮಲನಗರ-ಔರಾದ ಸಂಪರ್ಕಿಸುವ ಖತಗಾಂವ ಕ್ರಾಸ್ ಬಳಿಯ ಸೇತುವೆ, ತೋರಣಾ-ಮುಧೋಳ(ಬಿ) ಸಂಪರ್ಕ ಸೇತುವೆ, ಹಾಲಹಳ್ಳಿ-ಬೆಡಕುಂದಾ ಸೇತುವೆ, ಬಸನಾಳ-ಕೋರಿಯಾಳ ಸೇತುವೆ, ಠಾಣಾಕುಶನೂರ-ನಿಡೋದಾ ಸೇತುವೆ, ಸಂಗಮ -ಠಾಣಾಕುಶನೂರ್ ಸೇತುವೆ, ಚಿಮ್ಮೇಗಾಂವ-ಚಿರಕಿ ತಾಂಡಾ, ನಂದಿ ಬಿಜಲಗಾಂವ-ಉದಗೀರ್ ಮತ್ತು ಚೊಂಡಿಮುಖೇಡ್-ಉದಗೀರ್-ದೇಗಲೂರ್ ಸಂಪರ್ಕಿಸುವ ಮುಖ್ಯರಸ್ತೆಯಲ್ಲಿ ಇರುವ ಸೇತುವೆಗಳು ಜಲಾವೃತಗೊಂಡಿವೆ. ನಾಲ್ಕು ಅಡಿಗಳಷ್ಟು ನೀರು ಹರಿಯುತ್ತಿದೆ. ತಾಲ್ಲೂಕು ಸೇರಿದಂತೆ ಬೇರೆಡೆಗೆ ತೆರಳುವ ಹಲವು ಸಂಪರ್ಕ ಸೇತುವೆಗಳಿಗೆ ಪ್ರವಾಹ ನೀರಿನಿಂದ ಸಂಪರ್ಕ ಕಡಿತಗೊಂಡಿದೆ. ಕಮಲನಗರ-ಸಂಗಮ್ ಕ್ರಾಸ್ ಮೂಲಕ ಭಾಲ್ಕಿ, ಬೀದರ್ ಪಟ್ಟಣಕ್ಕೆ ತೆರಳುವ ಏಕೈಕ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನಗಳು ಸಂಚರಿಸುತ್ತಿವೆ.

ಕೊಚ್ಚಿ ಹೋದ ಸೇತುವೆಗಳು:

ಭಾರಿ ಮಳೆಗೆ ಚಿಮ್ಮೆಗಾಂವ ಗ್ರಾಮದಿಂದ ಚಿರಕಿತಾಂಡಾ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಮಧ್ಯದ ಸೇತುವೆ ಹಾಗೂ ಹಾಲಹಳ್ಳಿ-ಬೆಡಕುಂದಾ ಸಂಪರ್ಕ ಸೇತುವೆ ಕೊಚ್ಚಿಕೊಂಡು ಹೋಗಿದ್ದು, ಸಂಪರ್ಕ ಕಡಿತಗೊಂಡಿದೆ. ರೈತರ ಹೊಲಗಳಿಗೆ ಅಪಾರ ಪ್ರಮಾಣದ ನೀರು ನುಗ್ಗಿ ಬೆಳೆ ಹಾಗೂ ಮಣ್ಣು ಕೊಚ್ಚಿಕೊಂಡು ಹೋಗಿದೆ ಎಂದು ಚಿಮ್ಮೆಗಾಂವ ಗ್ರಾಮಸ್ಥ ಅನೀಲಕುಮಾರ ಬಿರಾದಾರ ತಿಳಿಸಿದ್ದಾರೆ.

ಮನೆಗೋಡೆ ಕುಸಿತ: ತಾಲ್ಲೂಕಿನ ಖತಗಾಂವ ಗ್ರಾಮದ ಮಲ್ಲಿಕಾರ್ಜುನ ಬಸಪ್ಪ ಧರಣೆ ಅವರ ಮನೆ ಗೋಡೆ ಕುಸಿದಿದೆ.

# ಮಳೆಯಲ್ಲೇ ಗಣಪನ ಪ್ರತಿಷ್ಠಾಪನೆ-ಪೂಜೆ



ಬೀದರ. ಆ. 29 : ಸತತ ಸುರಿಯುತ್ತಿರುವ ಮಳೆಯಲ್ಲೇ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಬುಧವಾರ ಸಡಗರ, ಸಂಭ್ರಮದ ನಡುವೆ ಗಣೇಶನ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಲಾಯಿತು.

ಮಂಗಳವಾರ ಶುರುವಾದ ಮಳೆ ಹಬ್ಬದ ದಿನವಾದ ಬುಧವಾರವಾದರೂ ಬಿಡುವು ಕೊಡಬಹುದು ಎಂದು ಜನ ಹಾಗೂ ಗಣೇಶ ಮಂಡಳಿಯವರು ನಿರೀಕ್ಷಿಸಿದ್ದರು. ಆದರೆ, ಅವರ ನಿರೀಕ್ಷೆ ಹುಸಿಯಾಯಿತು.

ಒಂದೇ ಸಮನೆ ಮಳೆ ಸುರಿಯಿತು. ಮಳೆ ಲೆಕ್ಕಿಸದೇ ಜನ ನಗರದ ಮೋಹನ್ ಮಾರ್ಕೆಟ್, ಶಿವನಗರ, ಮೈಲೂರ್ ಕ್ರಾಸ್, ವಿದ್ಯಾನಗರ, ನೌಬಾದ್ ಸೇರಿದಂತೆ ಹಲವೆಡೆಗಳಿಗೆ ತೆರಳಿ ಗಣಪನ ಮೂರ್ತಿ, ಬಾಳೆದಿಂಡು, ಕಬ್ಬು, ಹೂ, ಪೂಜಾ ಸಾಮಗ್ರಿ ಹಾಗೂ ಅಲಂಕಾರಿಕ ವಸ್ತುಗಳನ್ನು ಖರೀದಿಸಿದರು. ಎಲ್ಲೆಲ್ಲೂ ಜನ ಕೊಡೆಗಳನ್ನು ಹಿಡಿದುಕೊಂಡು ಓಡಾಡುವುದು ಕಂಡು ಬಂತು. ಗಣಪನ ಮೂರ್ತಿಗೆ ಪ್ಲಾಸ್ಟಿಕ್ ಹೊದಿಕೆ ಹಾಕಿ ಒಯ್ದರು.

ಆಯಾ ಗಣೇಶ ಮಂಡಳಿಯವರು ಅವರ ಬಡಾವಣೆಗಳಲ್ಲಿ ಮಳೆಯ ನಡುವೆಯೇ ಪೆಂಡಾಲ್ ಅಲಂಕರಿಸಿ, ಗಣೇಶನನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿದರು. ಮಳೆಯ ಕಾರಣ ಹೆಚ್ಚಿನ ಜನರು ಸುಳಿಯಲಿಲ್ಲ. ಎರಡನೇ ದಿನವಾದ ಗುರುವಾರವೂ ಇದೇ ಪರಿಸ್ಥಿತಿ ಇತ್ತು. ಹೆಚ್ಚಿನವರು ಕಾರುಗಳಲ್ಲಿ ಓಡಾಡಿ, ದೂರದಿಂದಲೇ ಆಲಂಕಾರಿಕ ಪೆಂಡಾಲ್ ಕಣ್ತುಂಬಿಕೊಂಡರು. ಕೆಲವರು ಕೊಡೆಗಳ ಸಹಾಯದೊಂದಿಗೆ ಒಳಗೆ ಹೋಗಿ ದೇವರ ದರ್ಶನ ಪಡೆದರು. 'ಬೀದರ್ ನಗರವೊಂದರಲ್ಲೇ 167 ಕಡೆಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಗಣಪನ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿದೆ. ಐದನೇ ದಿನ (ಆ.31) ಗಣೇಶನ ವಿಸರ್ಜನೆಯ ಮೆರವಣಿಗೆಯಲ್ಲಿ 35ರಿಂದ 40 ಮೂರ್ತಿಗಳು ಬರುವ ಸಾಧ್ಯತೆ ಇದೆ. ಮಳೆ ಇದ್ದರೂ ಸಹ ಹಬ್ಬದ ಸಂಭ್ರಮ ಕಡಿಮೆಯಾಗಿಲ್ಲ. ಎಲ್ಲ ಕಡೆ ಸಂಭ್ರಮ ಮನೆ ಮಾಡಿದೆ. ಕೊನೆಯ ದಿನವೂ ಇದೇ ಸಂಭ್ರಮ ಇರಲಿದೆ' ಎಂದು ಗಣೇಶ ಮಹಾಮಂಡಳಿಯ ಪ್ರಧಾನ ಕಾರ್ಯದರ್ಶಿ ಬಾಬುವಾಲಿ ತಿಳಿಸಿದ್ದಾರೆ.

# ಔರಾದ್, ಕಮಲನಗರಗೆ 300 ಕೋಟಿ ವಿಶೇಷ ಪ್ಯಾಕೇಜ್ ನೀಡಿ



ಔರಾದ್ :ಅ.29: ಅತಿವೃಷ್ಟಿ ಮತ್ತು ಪ್ರವಾಹ ಹಿನ್ನೆಲೆಯಲ್ಲಿ ಹಾನಿಯಾಗಿರುವ ರಸ್ತೆ, ಸೇತುವೆ , ಕಟ್ಟಡ ಸೇರಿದಂತೆ ವಿವಿಧ ಇಲಾಖೆಯ ಮೂಲಸೌಕರ್ಯಗಳ ಅಭಿವೃದ್ಧಿಗೆ ಔರಾದ್ ಮತ್ತು ಕಮಲನಗರ ತಾಲೂಕು ಸೇರಿ 300 ಕೋಟಿ ರೂ. ವಿಶೇಷ ಅನುದಾನ ನೀಡುವಂತೆ ನಿವೃತ್ತ, ಸಿಎಂ ಅಪರ ಕಾರ್ಯದರ್ಶಿ, ಕಾಂಗ್ರೆಸ್ ಮುಖಂಡ ಡಾ. ಭೀಮಸೇನರಾವ ಶಿಂಧೆ ಸರಕಾರಕ್ಕೆ ಒತ್ತಾಯಿಸಿದ್ದಾರೆ. ಶುಕ್ರವಾರ ಪಟ್ಟಣದ ರಾಮನಗರ, ಹಮಾಲ್ ಕಾಲೋನಿ ಸೇರಿದಂತೆ ತಾಲೂಕಿನ ಎಕಂಬಾ, ದುಡುಕನಾಳ, ಬಾದಲಗಾಂವ, ಮಮದಾಪುರ, ತೇಗಂಪೂರ, ಯನಗುಂದಾ, ಚಿಂತಾಕಿ ಗ್ರಾಮಗಳಲ್ಲಿನ ಬೆಳೆ, ಕೆರೆ, ಬ್ರಿಡ್ಜ್, ರಸ್ತೆ ಹಾನಿಯಾಗಿರುವದನ್ನು ಪರಿಶೀಲಿಸಿದ ಅವರು ಔರಾದ್ ಮತಕ್ಷೇತ್ರದಲ್ಲಿ ಮಳೆಯಿಂದ ರಸ್ತೆ, ಸೇತುವೆ ಕೊಚ್ಚಿ ಹೋಗಿದ್ದು, ಸಂಪರ್ಕ ಕಡಿತವಾಗಿದೆ. ಶಾಲಾ ಅಂಗನವಾಡಿಗಳ ಕಟ್ಟಡ ಶಿಥಿಲಾವಸ್ಥೆಯಾಗಿವೆ. ಬೀಳುವ ಹಂತಕ್ಕೆ ತಲುಪಿವೆ. ಮಳೆಯಿಂದ ಕೆರೆ, ಬ್ರಿಡ್ಜ್ ಕಂ ಬ್ಯಾರೇಜ್ ಗಳು ಹಾಳಾಗಿವೆ. ಕುಡಲೇ ದುರಸ್ಥಿ ಮಾಡಬೇಕಿದೆ. ತಾಲೂಕಿನ ಮಾಂಜ್ರಾ ನದಿ, ಕೆರೆಯಂಚಿನ ಹಾಗೂ ಕೆರೆ ಕೆಳಭಾಗದ ಜಮೀನುಗಳಿಗೆ ಧಾರಾಕಾರ ಮಳೆಯಿಂದ ನೀರು ನುಗ್ಗಿವೆ. ರೈತರು ಬೆಳೆದಿರುವ ಬೆಳೆಯೊಂದಿಗೆ ಜಮೀನಿನಲ್ಲಿರುವ ಫಲವತ್ತಾದ ಮಣ್ಣು ಕೊಚ್ಚಿಕೊಂಡು ಹೋಗಿದೆ. ಜಾನುವಾರುಗಳು ಸತ್ತಿವೆ. ಇದರಿಂದ ರೈತರ ಕುಟುಂಬಗಳು ಬೀದಿಗೆ ಬಂದಿವೆ. ಸಂಕಷ್ಟದಲ್ಲಿರುವ ರೈತರ ನೆರವಿಗೆ 200 ಕೋಟಿ ಹಾಗೂ ಕಾಮಗಾರಿಗೆ 100 ಕೋಟಿ ಸೇರಿ 300 ಕೋಟಿ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಭೇಟಿಯಾಗುವ ಮೂಲಕ ಮನವರಿಕೆ ಮಾಡುವದಾಗಿ ಭರವಸೆ ನೀಡಿದರು.

ಕ್ಷೇತ್ರದ ಜನರ ಸಮಸ್ಯೆ ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಸಚಿವ ರಹೀಂಖಾನ್ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಸರಕಾರದ ಗಮನಕ್ಕೂ ತಂದಿದ್ದಾರೆ ಕ್ಷೇತ್ರದಲ್ಲಿ ರೈತರ ಸಮಸ್ಯೆ ಸ್ಪಂದಿಸುವ ಕೆಲಸ ಕಾಂಗ್ರೆಸ್ ಸರಕಾರ ಮಾಡುತ್ತದೆ ಎಂದು ಧೈರ್ಯ ತುಂಬಿದರು. ಪ್ರಮುಖರಾದ ತಾಪಂ ಮಾಜಿ ಅಧ್ಯಕ್ಷ ನೆಹರು ಪಾಟೀಲ್, ರಾಮಣ್ಣ ವಡಿಯಾರ, ಶಿವರಾಜ ದೇಶಮುಖ, ಸೂರ್ಯಕಾಂತ ಮಮದಾಪುರ, ಚನ್ನಪ್ಪ ಮಜಿಗೆ, ಶಿವರಾಜ ಮೊಕ್ತೆದಾರ್, ಅವಿನಾಶ ಮೊಕ್ತೆದಾರ್ ಸೇರಿದಂತೆ ಅನೇಕರಿದ್ದರು.

## ಅಧಿಕಾರಿಗಳ ವಿರುದ್ಧ ಆಕ್ರೋಶ

ತೇಗಂಪೂರ ಕೆರೆಯನ್ನು ಪರಿಶೀಲನೆ ನಡೆಸಿದ ಡಾ. ಭೀಮಸೇನರಾವ ಶಿಂಧೆ, ಕೆರೆಯ ಏರಿಯಲ್ಲಿ ಗಿಡಮರಗಳ ಬೇರುಗಳು ಬೆಳೆದು, ಏರಿಯಲ್ಲಿ ಬಿರುಕು ಉಂಟಾಗಿ ಕೆರೆಯಲ್ಲಿ ಸಂಗ್ರಹವಾಗಿರುವ ಮಳೆಯ ನೀರು ಸೋರುವ ಭೀತಿಯಿದೆ. ಆದರೆ ಇಲಾಖೆ ಅಧಿಕಾರಿಗಳು ಗಿಡಗಂಟಿಗಳು ತೆಗೆದಿಲ್ಲ ಎಂದು ಇಲಾಖೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಯನಗುಂದಾ ಗ್ರಾಮದ ಸೇತುವೆ ಪರಿಶೀಲಿಸಿ, ಸಂಚಾರ ಸ್ಥಗಿತವಾಗಿರುವದನ್ನು ಗಮನಿಸಿ ದುರಸ್ಥಿ ಮಾಡುವಂತೆ ಲೋಕೋಪಯೋಗಿ ಇಲಾಖೆಯ ಎಇಇ ಪ್ರೇಮಸಾಗರ ಅವರಿಗೆ ದೂರವಾಣಿ ಕರೆ ಮಾಡಿ ಸೂಚಿಸಿದರು.

# ಮಳೆ: ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಲು ಶಾಸಕ ಪ್ರಭು ಚವ್ಹಾಣ ಸೂಚನೆ



ಔರಾಧ:ಅ.29:ನಿರಂತರ ಮಳೆ ಸುರಿಯುತ್ತಿರುವುದರಿಂದ ಎಲ್ಲ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿ ಲಭ್ಯವಿದ್ದು ಹಾನಿ ತಡೆಗೆ ಚುರುಕಿನಿಂದ ಕೆಲಸ ಮಾಡಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸೂಚಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜಿಲ್ಲಾಧಿಕಾರಿಗಳು, ಸಹಾಯಕ ಆಯುಕ್ತರು, ತಹಸೀಲ್ದಾರರು ಸೇರಿದಂತೆ ಸಂಬಂಧಿಸಿದ ಎಲ್ಲ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಮಳೆ ಹಾನಿ ತಡೆಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡುತ್ತಿದ್ದೇನೆ. ಎಲ್ಲ ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕೆಂದು ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ, ಗ್ರಾಮ ಲೆಕ್ಕಾಧಿಕಾರಿಗಳು, ಕೃಷಿ, ತೋಟಗಾರಿಕೆ ಅಧಿಕಾರಿಗಳು ಮನೆ, ಬೆಳೆ ಹಾನಿಯಾಗಿರುವ ಬಗ್ಗೆ ಸರ್ಕಾರಕ್ಕೆ ತಕ್ಷಣ ವರದಿ ಸಲ್ಲಿಸಿ ನೊಂದವರಿಗೆ ಅಗತ್ಯ ಪರಿಹಾರ ಬಿಡುಗಡೆಗೆ ಪ್ರಯತ್ನಿಸಬೇಕು ಎಂದಿದ್ದಾರೆ.

ನಿರಂತರ ಮಳೆಯಿಂದಾಗಿ ಕ್ಷೇತ್ರದ ಜನತೆಯನ್ನು ನಾನಾ ರೋಗಗಳು ಬಾಧಿಸುತ್ತಿವೆ. ಎಲ್ಲ ವೈದ್ಯಾಧಿಕಾರಿಗಳು ಸರಿಯಾಗಿ ಕರ್ತವ್ಯ ನಿರ್ವಹಿಸಬೇಕು. ಎಲ್ಲಿಯೂ ಔಷಧಕ್ಕೆ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಆರೋಗ್ಯ ಹಿತದೃಷ್ಟಿಯಿಂದ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕೆಂದು ತಿಳಿಸಿದ್ದಾರೆ.

ಸಾರ್ವಜನಿಕರಲ್ಲಿ ಮನವಿ: ನದಿತೀರ, ಕೆರೆ-ಕಟ್ಟೆ, ಹಳ್ಳ-ಕೊಳ್ಳ, ಸೇತುವೆ ಬಳಿ ಹೋಗಬಾರದು. ಮತ್ತು ಜಾನುವಾರುಗಳನ್ನು ಬಿಡಬಾರದು. ಸುರಕ್ಷತಾ ಕ್ರಮಗಳನ್ನು ನಿರ್ಲಕ್ಷಿಸಬಾರದು ಎಂದು ಶಾಸಕರು ಸಾರ್ವಜನಿಕರಲ್ಲಿ ವಿನಂತಿಸಿದ್ದಾರೆ.

# ಗಣೇಶ ವಿಸರ್ಜನೆ: ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ

ಬೀದರ, ಅ 29: ಬೀದರ ಜಿಲ್ಲೆಯಲ್ಲಿ ಗಣೇಶ ವಿಗ್ರಹಗಳ ವಿಸರ್ಜನೆಯನ್ನು ಶಾಂತಿಯುತವಾಗಿ ಕೈಗೊಳ್ಳಲು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ.21 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಬೀದರ ಜಿಲ್ಲೆಯಲ್ಲಿನ ಆಯಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಈ ಕೆಳಗಿನಂತೆ ಎಲ್ಲಾ ವಿಧದ ಮದ್ಯದಂಗಡಿಗಳನ್ನು ಮುಚ್ಚಲು ಹಾಗೂ ಮದ್ಯ ಮಾರಾಟ ಮಾಡುವುದುನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಆದೇಶಿಸಿರುತ್ತಾರೆ.

ಮದ್ಯ ಮಾರಾಟ ನಿಷೇಧಿಸಿದ ದಿನಾಂಕ ಮತ್ತು ಸಮಯದ ವಿವರ: ಬೀದರ ತಾಲ್ಲೂಕಿನಲ್ಲಿ ದಿನಾಂಕ: 30-08-2025ರ ಮಧ್ಯರಾತ್ರಿ 12 ಗಂಟೆಯಿಂದ ದಿನಾಂಕ: 01-09-2025 ರ ಬೆಳಿಗ್ಗೆ 6 ಗಂಟೆಯವರೆಗೆ. ಬಸವಕಲ್ಯಾಣ ತಾಲ್ಲೂಕಿನಲ್ಲಿ ದಿನಾಂಕ: 05-09-2025 ರ ಮಧ್ಯರಾತ್ರಿ 12 ಗಂಟೆಯಿಂದ ದಿನಾಂಕ: 07-09-2025 ರ ಬೆಳಿಗ್ಗೆ 6 ಗಂಟೆಯವರೆಗೆ, ಭಾಲ್ಕಿ ತಾಲ್ಲೂಕಿನಲ್ಲಿ ದಿನಾಂಕ: 05-09-2025 ರ ಮಧ್ಯರಾತ್ರಿ 12 ಗಂಟೆಯಿಂದ ದಿನಾಂಕ: 07-09-2025 ರ ಬೆಳಿಗ್ಗೆ 6 ಗಂಟೆಯವರೆಗೆ, ಔರಾದ ತಾಲ್ಲೂಕಿನಲ್ಲಿ ದಿನಾಂಕ: 03-09-2025 ರ ಮಧ್ಯರಾತ್ರಿ 12 ಗಂಟೆಯಿಂದ ದಿನಾಂಕ: 05-09-2025 ರ ಬೆಳಿಗ್ಗೆ 6 ಗಂಟೆಯವರೆಗೆ, ಹುಮನಾಬಾದ ತಾಲ್ಲೂಕಿನಲ್ಲಿ ದಿನಾಂಕ: 30-08-2025 ರ ಮಧ್ಯರಾತ್ರಿ 12 ಗಂಟೆಯಿಂದ ದಿನಾಂಕ: 01-09-2025 ರ ಬೆಳಿಗ್ಗೆ 6 ಗಂಟೆಯವರೆಗೆ ಹಾಗೂ ದಿನಾಂಕ: 05-09-2025 ರ ಮಧ್ಯರಾತ್ರಿ 12 ಗಂಟೆಯಿಂದ ದಿನಾಂಕ: 07-09-2025 ರ ಬೆಳಿಗ್ಗೆ 6 ಗಂಟೆಯವರೆಗೆ, ಹುಲಸೂರು ತಾಲ್ಲೂಕಿನಲ್ಲಿ ದಿನಾಂಕ: 05-09-2025 ರ ಮಧ್ಯರಾತ್ರಿ 12 ಗಂಟೆಯಿಂದ ದಿನಾಂಕ: 07-09-2025 ರ ಬೆಳಿಗ್ಗೆ 6 ಗಂಟೆಯವರೆಗೆ, ಕಮಲನಗರ ತಾಲ್ಲೂಕಿನಲ್ಲಿ

ದಿನಾಂಕ: 01-09-2025 ರ ಮಧ್ಯರಾತ್ರಿ 12

ಗಂಟೆಯಿಂದ ದಿನಾಂಕ: 03-09-2025 ರ ಬೆಳಿಗ್ಗೆ 6 ಗಂಟೆಯವರೆಗೆ, ಚಿಟಗುಪ್ಪಾ ತಾಲ್ಲೂಕಿನಲ್ಲಿ ದಿನಾಂಕ: 30-08-2025 ರ ಮಧ್ಯರಾತ್ರಿ 12 ಗಂಟೆಯಿಂದ

ದಿನಾಂಕ: 01-09-2025 ರ ಬೆಳಿಗ್ಗೆ 6 ಗಂಟೆಯವರೆಗೆ ಈ ಆದೇಶ ಜಾರಿಯಲ್ಲಿರುತ್ತದೆ.

# ಜಿಲ್ಲೆಯಲ್ಲಿ ನೈಋತ್ಯ ಮುಂಗಾರು ಹಂಗಾಮಿನಲ್ಲಿ 467.00 ಮೀ.ಮೀ.ಮಳೆ

ಬೀದರ,ಅ29:ಜಿಲ್ಲೆಯಲ್ಲಿ ಕೆಲವು ದಿನಗಳಿಂದ ಸತತವಾಗಿ ಸುರಿಯುತ್ತಿರುವ ಮಳೆಯಿಂದ ನೈಋತ್ಯ ಮುಂಗಾರು ಹಂಗಾಮಿನಲ್ಲಿ ವಾಡಿಕೆ 466.0 ಮೀ.ಮೀ. ಮಳೆಯಾಗಬೇಕಾಗಿದ್ದು, 467.00 ಮೀ.ಮಿ. ಮಳೆಯಾಗಿರುತ್ತದೆ. ಕಳೆದ 24 ಗಂಟೆಯಲ್ಲಿ ಜಿಲ್ಲೆಯಾದ್ಯಂತ 59 ಮೀ.ಮೀ. ಮಳೆಯಾಗಿರುತ್ತದೆ, ಕೆಲವು ಕಡೆ ಭಾರಿ ಪ್ರಮಾಣದಲ್ಲಿ ಮಳೆಯಾರುತ್ತದೆ. ಇದರಿಂದ 94 ಮನೆ ಹಾನಿ ಹಾಗು 66906 ಹೆಕ್ಟೇರ ಬೆಳೆ ಹಾನಿಯಾಗಿದ್ದು ಇವುಗಳ ಸಮೀಕ್ಷೆ ಪ್ರಗತಿಯಲ್ಲಿದೆ, ಮಾನವ ಜೀವ ಹಾನಿ, ಪ್ರಾಣಿ ಜೀವ ಹಾನಿ ಸಂಭವಿಸಿರುವುದಿಲ್ಲ. ಜಿಲ್ಲೆಯಾದ್ಯಂತ 70 ಕೀ.ಮೀ. ರಸ್ತೆ ಹಾನಿ, 47 ಬ್ರಿಜ್‌ಗಳು ಹಾನಿ, 1335 ಶಾಲಾ ಕೊಠಡಿಗಳಿಗೆ ಹಾನಿ, 138 ವಿದ್ಯುತ್ ಕಂಬ, 21 ಟ್ರಾನ್ಸ್‌ಫಾರ್ಮಗಳು ಮತ್ತು 11 ಕೀ.ಮೀ. ವಿದ್ಯುತ್ ತಂತಿ ಹಾನಿ ಹಾಗೂ 38 ಸಣ್ಣ ನೀರಾವರಿ ಇಲಾಖೆ ಕೆರೆ (ಯೋಜನೆಗಳು) ಹಾನಿಯಾಗಿರುತ್ತವೆ.

ರಾಷ್ಟ್ರೀಯ ಕ್ರೀಡಾ ದಿನ ಅಂಗವಾಗಿ ಬಳ್ಳಾರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಗಳಿಗೆ ಚಾಲನೆ

# ಕ್ರೀಡೆ ಶಾರೀರಿಕ ಆರೋಗ್ಯದ ಅವಿಭಾಜ್ಯ ಅಂಗ: ಕೆ.ಗ್ರೇಸಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.29–ದೈನಂದಿನ ಜೀವನದಲ್ಲಿ ಕ್ರೀಡೆಗಳು ಶಾರೀರಿಕ ಆರೋಗ್ಯದ ಅವಿಭಾಜ್ಯ ಅಂಗವಾಗಿವೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಶಾಲಾ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಕ್ರೀಡಾ ದಿನ ಅಂಗವಾಗಿ ಶುಕ್ರವಾರ ಆಯೋಜಿಸಲಾಗಿದ್ದ ಬಳ್ಳಾರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ದೈಹಿಕ ಆರೋಗ್ಯಕ್ಕಾಗಿ ಕ್ರೀಡೆಗಳು ಅತ್ಯಾವಶ್ಯಕವಾಗಿದೆ. ಕ್ರೀಡೆಗಳು ನಮ್ಮ ಜೀವನವನ್ನು ಸಮೃದ್ಧಗೊಳಿಸುತ್ತವೆ. ಕ್ರೀಡೆಗಳಲ್ಲಿ ಸೋಲು–ಗೆಲುವು ಸಾಮಾನ್ಯ. ಯುವಪೀಳಿಗೆಯು ತಪ್ಪದೇ ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಆಶಿಸಿದರು. ಭಾರತದ ಶ್ರೇಷ್ಠ ಹಾಕಿ ಆಟಗಾರ ಮೇಜರ್ ಧ್ಯಾನ್ ಚಂದ್ ಅವರ ಕೊಡುಗೆ ಗುರುತಿಸಲು ಆ.29 ರಂದು ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲಾಗುತ್ತದೆ ಎಂದು ಹೇಳಿದ ಅವರು, ಧ್ಯಾನ್ ಚಂದ್ ಅವರು ಹಲವು ಪೀಳಿಗೆಯವರಿಗೆ ಪ್ರೇರಣೆಯಾಗಿದ್ದವರು ಎಂದು ತಿಳಿಸಿದರು. ಜಿಲ್ಲೆಯ ವಿವಿಧ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ವಿಜೇತರಾದ ಕ್ರೀಟಾಪಟುಗಳಿಗೆ ಜಿಲ್ಲಾ ಮಟ್ಟದಲ್ಲಿ ದಸರಾ ಕ್ರೀಡಾ–ಕೂಟ ಆಯೋಜಿಸ ಲಾಗುವುದು ಎಂದರು.

ಬಳ್ಳಾರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಆನ್ ಲೈನ್ ಮೂಲಕ ನೋಂದಣಿ ವ್ಯವಸ್ಥೆ ಮಾಡಲಾಗಿತ್ತು. ಜಿಲ್ಲಾ ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ವೈದ್ಯಕೀಯ ವ್ಯವಸ್ಥೆ ಕಲ್ಪಿಸಲಾಗಿತ್ತು. ಬಳಿಕ ವಿವಿಧ ಕ್ರೀಡೆಗಳು ಜರುಗಿದವು.

ಈ ವೇಳೆ ಹಾಕಿ ತರಬೇತುದಾರ ಜಾಕೀರ್,ಫುಟ್ ಬಾಲ್ ತರಬೇತುದಾರ ಮಸೂರ್, ಜಿಲ್ಲಾ ದೈಹಿಕ ಶಿಕ್ಷಕರ ಸಂಘದ ಕಾರ್ಯದರ್ಶಿ ಸಿದ್ದು,ಬಾಲ್ ಬ್ಯಾಡ್ಮಿಂಟನ್ ಅಸೋಸಿಯೇಶನ್ ಕಾರ್ಯದರ್ಶಿ ಬುಜ್ಜಿ, ಇಲಾಖೆಯ ಸಿಬ್ಬಂದಿ ವರ್ಗ ಸೇರಿದಂತೆ ಬಳ್ಳಾರಿ ತಾಲ್ಲೂಕು ವ್ಯಾಪ್ತಿಯ ಕ್ರೀಡಾಪಟುಗಳು, ಸಾರ್ವಜನಿಕರು ಹಾಗೂ ಇತರರು ಭಾಗವಹಿಸಿದ್ದರು.

# ರೈತರು ಮೆಣಸಿನಕಾಯಿ ಬೆಳೆಯಲ್ಲಿ ಕಂಡುಬರುವ ಸಸಿ ಕೊಳೆ ರೋಗ ನಿಯಂತ್ರಿಸಲು ಮುಂಜಾಗ್ರತಾ ಕ್ರಮ ಕೈಗೊಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.29–ಜಿಲ್ಲೆಯಲ್ಲಿ ಮೆಣಸಿನಕಾಯಿ ಬೆಳೆ ಬೆಳೆಯುವ ರೈತರು ಮೆಣಸಿನಕಾಯಿ ಬೆಳೆಯಲ್ಲಿ ಸಸಿ ಕೊಳೆ ರೋಗ ಕಂಡುಬಂದಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತೋಟಗಾರಿಕೆ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ತಿಳಿಸಿದ್ದಾರೆ.

ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಜಿಲ್ಲೆಯಲ್ಲಿ ಸತತವಾಗಿ ಮಳೆಯಾಗುವ ಸಂಭವವಿರುವುದರಿಂದ ಮಣ್ಣಿನಲ್ಲಿ ತೇವಾಂಶ ಹೆಚ್ಚಾಗಿ ಮೆಣಸಿನಕಾಯಿ ಬೆಳೆಯಲ್ಲಿ ಸಸಿ ಕೊಳೆಯುವ ರೋಗ ಕಾಣಿಸಿಕೊಳ್ಳುತ್ತದೆ. ಹಾಗಾಗಿ ರೈತರು ಕೆಳಕಂಡಂತೆ ಸೂಕ್ತ ಮುಂಜಾಗ್ರತೆ ಮತ್ತು ನಿರ್ವಹಣೆ ಕ್ರಮಗಳನ್ನು ಕೈಗೊಳ್ಳಬೇಕು ಎಂದಿದ್ದಾರೆ.

**ಕ್ರಮಗಳು:**

ರೈತರು ನರ್ಸರಿಯಿಂದ ಸಸಿಗಳನ್ನು ತಂದು ನಾಟಿ ಮಾಡುವಾಗ ಆಳವಾಗಿ ನಾಟಿ ಮಾಡುವುದು ಸೂಕ್ತವಲ್ಲ. ಬದಲಾಗಿ ಸಸಿಗಳನ್ನು ಸಾಲಿನಿಂದ ಸಾಲಿಗೆ 120 ಸೆಂ.ಮೀ ಹಾಗೂ ಗಿಡದಿಂದ ಗಿಡಕ್ಕೆ 60 ಸೆಂ.ಮೀ ಅಂತರದಲ್ಲಿ ನಾಟಿ ಮಾಡಿದಲ್ಲಿ ಗಿಡಗಳ ಬೆಳವಣಿಗೆ,ಗಾಳಿಯಾಡಲು ಸಹಾಯ ಮಾಡುತ್ತದೆ ಹಾಗೂ ರೋಗ ನಿಯಂತ್ರಣ ಮಾಡಬಹುದಾಗಿದೆ.

ಮಣ್ಣಿನಲ್ಲಿ ಅಧಿಕ ತೇವಾಂಶ ಬಸಿದು ಹೋಗುವಂತೆ ಬಸಿ ಕಾಲುವೆ ಮಾಡಬೇಕು. ನೀರಾವರಿಯನ್ನು ನಿಯಂತ್ರಿಸಿ ಮಣ್ಣಿನಲ್ಲಿ ಹೆಚ್ಚಿನ ತೇವಾಂಶ ಇಲ್ಲದೇ ಇರುವಂತೆ ನೋಡಿಕೊಳ್ಳಬೇಕು. ಮಣ್ಣಿನ ತೇವಾಂಶ ಹೆಚ್ಚಾಗಿ ಸಸಿ ಕೊಳೆಯುವ ರೋಗ ಕಂಡುಬಂದಲ್ಲಿ ಕಾರ್ಬನ್‌ಡೈಜಿಮ್ ಶೇ.50ಡಬ್ಲ್ಯೂಪಿ ಅಥವಾ ಮ್ಯಾಂಕೋಜಬ್ ಶೇ.75ಡಬ್ಲ್ಯೂಪಿ 2 ಗ್ರಾಂ ನಂತೆ ಅಥವಾ ಕಾಪರ್ ಆಕ್ಸಿಕೋಡ್ 4 ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪರಣೆ ಮಾಡುವುದರಿಂದ ರೋಗ ನಿಯಂತ್ರಣ ಹತೋಟಿಗೆ ಬರುತ್ತದೆ.

ಪ್ರತಿ ಎಕರೆಗೆ 100 ರಿಂದ 150 ಕೆ.ಜಿ ತಿಪ್ಪೆಗೊಬ್ಬರದ ಜೊತೆಯಲ್ಲಿ 5 ಕೆ.ಜಿ ಟ್ರೈಕೋಡರ್ಮ್ ಮಿಶ್ರಣ ಮಾಡಿ ಗಿಡಗಳ ಸಾಲಿನಲ್ಲಿ ಹಾಕುವುದು. ಸಸಿಗಳ ಸುತ್ತಲಿನ ಕಳೆಗಳನ್ನು ತೆಗೆದು ಹಾಕಬೇಕು. ಇದರಿಂದ ಗಾಳಿಯಾಡಲು ಅನುಕೂಲವಾಗುತ್ತದೆ. ಕೊಳೆರೋಗ ಸೋಂಕಿತ ಸಸಿ ಅಥವಾ ಸಸಿಗಳ ಭಾಗಗಳನ್ನು ತೆಗೆದು ಹಾಕಿ ಅವುಗಳನ್ನು ನಾಶಪಡಿಸಬೇಕು ಎಂದು ಅವರು ತಿಳಿಸಿದ್ದಾರೆ.

# ಅನಾಮಧೇಯ ಮೃತ ಮಹಿಳೆ ಶವ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.29–ತಾಲೂಕಿನ ಕಪ್ಪಗಲ್ ಕ್ಯಾಂಪ್‌ನ ಕಪ್ಪಗಲ್ ಹೆಚ್‌ಎಲ್‌ಸಿ ಕಾಲುವೆಯ ಸಬ್ ಕಾಲುವೆ ಡಿಪಿ–14 ಆರ್ ವಿತರಣಾ ಕಾಲುವೆಯಲ್ಲಿ ಸುಮಾರು 55 ರಿಂದ 60 ವರ್ಷದ ಅನಾಮಧೇಯ ಮೃತ ಮಹಿಳೆಯ ಶವವು ಆ.28 ರಂದು ತೇಲಿಕೊಂಡು ಬಂದಿದ್ದು, ಮೃತಳ ವಾರಸುದಾರರು ತಿಳಿದಿರುವುದಿಲ್ಲ. ಪತ್ತೆಗೆ ಸಹರಿಸಬೇಕು.

**ಚಹರೆ ಗುರುತು:** ಎತ್ತರ ಅಂ–ದಾಜು 5.5 ಅಡಿ, ಹಸಿರು ಬಣ್ಣದ ಬ್ಲೌಸ್ ಧರಿಸಿರುತ್ತಾಳೆ. ತಲೆ ಬುರುಡೆ ಕಂಡುಬುರುತ್ತಿದ್ದು, ಕಣ್ಣು, ಕಿವಿ ಮತ್ತು ಬಾಯಿ ಇರುವುದಿಲ್ಲ. ತಲೆಯ ಭಾಗ ಕೈ ಮತ್ತು ಕಾಲುಗಳನ್ನು ಜಲಚರ ಪ್ರಾಣಿಗಳು ಕಿತ್ತು ತಿಂದಂತೆ ಕಂಡುಬರುತ್ತಿದೆ. ಯಾವುದೇ ಚಹರೆ ಗುರುತುಗಳು ಕಂಡುಬಂದಿರುವುದಿಲ್ಲ. ಅನಾಮಧೇಯ ಮೃತ ಮಹಿಳೆಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392258100 ಅಥವಾ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆ–ಯ ಪಿಐ ದೂ.08392–276461 ಹಾಗೂ ಮೊ.9480803049 ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಆರೋಗ್ಯಯುತ ಸಮಾಜಕ್ಕೆ ಕ್ರೀಡಾ ಚಟುವಟಿಕೆಗಳು ಮುಖ್ಯ: ಪ್ರೊ.ಎಂ.ಮುನಿರಾಜು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.29–ನಮ್ಮ ಸಮಾಜ ಆರೋಗ್ಯಯುತವಾಗಿರಲು ಕ್ರೀಡಾ ಚಟುವಟಿಕೆಗಳು ಪ್ರತಿಯೊಬ್ಬರಿಗೂ ಅತ್ಯಂತ ಅವಶ್ಯಕವಾದವು ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಂ.ಮುನಿರಾಜು ಅವರು ಹೇಳಿದರು.

ಶುಕ್ರವಾರ ನಗರದ ಹೊರವಲಯದ ವಿಶ್ರೀಕೃದೇ ವಿಶ್ವವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಹಾಕಿ ಮಾಂತ್ರಿಕ ಮೇಜರ್ ಧ್ಯಾನಚಂದ ಅವರ ಜನ್ಮದಿನದ ಸ್ಮರಣಾರ್ಥ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಕೂಡ ಯಾವುದಾದರು ಒಂದು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿದಾಗ ಮಾತ್ರ ದೈಹಿಕ, ಮಾನಸಿಕ ಮತ್ತು ಭಾವನಾತ್ಮಕವಾಗಿ ಸದೃಢವಾಗಿರಲು ಸಾಧ್ಯ. ಎಲ್ಲರೂ ಕ್ರೀಡೆಯಲ್ಲಿ ಭಾಗವಹಿಸುವ ಮೂಲಕ ಕ್ರೀಡೆಯ ಶ್ರೇಷ್ಠತೆ, ಗೌರವ ಮತ್ತು ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು.

ಮೇಜರ್ ಧ್ಯಾನಚಂದ ಅವರು ನಮಗೆಲ್ಲ ಸ್ಫೂರ್ತಿ ಎಂದರು.

ಕುಲಸಚಿವ ಸಿ.ನಾಗರಾಜು ಅವರು ಮಾತನಾಡಿ, ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಕ್ರೀಡಾ ಚಟುವಟಿಕೆಗಳನ್ನು ದಿನನಿತ್ಯದ ಭಾಗವಾಗಿ ಸ್ವೀಕರಿಸಬೇಕು. ಅಂದಾಗ ಮಾತ್ರ ಜೀವನ ಪರಿಪೂರ್ಣವಾಗುತ್ತದೆ ಎಂದರು.

ಇದೇ ವೇಳೆ ಅಖಿಲ ಭಾರತ ಮತ್ತು ದಕ್ಷಿಣವಲಯ ಅಂತರ ವಿಶ್ವವಿದ್ಯಾಲಯ ಕ್ರೀಡಾಕೂಟಗಳಲ್ಲಿ ಭಾಗವಹಿಸಿದ್ದ ವಿವಿಯ ಕ್ರೀಡಾಪಟುಗಳಿಗೆ ಗಣ್ಯರು ಪ್ರಶಸ್ತಿ ಪತ್ರಗಳನ್ನು ವಿತರಿಸಿದರು. ಕ್ರೀಡಾ ದಿನದ ಅಂಗವಾಗಿ ವಿಶ್ವವಿದ್ಯಾಲಯದ ಸಿಬ್ಬಂದಿಗೆ ಕ್ರೀಡಾಕೂಟ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ರಮೇಶ ಸವದಿ, ಡಾ.ಅರ್ಥೊಬ ನಾಯಕ, ಡಾ.ಅಮರೇಶ ನುಗಡೋಣಿ, ರಘುನಾಥ ಚಹ, ಡಾ.ಸಂಪತ ಕುಮಾರ, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ಮುಖ್ಯಸ್ಥ ಡಾ.ಶಶಿಧರ ಕೆಲ್ಲೂರ ಸೇರಿದಂತೆ ವಿಶ್ವವಿದ್ಯಾಲಯದ ಎಲ್ಲ ನಿಕಾಯಗಳ ಡೀನರು, ಮುಖ್ಯಸ್ಥರು, ಬೋಧಕ–ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶಾಲೆಗಳಿಗೆ 'ಮಕ್ಕಳ ರಕ್ಷಣೆಗೆ ಕಾನೂನುಗಳು' ಪುಸ್ತಕ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.29–ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಮಾರ್ಗದರ್ಶನದಲ್ಲಿ ರೀಡ್ಸ್ ಸಂಸ್ಥೆ ವತಿಯಿಂದ ಹೊರತಲಾದ 'ಮಕ್ಕಳ ರಕ್ಷಣೆಗೆ ಕಾನೂನು' ಪುಸ್ತಕಗಳನ್ನು ಜಿಲ್ಲೆಯ ವಿವಿಧ ಶಾಲೆಗಳಲ್ಲಿ ವಿತರಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

ಮಗುವಿನ ಜೈವಿಕ ಪೋಷಕರು ಮಕ್ಕಳ ರಕ್ಷಣೆಯ ಜವಾಬ್ದಾರಿ ಹೊಂದಿದ್ದರೂ, ಸರ್ಕಾರ ಮಕ್ಕಳ ಕಾನೂನಾತ್ಮಕ ಪೋಷಕರಾಗಿರುವುದರಿಂದ 'ಮಕ್ಕಳ ರಕ್ಷಣೆಗೆ ಕಾನೂನುಗಳು' ಈ ಪುಸ್ತಕವು ಸಮುದಾಯದಲ್ಲಿ ಸಾಮಾಜಿಕ ಅನಿಷ್ಟ ಪದ್ಧತಿಗಳ ದುಷ್ಪರಿಣಾಮಗಳ ಬಗ್ಗೆ ಮತ್ತು ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳ ಬಗ್ಗೆ ಜಾಗೃತಿ, ಜ್ಞಾನ ಮೂಡಿಸಿ ಮಕ್ಕಳನ್ನು ಸಶಕ್ತರನ್ನಾಗಿ ಮಾಡುವ ಮೂಲಕ ಸಾಮಾಜಿಕ ಅನಿಷ್ಠ ಪದ್ಧತಿಗಳನ್ನು ತೊಡೆದು ಹಾಕುವುದು ಈ ಪುಸ್ತಕದ ಮುಖ್ಯ ಉದ್ದೇಶವಾಗಿದೆ.

ಈ ಪುಸ್ತಕವು ಮಕ್ಕಳ ರಕ್ಷಣೆಗೆ ಸಂಬಂಧಿಸಿದ ಎಲ್ಲಾ ಕಾನೂನುಗಳು ಮತ್ತು ಸಾಮಾಜಿಕ ಅನಿಷ್ಟ ಪದ್ಧತಿಗಳಿಂದ ಮಕ್ಕಳನ್ನು ರಕ್ಷಿಸುವ ವಿಚಾರಗಳ ಸಮಗ್ರ ಮಾಹಿತಿ ಒಳಗೊಂಡಿದೆ.

ಈಗಾಗಲೇ ಜಿಲ್ಲೆಯಲ್ಲಿ ಐದು ತಾಲ್ಲೂಕುಗಳ 719 ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳು ಮತ್ತು ಪ್ರೌಢ ಶಾಲೆಗಳಿಗೆ ಈ ಪುಸ್ತಕವನ್ನು ರೀಡ್ಸ್ ಸಂಸ್ಥೆಯಿಂದ ತಾಲ್ಲೂಕುವಾರು ವಿತರಣೆ ಮಾಡಲಾಗಿದೆ. ಬಳ್ಳಾರಿ ಪಶ್ಚಿಮ ವಿಭಾಗ–141, ಬಳ್ಳಾರಿ ಪೂರ್ವ ವಿಭಾಗ–177, ಕಂಪ್ಲಿ–52, ಸಂಡೂರು–249 ಮತ್ತು ಸಿರುಗುಪ್ಪದ 100 ಶಾಲೆಗಳಿಗೆ ಪುಸ್ತಕಗಳನ್ನು ವಿತರಿಸಲಾಗಿದೆ.

ಶಾಲೆಗಳಲ್ಲಿ ಪ್ರಾರ್ಥನೆ ನಂತರ ಪ್ರತಿದಿನ ಒಂದು ಪುಟದಂತೆ ಓದಿಸಿ ಮಕ್ಕಳಲ್ಲಿ ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳ ಬಗ್ಗೆ ಜ್ಞಾನವನ್ನು ಹೆಚ್ಚಿಸುವಂತೆ ಮಾಡುವ ಉದ್ದೇಶದಿಂದ ಈ ಪುಸ್ತಕವನ್ನು ಜಾರಿಗೊಳಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

# ರಾಷ್ಟ್ರೀಯ ಕ್ರೀಡಾ ದಿನದ ಪ್ರಯುಕ್ತ ಮೇಜರ್ ಧ್ಯಾನ ಚಂದ್ರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಕುಕನೂರ ತಾಲೂಕಿನ ಅರಕೇರಿ ಸರಕಾರಿ ಪ್ರೌಢಶಾಲೆ ಯಲ್ಲಿ ರಾಷ್ಟ್ರೀಯ ಕ್ರೀಡಾ ದಿನದ ಪ್ರಯುಕ್ತ ಇಂದು ಶಾಲೆಯಲ್ಲಿ ಮೇಜರ್ ಧ್ಯಾನ್ ಚಂದ್ರ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಕೆ.

ಪ್ರಸ್ತಾವಿಕವಾಗಿ ಮಾತನಾಡುತ್ತಾ ಕಲ್ಲಪ್ಪ ಗಡಾದ

ಭಾರತವು ಆಗಸ್ಟ 29 ರಂದು ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸುತ್ತದೆ, ಇದು ಹಾಕಿ ಹೀರೋ ಮೇಜರ್ ಧ್ಯಾನ್ ಚಂದ ಅವರ ಜನ್ಮದಿನ. 2012 ರಲ್ಲಿ, ಈ ದಿನವನ್ನು ಭಾರತದ ರಾಷ್ಟ್ರೀಯ ಕ್ರೀಡಾ ದಿನವೆಂದು ಘೋಷಿಸಲಾಯಿತು.

ಮೇಜರ್ ಧ್ಯಾನ್ ಚಂದ್ ಭಾರತೀಯ ಮತ್ತು ಅಂತರರಾಷ್ಟ್ರೀಯ ಹಾಕಿಯಲ್ಲಿ ದಂತಕಥೆಯಾಗಿದ್ದರು. 1928, 1932 ಮತ್ತು 1936 ರಲ್ಲಿ ಬೇಸಿಗೆ ಒಲಿಂಪಿಕ್ಸ್‌ನಲ್ಲಿ ವಿಜಯಗಳೊಂದಿಗೆ, ಭಾರತವು ತಮ್ಮ ಮೊದಲ ಹ್ಯಾಟ್ರಿಕ್ ಒಲಿಂಪಿಕ್ ಚಿನ್ನದ ಪದಕಗಳನ್ನು ಪೂರ್ಣಗೊಳಿಸಲು ಸಹಾಯ ಮಾಡುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದರು.

ಹಿರಿಯ ಶಿಕ್ಷಕ ಹೊನ್ನೂರಲಿ ಆದೋನಿ ಮಾತನಾಡುತ್ತಾ

ಧ್ಯಾನ ತನ್ನ ಕಲೆಗೆ ಎಷ್ಟು ಸಮರ್ಪಿತನಾಗಿದ್ದನೆಂದರೆ ತನ್ನ ನಿಯಮಿತ ಹಗಲಿನ ಕೆಲಸಗಳು ಮುಗಿದ ನಂತರ ರಾತ್ರಿಯಲ್ಲಿ ಹಾಕಿ ಅಭ್ಯಾಸ ಮಾಡುತ್ತಿದ್ದನು, ಇದ–ರಿಂದಾಗಿ ಅವನಿಗೆ ಧ್ಯಾನ ಚಂದ ಎಂಬ ಅಡ್ಡಹೆಸರು ಬಂದಿತು.

ಅವರ ಆತ್ಮಚರಿತ್ರೆಗಳ ಪ್ರಕಾರ, ಚಂದ 1926 ರಿಂದ 1949 ರವರೆಗೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಆಡಿದರು, ಅಂತರರಾಷ್ಟ್ರೀಯ ವೃತ್ತಿಜೀವನದಲ್ಲಿ 185 ಪಂದ್ಯಗಳಲ್ಲಿ 570 ಗೋಲುಗಳನ್ನು ಗಳಿಸಿದರು. 1956 ರಲ್ಲಿ ಅವರು ಸೈನ್ಯದಿಂದ ಮೇಜರ್ ಹುದ್ದೆಯೊಂದಿಗೆ ನಿವೃತ್ತರಾದರು ಮತ್ತು ಅದೇ ವರ್ಷ, ಭಾರತ ಸರ್ಕಾರವು ಅವರಿಗೆ ದೇಶದ ಮೂರನೇ ಅತ್ಯುನ್ನತ ನಾಗರಿಕ ಗೌರವವಾದ ಪದ್ಮಭೂಷಣವನ್ನು ನೀಡಿತು.

ವಲಯ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭ ನಿರ್ವಹಿಸಲಾಯಿತು.

ಕ್ರೀಡೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಶಾಲೆಯ ದೈಹಿಕ ಶಿಕ್ಷಕರಾದ ಶರಣಪ್ಪ ವೀರಾಪುರ ಅವರು ಕ್ರೀಡಾ ಮಾಹಿತಿ ಹೊಂದಿರುವ ಫ್ಲೆಕ್ಸ್‌ಗಳನ್ನ ನೀಡಿದ್ದಕ್ಕಾಗಿ ಅವರಿಗೆ ಶಾಲಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಗೌರವ ಸನ್ಮಾನವನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಹಿರಿಯ ಶಿಕ್ಷಕರಾದ ರೇವಣಸಿದ್ದಪ್ಪ,ಬಸವರಾಜ್ ಮೇಟಿ, ವೀರೇಶ್ ಗಡಾದ, ಹಾಗೂ ಇತರರು ಹಾಜರಿದ್ದರು.

# ಘನತ್ಯಾಜ್ಯ ವಿಲೆಗೆ ವಿಳಂಬ: ಪಾಲಿಕೆಯ ಪರಿಸರ ಅಭಿಯಂತರರ ಮೇಲೆ ಸುಮೋಟೊ ಕೇಸ್



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 29: ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಎರಡನೇ ದಿನವಾದ ಆಗಸ್ಟ್ 29ರಂದು ಬೆಳಗ್ಗೆಯಿಂದಲೇ ಅನಿರೀಕ್ಷಿತ ಭೇಟಿ ಮುಂದುವರೆಸಿದರು.

ಮೊದಲಿಗೆ ಹೈದ್ರಾಬಾದ್ ರಸ್ತೆಯಲ್ಲಿನ ನೀರು ಶುದ್ಧೀಕರಣ ಘಟಕಕ್ಕೆ ಭೇಟಿ ನೀಡಿದರು. ಅಲ್ಲಿಂದ ನೇರವಾಗಿ ಯಕ್ಲಾಸಪುರ ಗ್ರಾಮದ ಬಳಿಯಲ್ಲಿನ ಘನ ತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಘಟಕಕ್ಕೆ ತೆರಳಿ ಪರಿಶೀಲಿಸಿದರು.

ಈ ಘಟಕದಲ್ಲಿ ಘನ ತ್ಯಾಜ್ಯ ಹೀಗೇಕೆ ಬಿದ್ದಿದೆ. ಕಸ ಹೀಗೆ ಗುಡ್ಡೆಯಾಗಿ ಬಿದ್ದು ಎಷ್ಟು ವರ್ಷಗಳಾಗಿವೆ. ಇದನ್ನು ವಿಲೇ ಮಾಡಲು ತೊಂದರೆ ಏನು? ಎಂದು ಇದೆ ವೇಳೆ ಉಪ ಲೋಕಾಯುಕ್ತರು, ರಾಯಚೂರು ಮಹಾನಗರಪಾಲಿಕೆಯ ಅಧಿಕಾರಿಗಳು ಮತ್ತು ಪರಿಸರ ಅಭಿಯಂತರರಿಗೆ ಪ್ರಶ್ನಿಸಿದರು.

ಈ ಘನ ತ್ಯಾಜ್ಯ ವಿಲೇಗೆ ಅನುದಾನ ಬಂದಿದೆ. ಟೆಂಡರ್ ಪ್ರಕ್ರಿಯೆ ನಡೆದಿದೆ ಎಂದು ಅಧಿಕಾರಿಗಳು ಪ್ರತಿಕ್ರಿಯಿಸಿದರು.

ರಾಶಿರಾಶಿಯಾಗಿ ಕಸ ಬಿದ್ದು, ಅದರ ಮೇಲೆ ಗಿಡಗಳು ಬೆಳೆದರು ಇದರ ವಿಲೆಗೆ ವಿಳಂಬ ಮಾಡಿದ್ದು ಅಕ್ಷಮ್ಯ ಎಂದು ಉಪ ಲೋಕಾಯುಕ್ತರು ಆಕ್ರೋಶ ವ್ಯಕ್ತಪಡಿಸಿ ಸುಮೋಟೋ ಕೇಸ್ ದಾಖಲಿಸಿದರು.

# ಯುವಕರಿಂದ ಸರ್ವಧರ್ಮ ಸಮನ್ವಯದ ಗಣೇಶೋತ್ಸವ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ತಾಲ್ಲೂಕಿನ ಹೊಸಲಿಂಗಾಪುರ ಗ್ರಾಮದ ಹೆಚ್.ಜಿ. ರಾಮುಲು ಕಾಲೋನಿಯ ಸಾಯಿ ಬಾಬಾ ಗುಡಿಯ ಆವರಣವು ಶುಕ್ರವಾರ ಧಾರ್ಮಿಕ ಸೌಹಾರ್ದದ ಸಂಕೇತವಾಗಿ ಮಾರ್ಪಟ್ಟಿತು. ಸ್ಥಳೀಯ ಯುವಕರು ಮೊದಲ ಬಾರಿಗೆ ಗಣೇಶೋತ್ಸವವನ್ನು ವಿಶಿಷ್ಟರೀತಿಯಲ್ಲಿ ಆಚರಿಸಿ, "ಸರ್ವ ಧರ್ಮ ಸಮನ್ವಯ – ಎಲ್ಲ ಧರ್ಮ ಒಂದೇ" ಎಂಬ ಘೋಷಣೆಯ ಮೂಲಕ ಸಮಾಜಕ್ಕೆ ಏಕತೆಯ ಸಂದೇಶ ಸಾರಿದರು.

ಕಾರ್ಯಕ್ರಮದ ಅಂಗವಾಗಿ ವಿವಿಧ ಧರ್ಮದ ಪ್ರತಿನಿಧಿ ಯುವಕರು ಸೇರಿ ದೀಪ ಬೆಳಗಿಸಿ, ಗಣೇಶನಿಗೆ ಪೂಜೆ ಸಲ್ಲಿಸಿದರು. ಭಜನೆ, ಪ್ರಾರ್ಥನೆ, ವಚನಪಾಠ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ನಡೆದಿದ್ದು, ಧರ್ಮಾಂತರ ಸೌಹಾರ್ದದ ಸಜೀವ ಚಿತ್ರಣ ಮೂಡಿಸಿತು.

ಸಾಮರಸ್ಯ, ಪ್ರೀತಿ ಮತ್ತು ಸಹಬಾಳ್ವೆಯ ಸಂದೇಶವನ್ನು ಹಬ್ಬದ ಸಂಭ್ರಮದೊಂದಿಗೆ ಸಾರುವ ಉದ್ದೇಶದಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಲಾಯಿತು. ಹಿರಿಯರು, ನಾಗರಿಕರು ಹಾಗೂ ಮಕ್ಕಳು ಭಾರೀ ಸಂಖ್ಯೆಯಲ್ಲಿ ಪಾಲ್ಗೊಂಡು, ಸಾಮಾನ್ಯ ಧಾರ್ಮಿಕ ಆಚರಣೆಯನ್ನು ಸೌಹಾರ್ದದ ಉತ್ಸವವನ್ನಾಗಿ ಪರಿವರ್ತಿಸಿದರು.

ಹಬ್ಬದ ಅಂತ್ಯದಲ್ಲಿ ಭಕ್ತರಿಗೆ ಕೇಸರಿಬಾತ್ ಹಾಗೂ ಪಲಾವ್ ಸೇರಿದಂತೆ ವಿಶೇಷ ಪ್ರಸಾದವನ್ನು ವಿತರಿಸಲಾಯಿತು. ಈ ವಿಶೇಷ ಗಣೇಶೋತ್ಸವಕ್ಕೆ ಸ್ಥಳೀಯ ಯುವಕರಾದ ಮಣಿಕಂಠ, ದಸ್ತೇಗೀರ್, ಗಣೇಶ್, ನಿಯಾಜಿ ಹುಸೇನ್, ಅಮಿತ್ ಕುಮಾರ್ ಮತ್ತಿತರರು ಮುನ್ನಡೆಸಿದ್ದು, ಉತ್ಸವವನ್ನು ಯಶಸ್ವಿಯಾಗಿ ನೆರವೇರಿಸಿದರು.

# ಎಕರೆಗೆ ರೂ. 25 ಸಾವಿರ ಪರಿಹಾರಕ್ಕೆ ಒತ್ತಾಯ



ಬೀದರ್: ಅತಿವೃಷ್ಟಿಯಿಂದ ಜಿಲ್ಲೆಯಲ್ಲಿ ಬೆಳೆ ಹಾನಿಗೊಳಗಾದ ರೈತರಿಗೆ ಎಕರೆಗೆ ರೂ. 25 ಸಾವಿರ ಪರಿಹಾರ ಕೊಡಬೇಕು ಎಂದು ಜಿಲ್ಲಾ ಉಪ್ಪಾರ ಸಮಾಜದ ಅಧ್ಯಕ್ಷ ತಾನಾಜಿ ಸಗರ್ ಒತ್ತಾಯಿಸಿದ್ದಾರೆ.

ಜಿಲ್ಲೆಯಲ್ಲಿ ಸುರಿದ ಸತತ ಮಳೆಯಿಂದಾಗಿ ಮುಂಗಾರು ಬೆಳೆಗಳಾದ ಹೆಸರು, ಉದ್ದು, ಸೋಯಾಬೀನ್, ತೊಗರಿ ಹಾಗೂ ಹತ್ತಿ ಸಂಪೂರ್ಣ ಹಾಳಾಗಿವೆ ಎಂದು ತಿಳಿಸಿದ್ದಾರೆ.

ಸಾಲ ಮಾಡಿ ಬಿತ್ತನೆ ಮಾಡಿದ್ದ ಅನೇಕ ರೈತರು ಈ ಬಾರಿ ಬಂಪರ್ ಬೆಳೆಯ ನಿರೀಕ್ಷೆ ಇಟ್ಟುಕೊಂಡಿ–ದ್ದರು. ಆದರೆ, ಮಳೆ ನೀರಲ್ಲಿ ಆ ನಿರೀಕ್ಷೆಗಳೆಲ್ಲ ಕೊಚ್ಚಿಕೊಂಡು ಹೋಗಿವೆ. ಇದರಿಂದಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದ್ದಾರೆ.

ಸರ್ಕಾರ ಕೂಡಲೇ ಬೆಳೆ ನಷ್ಟದ ವಾಸ್ತವ ಸಮೀಕ್ಷೆ ನಡೆಸಬೇಕು. ವಿಳಂಬ ಮಾಡದೆ ರೈತರ ನೆರವಿಗೆ ಧಾವಿಸಬೇಕು ಎಂದು ಆಗ್ರಹಿಸಿದ್ದಾರೆ.

# ಮಹಾರಾಜ ಗಣೇಶ ಮಂಡಳಿಗೆ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ಗಣೇಶ ಮಹಾ ಮಂಡಳದ ಪದಾಧಿಕಾರಿಗಳು ಇಲ್ಲಿಯ ಶಿವನಗರ ಉತ್ತರದ ಗೊಳ್ಳಿ ಲೇಔಟ್‌ನಲ್ಲಿ ಪ್ರತಿಷ್ಠಾಪಿಸಿರುವ ಮಹಾರಾಜ ಗಣೇಶ ಮಂಡಳಿಯ ಗಣೇಶ ಮಂಟಪಕ್ಕೆ ಶುಕ್ರವಾರ ಭೇಟಿ ನೀಡಿದರು.

ಗಣೇಶ ಮಹಾ ಮಂಡಳದ ಪ್ರಧಾನ ಕಾರ್ಯದರ್ಶಿ ಬಾಬುವಾಲಿ, ಮುಖಂಡರಾದ ಸೋಮಶೇಖರ ಪಾಟೀಲ ಗಾದಗಿ, ಸಂಜುಕುಮಾರ ಪಾಟೀಲ, ದೀಪಕ್ ವಾಲಿ, ರಾಜು ಚಿಂತಾಮಣಿ, ಬಂಡಯ್ಯ ಸ್ವಾಮಿ, ಕಾಲೊನಿಯ ನಾಗೇಶ ರೆಡ್ಡಿ, ಜಗನ್ನಾಥ ರೆಡ್ಡಿ ಮತ್ತಿತರರು ಮಂಟಪವನ್ನು ವೀಕ್ಷಿಸಿದರು.

ಸುಂದರ ಮಂಟಪ ನಿರ್ಮಿಸಿ, ಆಕರ್ಷಕ ಮೂರ್ತಿ ಪ್ರತಿಷ್ಠಾಪಿಸಿ, ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಗಣೇಶ ಉತ್ಸವ ಆಚರಿಸುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

# ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.29–ಪ್ರಸಕ್ತ 2025–26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಕಲಬುರಗಿ ಜಿಲ್ಲೆಯಲ್ಲಿನ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿನ ಖಾಲಿಯಿರುವ ಸೀಟುಗಳಿಗೆ ಹಾಗೂ ಎಲ್ಲಾ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳಲ್ಲಿನ ಎಲ್ಲಾ ಮೆಟ್ರಿಕ್ ನಂತರದ ಕೋರ್ಸ್‌ಗಳ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶದ ಮೂಲಕ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಆಸಕ್ತಿಯುಳ್ಳ ಅರ್ಹ ವಿದ್ಯಾರ್ಥಿಗಳು ൃಣಣಠಿ://ಠಿ.ಞಚಿಡಿಟಿಚಿಣಚಿಞಚಿ.ರಿಠಿ.ಟಿ ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಸೆಪ್ಟೆಂಬರ್ 15 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮತ್ತು ಅಫಜಲಪೂರ ತಾಲ್ಲೂಕಾ ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು–9686255039, ಜೇವರ್ಗಿ–9535775141, ಆಳಂದ–9742305668, ಸೇಡಂ–7892369798, ಚಿತ್ತಾಪೂರ–9663126895 ಹಾಗೂ ಕಲಬುರಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿ ದೂರವಾಣಿ ಸಂಖ್ಯೆ 08472–247260 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# PMFME : ಜಿಲ್ಲಾ ಮಟ್ಟದ ಅರಿವು ಕಾರ್ಯಕ್ರಮ ಇಂದು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 29 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆಗಳು, ಕೆಪೆಕ್ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ಆಗಸ್ಟ 30 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಯೋಜನೆಯಡಿ ಪಿಎಂಎಫ್‌ಎಂಇ ಯೋಜನೆಯ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸುವರು.

ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕರು ಹಾಗೂ ನವದೆಹಲಿ ಕರ್ನಾಟಕ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ದಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

# ಸೆ.9 ರಂದು ಸ್ಥಿರಾಸ್ತಿಗಳ ಬಹಿರಂಗ ಲಿಲಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 29–: ಬಾದಾಮಿ ಜೆ.ಎಂ.ಎಫ್.ಸಿ ನ್ಯಾಯಾಲಯ, ಗುಳೇದಗುಡ್ಡ ಸಂಚಾರಿ ಪೀಠ ಹಾಗೂ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ದಂಡದ ಹಣ ಪಾವತಿಸಲು ವಿಫಲರಾದ ಹಿನ್ನಲೆಯಲ್ಲಿ ಬಸವರಾಜ ಮಲ್ಲಿಕಾರ್ಜುನ ಬನ್ನಿ ಇವರಿಗೆ ಸೇರಿದ ಗುಳೇದಗುಡ್ಡದಲ್ಲಿರುವ ಸ್ಥಿರಾಸ್ತಿ ಸಿಟಿಎಸ್ ನಂ.1005, ಕ್ಷೇತ್ರ 334.45 ಚ.ಮೀ ಇದ್ದು, ಸದರಿ ಸ್ಥಿರಾಸ್ತಿಯನ್ನು ಸೆಪ್ಟೆಂಬರ 9 ರಂದು ಬೆಳಿಗ್ಗೆ 10 ಗಂಟೆಗೆ ಗುಳೇದಗುಡ್ಡ ಗ್ರಾಮ ಚಾವಡಿ ಬಹಿರಂಗ ಲಿಲಾವು ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಗುಳೇದಗುಡ್ಡ ತಹಶೀಲ್ದಾರ ಕಾರ್ಯಾಲಯವನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳುವಂತೆ ಗುಳೇದಗುಡ್ಡ ತಹಶೀಲ್ದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೆಕ್ಕಪರಿಶೋಧನಾ ವರದಿ ಸಲ್ಲಿಕೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 29: ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ನಿಯಮ 63 ರಡಿ ಲೆಕ್ಕಪರಿಶೋಧನೆ ಕೈಗೊಂಡ ವರದಿಗಳು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿಗಳ ಅಧಿನಿಯಮ 1997 ಪ್ರಕರಣ 34 ರನ್ವಯ ಪ್ರತಿಯೊಂದು ಸಹಕಾರ ಸಂಘಗಳು ಹಾಗೂ ಸೌಹಾರ್ದ ಸಹಕಾರಿಗಳು ಸಹಕಾರ ವರ್ಷ ಮುಕ್ತಾಯವಾಗಿರುವುದರಿಂದ, ಸಹಕಾರ ಸಂಘಗಳು ಹಾಗೂ ಸೌಹಾರ್ದ ಸಹಕಾರಿಯ ಲೆಕ್ಕಪತ್ರಗಳ ಲೆಕ್ಕಪರಿಶೋಧಿತ 'ಆರ್ಥಿಕ ತಃಖ್ತೆಗಳ' ವರದಿಗಳನ್ನು ಕಾರ್ಯವ್ಯಾಪ್ತಿಯ ನಿಬಂಧಕರಿಗೆ ಕಡ್ಡಾಯವಾಗಿ ಸಲ್ಲಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಸಹಕಾರ ಸಂಘಗಳು ಹಾಗೂ ಸೌಹಾರ್ದ ಸಹಕಾರಿಯ ಕಾರ್ಯನಿರ್ವಹಣೆ ಸ್ಥಗಿತವಾಗಿದೆ ಎಂದು ಪರಿಗಣಿಸಿ, ಕಾನೂನು ರಿತ್ಯ ಮುಂದಿನ ಕ್ರಮವಿಡಲಾಗುವುದು ಎಂದು ಬಾಗಲಕೋಟೆ ಸಹಕಾರಿ ಸಂಘಗಳ ಉಪನಿಬಂಧಕರಾದ ದಾನಯ್ಯ ಹಿರೇಮಠ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ನಕಲಿ ಅಂಕಪಟ್ಟಿ ಸಲ್ಲಿಕೆ : ಮೂವರು ಗ್ರಾಮಲೆಕ್ಕಿಗರಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 29 : ಪಿಯುಸಿ ದ್ವಿತೀಯ ವರ್ಷದ ನಕಲಿ ಅಂಕಪಟ್ಟಿ ಸಲ್ಲಿಸಿ ಗ್ರಾಮಲೆಕ್ಕಿಗ ಹುದ್ದೆ ಪಡೆದಿದ್ದ ಮೂವರಿಗೆ ಹಿರಿಯ ದಿವಾಣಿ ಮತ್ತು ಸಿಜೆಎಂ ನ್ಯಾಯಾಲಯ ನಾಲ್ಕು ವರ್ಷ ಜೈಲು ಶಿಕ್ಷೆಯ ಜೊತೆಗೆ 25 ಸಾವಿರ ದಂಡ ವಿಧಿಸಿ ಆದೇಶ ಹೊರಡಿಸಿದೆ.

2011ರಲ್ಲಿ ಗ್ರಾಮ ಲೆಕ್ಕಗರ ಹುದ್ದೆಗೆ ನೇರ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿತ್ತು. ಹುದ್ದೆ ಪಡೆಯಲು ನಕಲಿ ಅಂಕಪಟ್ಟಿ ಸಲ್ಲಿಸಿ ನವ್ಯಶ್ರೀ ದೇವರಾಜ್, ನಟರಾಜ್ ಮುನಿಯಪ್ಪ ಮತ್ತು ಸುಬ್ರಹ್ಮಣಿ ಎನ್.ಸಿ ಇವರು ಹುದ್ದೆ ಪಡೆದಿದ್ದರು. ಅವರ ವಿರುದ್ಧ ಬೀಳಗಿ ಮತ್ತು ನವನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದವು. ಈ ಕುರಿತು ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಲಾಗಿತ್ತು, ಪ್ರಕರಣ ಕೈಗೆತ್ತಿಕೊಂಡ ಹಿರಿಯ ದಿವಾಣಿ ಮತ್ತು ಸಿಜೆಎಂ ನ್ಯಾಯಾಲಯ ಆರೋಪಿಗೆ ಶಿಕ್ಷಣೆ ಮತ್ತು ದಂಡ ವಿಧಿಸಿ ತೀರ್ಪು ನೀಡಿದೆ. ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ಮಹಾಂತೇಶ ಮಸಳಿ ಸರ್ಕಾರದ ಪರವಾಗಿ ವಾದ ಮಂಡಿಸಿದ್ದರು.

# ಆಂತರಿಕ ದೂರು ಸಮಿತಿ ರಚನೆ ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 29 – 2013ರ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ. ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಕಾಯ್ದೆಯ ಅನುಷ್ಠಾನಕ್ಕಾಗಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಆಗಸ್ಟ್ 12ರಂದು ನೀಡಿರುವ ನಿರ್ದೇಶನಗಳನ್ವಯ ಕಾಯ್ದೆಯು ಅನ್ವಯಿಸುವ 10 ಮತ್ತು 10ಕ್ಕಿಂತ ಹೆಚ್ಚಿನ ಕಾರ್ಮಿಕರನ್ನು ಹೊಂದಿರುವ ಪ್ರತಿ ಸಂಸ್ಥೆಯ ಮಾಲೀಕರು ತಮ್ಮ ಸಂಸ್ಥೆಯಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ಆದಾಗ್ಯೂ, ಹಲವು ಸಂಸ್ಥೆಗಳು ಇದುವರೆಗೂ ಆಂತರಿಕ ಸಮಿತಿಯನ್ನು ರಚಿಸದೇ ಮತ್ತು ರಚಿಸಿರುವ ಬಗ್ಗೆ ಮಾಹಿತಿ ನೀಡದಿರುವುದು ಕಂಡು ಬಂದಿರುತ್ತದೆ. ಹಾಗಾಗಿ, ಸರ್ವೋಚ್ಚ ನ್ಯಾಯಾಲಯವು ನೀಡಿರುವ ನಿರ್ದೇಶನದಂತೆ, ಆಂತರಿಕ ಸಮಿತಿಯನ್ನು ರಚಿಸದ ಎಲ್ಲಾ ಸಂಸ್ಥೆಗಳು ಈ ಕೂಡಲೇ ಅಂತರಿಕ ದೂರು ಸಮಿತಿಯನ್ನು ರಚನೆ ಮಾಡಿ. ಸಮಿತಿ ರಚಿಸಿದ ಆದೇಶದ ಪ್ರತಿಯನ್ನು ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿಗೆ ಕೂಡಲೇ ಸಲ್ಲಿಸಿ, ಅದರ ಪ್ರತಿಯನ್ನು ಕಾರ್ಮಿಕ ಅಧಿಕಾರಿಗಳ ಕಛೇರಿ, ಬಾಗಲಕೋಟೆ ಉಪ ವಿಭಾಗ, ಕೊಠಡಿ ಸಂಖ್ಯೆ 243 ಎರಡನೆ ಮಹಡಿ ಜಿಲ್ಲಾಡಳಿತ ಭವನ ನವನಗರ ಬಾಗಲಕೋಟೆ ಸಲ್ಲಿಸಬೇಕು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆ ಮೂಲಕ ತಿಳಿಸಿದ್ದಾರೆ.



ಯಾದಗಿರಿ: ಜಿಲ್ಲಾಧಿಕಾರಿಗಳು ಶಹಾಪುರ ತಾಲೂಕಿನಲ್ಲಿ ಸುರಿದ ಮಳೆಯಿಂದಾಗಿ ಹೊತಪೇಟ ಗ್ರಾಮದ ಜಮೀನಲ್ಲಿ ನೀರು ನಿಂತಿರುವ ಕುರಿತು ವೀಕ್ಷಣೆ ಮಾಡಿ ಮಳೆಯಿಂದ ಹಾನಿಯಾಗಿರುವ ಬೆಳೆಗಳ ಕುರಿತು ಜಂಟಿಯಾಗಿ ಸಮೀಕ್ಷೆ ಕೈಗೊಂಡು ಜಂಟಿಯಾಗಿ ಹಾನಿಯ ವಿವರ ಸಲ್ಲಿಸುವಂತೆ ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

# ಮಹಿಳಾ ಕ್ರಿಕೇಟ್ : ಸಜ್ಜಲಶ್ರೀ ನರ್ಸಿಂಗ್ ಕಾಲೇಜ ತಂಡಕ್ಕೆ ಜಯ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 29 : ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಶುಕ್ರವಾರ ನಡೆದ ಮಹಿಳಾ ಕ್ರೀಕೆಟ್ ಪಂದ್ಯಾವಳಿಯಲ್ಲಿ ಬಾಗಲಕೋಟೆಯ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯ ತಂಡ (ಪ್ರಥಮ) ಸ್ಥಾನ ಪಡೆದರೆ, ಬಿವಿವ ಸಂಘದ ಫಿಜಿಯೋಥೆರಪಿ ಕಾಲೇಜ ತಂಡ (ದ್ವಿತೀಯ) ಸ್ಥಾನ ಪಡೆದುಕೊಂಡವು.

ಕ್ರಿಕೇಟ್ ಪಂದ್ಯಾವಳಿಯಲ್ಲಿ ಒಟ್ಟು 6 ಮಹಿಳಾ ತಂಡಗಳು ಭಾಗವಹಿಸಿದ್ದವು.

# ಅಲೆಮಾರಿ ಸಮುದಾಯಗಳಿಗೆ ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಬೃಹತ್ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಅಲೆಮಾರಿ ಸಮುದಾಯಗಳಿಗೆ ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಚೆನ್ನದಾಸರ ಕ್ಷೇಮಾಭಿವೃದ್ಧಿ, ಸೇರಿದಂತೆ ಇತರೆ ವಿವಿಧ ಸಮುದಾಯಗಳು ನಗರದ ಜಿಲ್ಲಾಡಳಿತ ಭವನದ ಎದುರು ಗುರುವಾರ ವಿನೂತನ ರೀತಿಯಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ಅಲೆಮಾರಿ ಸಮುದಾಯದ ಕೆಲವರು ಭಾವನಾತ್ಮಕ ವಾಗಿ ಕಣ್ಣಿರಿಟ್ಟು, ಸಮುದಾಯಗಳಿಗೆ ಆಗಿರುವ ಅನ್ಯಾಯ ಸರಿಪಡಿಸುವಂತೆ ಒತ್ತಾಯಿಸಿದರು.

ಅಲೆಮಾರಿಗಳಿಗೆ ಶೇ 1ರ ಪ್ರತ್ಯೇಕ ಒಳಮೀಸಲಾತಿ ಕೊಡಿ ಇಲ್ಲವೇ ಭಿಕ್ಷೆ, ಬೇಟೆಯಾಡಲು ಅವಕಾಶ ನೀಡಿ ಎಂದು ಆಗ್ರಹಿಸಿ ನಗರದಲ್ಲಿ ನೂರಾರು ಜನ ತಮ್ಮ ಸಾಂಪ್ರದಾಯಿಕ ವೇಷಭೂಷಣಗಳು, ಕಲಾ ಪ್ರದರ್ಶನ ಮೂಲಕ ಪ್ರತಿಭಟನೆ ನಡೆಸಿದರು.

ಪ್ರತಿಭಟನಾ ಮೆರವಣಿಗೆ ಅಶೋಕ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ನಡೆಯಿತು. ಸಾಂಪ್ರದಾಯಿಕ ವೇಷ ಭೋಷಣ ತೊಟ್ಟ ಕಲಾವಿದರು ಮೆರವಣಿಗೆ ಉದ್ದಕ್ಕೂ ತಮ್ಮ ಕಲೆ ಪ್ರದರ್ಶಿಸುತ್ತ ಪ್ರತಿಭಟನೆ ನಡೆಸಿದರು ಡಿ ಸಿ ಕಚೇರಿಯ ಮುಂದೆ ಪರಿಣಾಮಕಾರಿಯಾಗಿ ಸಾಗಿ ಮುತ್ತಿಗೆ ಹಾಕಲು ಯತ್ನಿಸಿದರು ನಂತರ ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದ ಪ್ರತಿಭಟನಾ ಕಾರರು ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು.

ವೇಷ ಗಾರರು: ಅಲೆಮಾರಿಗಳ ಜೀವನ ಪದ್ಧತಿ, ಅವರ ಕಲೆ, ಅವರು ನಡೆಸುವ ಅತಂತ್ರ ಬದುಕಿನ ಚಿತ್ರಣವನ್ನು ಬೀದಿಗಳಲ್ಲಿ ಪ್ರದರ್ಶಿಸುವ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವ ಪ್ರಯತ್ನ ನಡೆಯಿತು. ಸುಡುಗಾಡು ಸಿದ್ಧರ ಕಲೆ, ಹಗಲು ವೇಷಗಾರರ ಕಲೆ, ಸಿಂಧೊಳ್ಳ ಸಮಾಜದವರ ಕಲೆ, ಹಕ್ಕಿಪಿಕ್ಕಿಗಳು, ಬುಡುಬುಡಿಕೆಯವರ ಜೀವನ ಸಹಿತ ಹಲವಾರು ಅಲೆಮಾರಿ ಸಮುದಾಯಗಳ ಜೀವನ ವೃತ್ತಾಂತ ಪ್ರತಿಭಟನೆಯ ಮೂಲಕವೇ ಪ್ರತಿಭಟನೆ ನಡೆಯಿತು. ಒತ್ತಾಯ: ಒಳಮೀಸಲಾತಿಯನ್ನು ಜಾರಿ ಮಾಡುವ ಒತ್ತಡದಲ್ಲಿ ಸರ್ಕಾರ ಅಲೆಮಾರಿಗಳಂತಹ ಧ್ವನಿ ಇಲ್ಲದವರ ಧ್ವನಿ ಅಡಗಿಸಿದ್ದು ತಪ್ಪು. ಅಲೆಮಾರಿ ಸಮುದಾಯಗಳಿಗೆ ಮರಣ ಶಾಸನವನ್ನು ಸರ್ಕಾರ ಬರೆದುಬಿಟ್ಟಿದೆ, ಪ್ರತ್ಯೇಕ ಶೇ 1ರಷ್ಟು ಮೀಸಲಾತಿ ನೀಡುವ ಮೂಲಕ ನ್ಯಾಯ ನೀಡಲೇಬೇಕು ಎಂದು ಒತ್ತಾಯಿಸಿದರು. ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ್ ದಾಸ್ ಆಯೋಗದ ವರದಿಯಲ್ಲಿ ಸರ್ಕಾರದ ಸಮೀಕ್ಷೆಯ ದತ್ತಾಂಶಗಳ ಹಿನ್ನೆಲೆಯಲ್ಲಿ 59 ಸೂಕ್ಷ್ಮ ಮತ್ತು ಅಲೆಮಾರಿ ಪರಿಶಿಷ್ಟ ಜಾತಿಗಳ ಸಮೂಹಕ್ಕೆ ಪ್ರವರ್ಗ–ಎ ರಲ್ಲಿ ವರ್ಗೀಕರಿಸಿರುವುದು ನ್ಯಾಯಸಮ್ಮತವಾಗಿತ್ತು. ಹೀಗಾಗಿ 59 ಸೂಕ್ಷ್ಮ ಮತ್ತು ಅಲೆಮಾರಿ ಪರಿಶಿಷ್ಟ ಜಾತಿಗಳನ್ನು ಪ್ರವರ್ಗ–ಎ ರಲ್ಲಿಯೇ ಇರಿಸಿ ಶೇ 1ರಷ್ಟು ಒಳ ಮೀಸಲಾತಿ ನಿಗದಿಗೊಳಿಸಬೇಕು ಎಂದು ಈ ಸಂದರ್ಭದಲ್ಲಿ ಆಗ್ರಹಿಸಿಸಲಾಯಿತು.

ರಾಷ್ಟ್ರೀಯ ಕ್ರೀಡಾ ದಿನಾಚರಣೆ । ಮೇಜರ್ ಧ್ಯಾನಚಂದ ಭಾವಚಿತ್ರಕ್ಕೆ ಪುಷ್ಪಾರ್ಚನೆ

# ವಿವಿಧ ಕ್ರೀಡಾಕೂಟಗಳಿಗೆ ಸಂಸದ ಗದ್ದಿಗೌಡರ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 29– ಅಂತರರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಂಡ ವಿವಿಧ ಕ್ರೀಡಾಕೂಟಗಳಿಗೆ ಸಂಸದ ಪಿ.ಸಿ.ಗದ್ದಿಗೌಡರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಯೋಗದಲ್ಲಿ ಶುಕ್ರವಾರ ಹಮ್ಮಿಕೊಂಡ ಕ್ರೀಡಾಕೂಟದಲ್ಲಿ ಕ್ರಿಕೇಟ್ ಆಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಭಾರತ ಶ್ರೇಷ್ಠ ಹಾಕಿ ಆಟಗಾರರಲ್ಲಿ ಒಬ್ಬರಾದ ಮೇಜರ್ ಧ್ಯಾನಚಂದ ಅವರ ಜನ್ಮದಿದ ನೆನಪಿಗಾಗಿ ಪ್ರತಿ ವರ್ಷ ಆಗಸ್ಟ 29 ರಂದು ರಾಷ್ಟ್ರೀಯ ಕ್ರೀಡಾ ದಿನಾಚರಣೆನ್ನು ಆಚರಿಸಲಾಗುತ್ತದೆ. ಈ ದಿನ ರಾಷ್ಟ್ರದ ಕ್ರೀಡಾವೀರರನ್ನು ಗೌರವಿಸು ದಿನವಾಗಿದೆ. ಮೇಜರ್ ಧ್ಯಾನಚಂದ ಅವರು ಓಲಂಪಿಕ್ ಚಾಂಪಿಯನ್ ಹಾಕಿಯಲ್ಲಿ ಸತತವಾಗಿ ಮೂರು ಬಾರಿ ಗೆಲುವು ಸಾಧಿಸುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ ಎಂದರು.

ನಮ್ಮ ದಿನನಿತ್ಯಯದ ಜೀವನ ಶೈಲಿ, ಸರ್ವಾಂಗೀನ ಅಭಿವೃದ್ದಿಗೆ ಕ್ರೀಡೆ ಅವಶ್ಯವಾಗಿದೆ. ಕ್ರೀಡೆ ಮನೋರಂಜನೆಯೊಂದಿಗೆ ಮನೋವಿಕಾಸವನ್ನು ಹೆಚ್ಚಿಸುವ ಕ್ಷೇತ್ರವಾಗಿದ್ದು, ದೈಹಿಕವಾಗಿ ಮತ್ತು ಮಾನಸಿಕವಾಗಿ ಆರೋಗ್ಯವಂತರನ್ನಾಗಿ ಮಾಡುವಲ್ಲಿ ಕ್ರೀಡಾ ಚಟುವಟಿಕೆಗಳ ಪಾತ್ರ ಮಹತ್ವವಾಗಿದೆ. ಆರೋಗ್ಯಕರ ಜೀವನಶೈಲಿ ಮತ್ತು ಶಾಂತಿಯುತ ಜಗತ್ತಿಗೆ ಕ್ರೀಡೆ ಮತ್ತು ದೈಹಿಕ ಚಟುವಟಿಕೆಗಳ ಕೊಡುಗೆ ಅಪಾರವಾಗಿದೆ. ಕ್ರೀಡಾ ಮನೋಭಾವನೆಯನ್ನು ಅಳವಡಿಸಿಕೊಂಡು ಸೋಲು ಗೆಲುವನ್ನು ಸಮಾನವಾಗಿ ತೆಗೆದುಕೊಂಡು ಹೋದಾಗ ಮಾತ್ರ ನಮ್ಮ ಬದುಕು ಚೆನ್ನಾಗಿರಲು ಸಾದ್ಯವೆಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಮೇಜರ್ ಧ್ಯಾನಚಂದ್ ಅವರು ಹಾಕಿ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಿ ಚಾಂಪಿಯನ್ ಪಟ್ಟ ಪಡೆದುಕೊಂಡಿದ್ದಾರೆ. ಅದೇ ರೀತಿಯಲ್ಲಿ ಅನೇಕ ಕ್ರೀಡಾಪಟುಗಳು ದೇಶಕ್ಕೆ ಕೀರ್ತಿ ತಂದಿದ್ದಾರೆ. ಕ್ರೀಡೆಗಳು ಕೇವಲ ಮನೋರಂಜನೆ ಮಾತ್ರ ಅಲ್ಲ, ದೈಹಿಕ ಮತ್ತು ಮಾನಸಿಕವಾಗಿ ಸದೃಡರನ್ನಾಗಿ ಮಾಡುತ್ತದೆ. ಜೀವನದಲ್ಲಿ ಶಿಸ್ತು, ಸಹಕಾರ, ಸಹನೆ, ಧೈರ್ಯ, ಗುರಿ, ವಿನಯ ಮುಖ್ಯವಾಗಿದ್ದು, ಇವುಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕಿದೆ ಎಂದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಆಚರಿಸುವ ಮುಖ್ಯ ಉದ್ದೇಶದ ದೇಶದ ಉತ್ತಮ ಕ್ರೀಡಾಪಟುಗಳನ್ನು ನೆನಪಿಸಿಕೊಳ್ಳುವ ದಿನವಾಗಿದೆ. ದೈಹಿಕವಾಗಿ, ಮಾನಸಿಕವಾಗಿ ಸದೃಡವಾಗಲು ಕ್ರೀಡೆಗಳಲ್ಲಿ ಭಾಗವಹಿಸಬೇಕು. ಜೀವನದಲ್ಲಿ ಸೋಲು–ಗೆಲುವು ಇದ್ದೇ ಇರುತ್ತದೆ. ಅದನ್ನು ಸಮನಾಗಿ ತೆಗೆದುಕೊಂಡು ಮುಂದೆ ಸಾಗಬೇಕಿದೆ ಎಂದರು.

ಪ್ರಾರಂಭದಲ್ಲಿ ಮೇಜರ್ ಧ್ಯಾನಚಂದ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು. ಅಲ್ಲದೇ ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕರಾದ ಆರ್.ಆರ್.ಪಾಟೀಲ ಕ್ರೀಡಾ ದಿನಾಚರಣೆ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಗುರುಪಾದ ಡೂಗನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೆನಕನಹಳ್ಳಿ ಯಂಕಣ್ಣ ದೇವರ ಮಹಾಮಂಗಳ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆ ಶಹಪುರ್ ತಾಲೂಕಿನ ಬೆನಕನಹಳ್ಳಿ ಗ್ರಾಮದಲ್ಲಿ ಯಂಕಣ್ಣ ಗುರುಗಳು ಸುಮಾರು 18 ವರ್ಷದ ಮೌನಾಚರಣೆ ಆಚರಣೆ ಮಹಾಮಂಗಳ ಕಾರ್ಯಕ್ರಮ.

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರಾವಣ ಮಾಸದಲ್ಲಿ 28 ದಿನಗಳ ಕಾಲ ಮೌನ ವ್ರತ ಅನುಷ್ಠಾನ ಮಾಡುತ್ತಾ ಬರುವರು.

ಜಿಲ್ಲಾಧ್ಯಂತ ಭಕ್ತರಿಗೆ ಬೇಡಿದ ಭವಣೆಯನ್ನು ಹರಸುತ್ತಾ ತಮ್ಮದೇ ಆದ ಕಾಯಕದಲ್ಲಿ ತೊಡಗಿರುವ



ಮಹಾ ಜ್ಞಾನಿಗಳು ಇವರಾಗಿದ್ದು.

18ನೇ ವರ್ಷದ ಸಂಭ್ರಮಾಚರಣೆ ವೇಳೆ ದಿನಾಂಕ 3 /9 /2025ರಂದು ಮಹಾಮಂಗಳ ಕಾರ್ಯಕ್ರಮ ಜರಗಲಿದ್ದು ಅಂದು ಬುಧವಾರ ರಾತ್ರಿ ದಿನದಂದು ಭವ್ಯವಾದ ವಿಜ್ರಮಣೆಯಿಂದ ಭಜನಿ ಕಾರ್ಯಕ್ರಮ ವಿವಿಧ ಹಳ್ಳಿಗಳಿಂದ ಕಲಾವಿದರು ಆಗಮಿಸಲಿದ್ದು.

ದಿನಾಂಕ 4 /9/ 2025 ರಂದು ಬೆಳಿಗ್ಗೆ ಅನುಷ್ಠಾನ ಮಹಾಮಂಗಳ ಕಾರ್ಯಕ್ರಮ ಪೂರ್ಣಗೊಳ್ಳುತ್ತದೆ ಸದ್ಭಕ್ತರು ಕಾರ್ಯಕ್ರಮಕ್ಕೆ ಪಾಲ್ಗೊಂಡು ಪಾವೀನರಾಗಬೇಕೆಂದು ಬೆನಕನಹಳ್ಳಿ ಗ್ರಾಮದ ಭಕ್ತರ ಕೋರಿಕೆ . ಅಂದು ಬರುವ ಭಕ್ತರು ನನ್ನ ಪ್ರಸಾದ ಸೇವೆ ತೆಗೆದುಕೊಂಡು ಪಾವನರಾಗಬೇಕೆಂದು ವಿರೂಪಾಕ್ಷಿ ಕುಂಬಾರ್ ಪತ್ರಿಕೆಗೆ ತಿಳಿಸಿದ್ದಾರೆ.

# ಪಡಿತರ ಅಕ್ಕಿ ಕಳ್ಳಸಾಗಣೆ ನಡೆಯದಂತೆ ಕಠಿಣ ಕ್ರಮ ತೆಗೆದುಕೊಳ್ಳಿ: ರೆಡ್ಡಿ ಶ್ರೀನಿವಾಸ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಅನ್ನಭಾಗ್ಯ ಯೋಜನೆಯಡಿ ನೀಡುತ್ತಿರುವ ಪಡಿತರ ಅಕ್ಕಿಯನ್ನು ಕಳ್ಳಸಾಗಣೆ ಮಾಡುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ ಹಾಗೂ ಜಿಲ್ಲೆಯಲ್ಲಿ ಪಡಿತರ ಅಕ್ಕಿ ಕಳ್ಳಸಾಗಣೆ ನಡೆಯದಂತೆ ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವು ಪಡಿತರ ಧಾನ್ಯಗಳನ್ನು ಮಾರಾಟಕ್ಕೆ ಅವಕಾಶವಿರುವುದಿಲ್ಲ. ಈ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿ ಇ–ಕೆವೈಸಿ ಮಾಡಿಸದ ಪಡಿತರ ಚೀಟಿಗೆ ಇ–ಕೆವೈಸಿ ಮಾಡಿಸುವುದಾಗಿ ನ್ಯಾಯಬೆಲೆ ಅಂಗಡಿಗಳ ಮೂಲಕವೆ ಸಾರ್ವಜನಿಕರಿಗೆ ತಿಳಿ ಹೇಳಬೇಕು. ಪಡಿತರ ವಿತರಿಸುವ ಸಮಯವನ್ನು ಸರ್ಕಾರವು ಹೆಚ್ಚಿಸಿದ್ದು, ಅದರಂತೆ ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುವಂತೆ ಸೂಚಿಸಿ, ಜನರಿಗೆ ಅನುಕೂಲ ಮಾಡಿಕೊಡಬೇಕು. ಆಹಾರ ಸಾಮಾಗ್ರಿಗಳ ವಿತರಣೆಗೂ



ಮುನ್ನ ಅದರ ಗುಣಮಟ್ಟವನ್ನು ಪರಿಶೀಲಿಸಬೇಕು. ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗೃಹಜ್ಯೋತಿ ಯೋಜನೆಯಡಿ ನೋಂದಣಿಯಾಗದಿರುವ ಅರ್ಜಿಗಳನ್ನು ಪರಿಶೀಲಿಸಿ, ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ವಿದ್ಯುತ್ ಬಿಲ್ ಬಾಕಿ ವಸೂಲಾತಿ ಸಂದರ್ಭದಲ್ಲಿ ಜೆಸ್ಕಾಂ ಅಧಿಕಾರಿ, ಸಿಬ್ಬಂದಿಗಳು ಜನರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಗ್ಯಾರಂಟಿ ಯೋಜನೆಗಳು ರಾಜ್ಯ ಸರ್ಕಾರದ ಮಹತ್ವಕಾಂಕ್ಷೆಯ ಸಾಮಾಜಿಕ ಕಾರ್ಯಕ್ರಮವಾಗಿದೆ. ಜನ ಸಾಮಾನ್ಯರ ಏಳ್ಗೆಗಾಗಿ ರಾಜ್ಯ ಸರ್ಕಾರವು ಶಕ್ತಿ ಯೋಜನೆ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಯುವನಿದಿ, ಈ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಯೋಜನೆಗಳ ಅನುಷ್ಠಾನದಲ್ಲಿ ಕೊಪ್ಪಳ ಜಿಲ್ಲೆಯು ಉತ್ತಮ ಪ್ರಗತಿ ಸಾಧಿಸಿದ್ದು, ಮುಂದೆಯೂ ಅದೇ ರೀತಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ಐದು ಗ್ಯಾರಂಟಿ ಯೋಜನೆಗಳ ಪ್ರಗತಿ: ಗೃಹಲಕ್ಷ್ಮೀ ಯೋಜನೆಯಡಿ ಕೊಪ್ಪಳ ಜಿಲ್ಲೆಯ 3,17,804 ಫಲಾನುಭವಿಗಳಿಗೆ ಜೂನ್–2025ರ ಅಂತ್ಯದವರೆಗೆ ಡಿಬಿಟಿ ಮೂಲಕ 1277,14,34,000 ರೂ.ಗಳನ್ನು ಪಾವತಿಸಲಾಗಿದೆ.

ಗೃಹಜ್ಯೋತಿ ಯೋಜನೆಯಡಿ ಜುಲೈ–2025ರ ಅಂತ್ಯದವರೆಗೆ 2,78,151 ಗ್ರಾಹಕರಿಗೆ ಉಚಿತ ವಿದ್ಯುತ್ ಸೌಲಭ್ಯ ದೊರೆತಿದ್ದು, ಇದಕ್ಕಾಗಿ 295.8 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ.

ಕೊಪ್ಪಳ ಜಿಲ್ಲೆಯಲ್ಲಿ 37,204 ಅಂತ್ಯೋದಯ (ಎಎವೈ), 2,91,065 ಪಿ.ಹೆಚ್.ಹೆಚ್ (ಬಿಪಿಎಲ್) ಕಾರ್ಡ್ಗಳಿದ್ದು, ಅನ್ನಭಾಗ್ಯ ಯೋಜನೆಯಡಿ ಹಣದ ಬದಲಾಗಿ 2025ರ ಫೆಬ್ರವರಿ ಮಾಹೆಯಿಂದ ಇಲ್ಲಿಯವರೆಗೂ ಹೆಚ್ಚುವರಿ 5 ಕೆ.ಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. ಇದರ ಜೊತೆಗೆ ಎಎವೈ ಮತ್ತು ಪಿ.ಹೆಚ್.ಹೆಚ್ (ಎನ್.ಎಫ್.ಎಸ್.ಎ ಸೆಂಟ್ರಲ್) ಕಾರ್ಡುಗಳಿಗೆ ಈ ಬಾರಿಯೂ ಜೋಳವನ್ನು ಸಹ ವಿತರಣೆ ಮಾಲಾಗುತ್ತಿದೆ.

ಶಕ್ತಿ ಯೋಜನೆಯಡಿ 2025ರ ಜುಲೈ ಮಾಹೆಯಲ್ಲಿ 32,25,842 ಮಹಿಳೆಯರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದು, ಈ ಯೋಜನೆಯಡಿ ಇಲ್ಲಿಯವರೆಗೆ 303,45,72,493 ರೂ.ಗಳ ಖರ್ಚಾಗಿದೆ.

ಯುವನಿಧಿ ಯೋಜನೆಯಡಿ ಜೂನ್–2025ರಲ್ಲಿ 6,813 ಫಲಾನುಭವಿಗಳು ನೋಂದಣಿಯಾಗಿದ್ದು, ಜೂನ್ ಅಂತ್ಯದವರೆಗೆ ಒಟ್ಟು ಮೊತ್ತ ರೂ. 17.20 ಕೋಟಿಗಳನ್ನು ಪಾವತಿಸಲಾಗಿರುತ್ತದೆ ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ಅಮರೇಶಪ್ಪ ಎಸ್.ಜಿ., ನಾಗರಾಜ ಅರಳಿ, ಗ್ಯಾರಂಟಿ ಯೋಜನೆಗಳ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಸೇರಿದಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು, ಜಿಲ್ಲೆಯ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೀದರ್ ಬ್ರಿಮ್ಸ್ ಆಸ್ಪತ್ರೆಯ ಆವರಣದಲ್ಲಿ ಕಸದ ರಾಶಿ ಸಾರ್ವಜನಿಕರ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಬೀದರ್, ಆ. 29:ಬೀದರ್ ನಗರದ ಹೃದಯಭಾಗದಲ್ಲಿರುವ ಬ್ರಿಮ್ಸ್ ಆಸ್ಪತ್ರೆಯ ಆವರಣದಲ್ಲಿ ದಿನೇದಿನೆ ಕಸದ ರಾಶಿ ತುಂಬುತ್ತಿದ್ದು, ಸಾರ್ವಜನಿಕ ಆರೋಗ್ಯದ ಮೇಲೆ ಭಾರೀ ಪರಿಣಾಮ ಬೀರುತ್ತಿದೆ. ಇಂದಿರಾ ಕ್ಯಾಂಟೀನ್ ಪಕ್ಕದಲ್ಲಿಯೇ ಕಸ ತಂದು ಹಾಕಲಾಗುತ್ತಿರುವುದು ಇಲ್ಲಿ ಚಿಕಿತ್ಸೆ ಪಡೆಯುತ್ತಿರುವವರಿಗೆ ಹಾಗೂ ಅವರ ಸಂಬಂಧಿಕರಿಗೆ ಮತ್ತು ಇಂದಿರಾ ಕ್ಯಾಂಟಿನ್‌ಗೆ ಬರುವವರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ.



ವಿಚಿತ್ರ ಸಂಗತಿಯೆಂದರೆ, ಇಲ್ಲಿ 10 ಹಾಸಿಗೆಗಳೊಂದಿಗೆ ಒಂದು ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದ್ದು, ಚಿಕಿತ್ಸೆ ಪಡೆಯಲು ಬರುವ ರೋಗಿಗಳು, ಅವರ ಸಂಬಂಧಿಕರು, ಹಾಗೂ ಸಿಬ್ಬಂದಿ ಕಸದ ದುರ್ವಾಸನೆ ಮತ್ತು ಅಶುಚಿಯ ನಡುವೆ ಇರಬೇಕಿದೆ. ಕಸದ ವಿಲೇವಾರಿಗೆ ಸಂಬಂಧಪಟ್ಟ ಯಾವುದೇ ಕ್ರಮಗಳು ಕೈಗೊಳ್ಳಲಾಗುತ್ತಿಲ್ಲ ಎನ್ನುವ ಆರೋಪಗಳು ಕೇಳಿ ಬರುತ್ತಿವೆ. ಸಾರ್ವಜನಿಕರ ಪ್ರಶ್ನೆ: ಚುನಾಯಿತ ಪ್ರತಿನಿಧಿಗಳು ಈ ಸಮಸ್ಯೆಯ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂಬುದು ನಾಗರಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಆಸ್ಪತ್ರೆ ಅಥವಾ ಪೌರ ಕಾರ್ಮಿಕರು ನಿರ್ಲಕ್ಷ್ಯ ತೋರುತ್ತಿರುವ ಬಗ್ಗೆ ಸ್ಥಳೀಯ ಆಡಳಿತ ಸುಮ್ಮನಾಗಿರುವುದು ಖಂಡನೀಯವಾಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಆರೋಗ್ಯವೆ ದೊಡ್ಡ ಸಂಪತ್ತು ಎನ್ನುವ ಮಾತು ನಡೆಯಬೇಕಾದ ಸ್ಥಳದಲ್ಲಿಯೇ ಕಸದ ರಾಶಿಯಿದ್ದು ಅನಾರೋಗ್ಯಕ್ಕೆ ಕಾರಣವಾಗುತ್ತಿದ್ದರು ,ಆರೋಗ್ಯ ಇಲಾಖೆ ಹಾಗೂ ಜಿಲ್ಲಾ ಆಡಳಿತ ಗಮನ ನೀಡದಿರುವುದು ಆತಂಕಕಾರಿಯಾಗಿದ್ದು, ಕೂಡಲೇ ಈ ಕಡೆ ಜಿಲ್ಲಾಡಳಿತ ಗಮನ ನೀಡಿ ಇಲ್ಲಿನ ಕಸ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕಿದೆ.

# ಕಟ್ಟಕಡೆಯ ಫಲಾನುಭವಿಗೆ ಸರ್ಕಾರದ ಯೋಜನೆಗಳು ತಲುಪಬೇಕು: ಶಾಸಕ ಚನ್ನಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ.29:ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ಯಾದಗಿರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ (ರಿ)., ಕರ್ನಾಟಕ ಕಾರ್ಯನಿರತ ಪತ್ರಿಕೆಗಳ ಸಂಪಾದಕರ ಸಂಘ (ರಿ). ಜಿಲ್ಲಾ ಘಟಕ ಯಾದಗಿರಿ ಇವರ ಸಂಯುಕ್ತಾಶ್ರಯದಲ್ಲಿ ಇಂದು ಯಾದಗಿರಿಯ ಎಸ್ ಡಿ ಎನ್ ಹೋಟೆಲ್ ನಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಆಯೋಜಿಸಿದ್ದ "ವಾರ್ತಾಲಾಪ"ಕಾರ್ಯಾಗಾರವನ್ನು ಯಾದಗಿರಿ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ಉದ್ಘಾಟಿಸಿದರು.



ಈ ವೇಳೆ ಶಾಸಕರಾದ ಶ್ರೀ ಚನ್ನಾರೆಡ್ಡಿ ಅವರು ಮಾತನಾಡಿ, ಪತ್ರಕರ್ತರಿಗೆ ಈ ಕಾರ್ಯಾಗಾರ ಆಯೋಜಿಸಿರುವುದು ಬಹಳ ಸಂತೋಷದ ಸಂಗತಿ. ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಹಳ್ಳಿ ಹಳ್ಳಿಗೆ ಮುಟ್ಟಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಭಾರತ ಸರ್ಕಾರದ ವಾರ್ತಾ ಶಾಖೆ ಹಮ್ಮಿಕೊಂಡಿರುವ ವಾರ್ತಾಲಾಪ ಕಾರ್ಯಾಗಾರವು ಬಹಳ ಅನುಕೂಲಕರವಾಗಲಿದೆ. ಅಭಿವೃದ್ಧಿ ಕಾರ್ಯಕ್ರಮಗಳನ್ನು ಹೆಚ್ಚು ಪ್ರಚುರಪಡಿಸುವುದರಿಂದ ಎಲ್ಲ ಫಲಾನುಭವಿಗಳಿಗೂ ಸರ್ಕಾರದ ಯೋಜನೆಗಳು ತಲುಪಲಿವೆ ಎಂದು ತಿಳಿಸಿದರು.ಬಹುತೇಕ ಹಳ್ಳಿಗಳಲ್ಲಿ ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿವೆ. ಇದರಿಂದ ಜನರಿಗೆ, ಮುಖ್ಯವಾಗಿ ವಿದ್ಯಾರ್ಥಿಗಳಿಗೆ ಬಹಳ ಅನುಕೂಲಕರ ವಾತಾವರಣ ಸೃಷ್ಟಿಯಾಗಿದೆ. ಇದು ಸರ್ಕಾರದ ಒಂದು ಅತ್ಯುತ್ತಮ ಕಾರ್ಯವಾಗಿದೆ. ಇದೇ ರೀತಿ ಜನರಿಗೆ ಹಾಗೂ ವಿದ್ಯಾರ್ಥಿಗಳಿಗೆ ಹಲವು ಅಭಿವೃದ್ಧಿ ಕಾರ್ಯಗಳು ಹೆಚ್ಚಾಗಲಿ ಎಂದು ಆಶಿಸಿದರು.

ಭಾರತ ಸರ್ಕಾರದ ವಾರ್ತಾ ಶಾಖೆಯ, ಬೆಂಗಳೂರಿನ ಹೆಚ್ಚುವರಿ ಮಹಾನಿರ್ದೇಶಕರಾದ ಶ್ರೀ ಎಸ್.ಜಿ. ರವೀಂದ್ರ ಅವರು ಕಾರ್ಯಾಗಾರದಲ್ಲಿ ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳು ರಾಜ್ಯ ಸರ್ಕಾರದ ಮೂಲಕವೇ ಅನುಷ್ಠಾನವಾಗುತ್ತವೆ. ಹಾಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಂದಾಗಿ ಕೆಲಸ ಮಾಡಿದಾಗ ಮಾತ್ರ ಯೋಜನೆಗಳ ಸಮರ್ಪಕ ಅನುಷ್ಠಾನ ಕಾಣಬಹುದು. ಮಾಹಿತಿ ಮತ್ತು ಪ್ರಸಾರ ಖಾತೆ-ಯ ರಾಜ್ಯ ಸಚಿವರಾದ ಡಾ.ಎಲ್. ಮುರುಗನ್ ಅವರು ಲೋಕಸಭೆಯಲ್ಲಿ ಮಾಹಿತಿ ನೀಡಿದಂತೆ, ಗ್ರಾಮೀಣ ಪ್ರದೇಶಗಳಲ್ಲಿ 104ರಿಂದ 510 ಸಮುದಾಯ ವಾಹಿನಿಗಳನ್ನು ಹೆಚ್ಚಿಸಲಾಗಿದೆ. ಹೊಸದಾಗಿ 264 ಸಮುದಾಯ ಬಾನುಲಿ ಕೇಂದ್ರಗಳು, 6 ದೂರದರ್ಶನ ವಾಹಿನಿಗಳಿಗೆ ಅನುಮೋದನೆ ನೀಡಲಾಗಿದೆ. ಪ್ರಧಾನಮಂತ್ರಿ ಆವಾಸ್ ಯೋಜನೆ, ಆರೋಗ್ಯವಲಯದಲ್ಲಿ ಆಯುಷ್ಮಾನ್ ಭಾರತ, ಜನೌಷಧಿ ಕೇಂದ್ರಗಳು, ಸರ್ಕಾರದ ಎಲ್ಲ ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ ಒದಗಿಸುವ ಉಮಂಗ್ ಅಪ್ಲಿಕೇಷನ್ ಸೇರಿದಂತೆ ವಿಶೇಷವಾಗಿ ರೈತರಿಗೆ, ಯುವಕರಿಗೆ, ಮಕ್ಕಳಿಗೆ, ಮಹಿಳೆಯರಿಗೆ, ಆರೋಗ್ಯ, ವಸತಿ ಕ್ಷೇತ್ರಗಳಲ್ಲಿ ಜನಪ್ರಿಯ ಯೋಜನೆ ಹಾಗೂ ಉಪಕ್ರಮಗಳು ಅನುಷ್ಠಾನಗೊಂಡಿವೆ. ಇವುಗಳಿಗೆ ಮಾಧ್ಯಮದವರು ಇನ್ನೂ ಹೆಚ್ಚಿನ ಪ್ರಚಾರ ಒದಗಿಸಿದರೆ, ಜನರು ಅವುಗಳ ಮಾಹಿತಿ ಪಡೆದು, ಅದರ ಅನುಕೂಲ ಪಡೆಯುತ್ತಾರೆ ಎಂದು ಹೇಳಿದರು.

ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಮಾತನಾಡಿ, ಮಹತ್ವಾಕಾಂಕ್ಷಿ ಜಿಲ್ಲೆಗಳ ಪಟ್ಟಿಯಲ್ಲಿ ಯಾದಗಿರಿ ಇದೆ. ಇದು ಕೃಷಿಯಾಧಾರಿತ ಜಿಲ್ಲೆಯಾಗಿದ್ದು, ಇಲ್ಲಿನ ಸುಸ್ಥಿರ ಕೃಷಿ, ತೋಟಗಾರಿಕೆ, ನೀರಾವರಿ ಯೋಜನೆಗಳ ಅನುಷ್ಠಾನ ಕುರಿತು ಈ ಕಾರ್ಯಾಗಾರದಲ್ಲಿ ಸಮಗ್ರ ಮಾಹಿತಿ ದೊರಕಲಿದೆ. ಈ ಕಾರ್ಯಾಗಾರ ಮಹತ್ವದಾಗಿದೆ. ಇದರ ಜೊತೆಗೆ ಉದ್ಯೋಗಾವಕಾಶ, ಜೀವ ವಿಮೆ, ಶಿಕ್ಷಣ, ಆರೋಗ್ಯ, ಯುವ ಸಬಲೀಕರಣ ಮುಂತಾದ ಕ್ಷೇತ್ರಗಳ ಜನಪರ ಯೋಜನೆಗಳ ಮಾಹಿತಿಗಳನ್ನು ಪತ್ರಕರ್ತರು ತಿಳಿದುಕೊಂಡು ಅದನ್ನು ಜನರಿಗೆ ಮುಟ್ಟಿಸುವುದು ಅಗತ್ಯ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ಅವರು ಮಾತನಾಡಿ, ಮಾಧ್ಯಮವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗವೆಂದು ಪರಿಗಣಿಸಲಾಗುತ್ತದೆ.ಮಾಧ್ಯಮದವರು ಮಾಹಿತಿ ಹಂಚಿಕೊಳ್ಳುವುದರ ಜೊತೆ-ಗೆ ಅದರಲ್ಲಿರುವ ಸತ್ಯಪರತೆಗೂ ಒತ್ತು ನೀಡಬೇಕು. ಈಗಿನ ಕಾಲಕ್ಕೆ ಜವಾಬ್ದಾರಿಯ ವರದಿಗಾರಿಕೆ ಹೆಚ್ಚು ಅವಶ್ಯವಾಗಿದೆ. ಸಮಾಜದಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ತಡೆಯಲು ಪೊಲೀಸ್ ಇಲಾಖೆ ಸಹಾಯವಾಣಿಯನ್ನು ಜಾರಿಗೊಳಿಸಿದೆ. ಅದಕ್ಕೆ ಹೆಚ್ಚಿನ ಪ್ರಚಾರ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀ ಮಲ್ಲಪ್ಪ ಸಂಕೀನ್ ಅವರು ಮಾತನಾಡಿ, ಸರ್ಕಾರದ ಅನೇಕ ಯೋಜನೆಗಳು ಮೊದಲು ಮಾಧ್ಯಮದವರಿಗೆ ತಿಳಿಯಬೇಕು. ಆಗ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆಗಳನ್ನು ತಲುಪಿಸಲು ಅನುಕೂಲವಾಗುತ್ತದೆ. ಪತ್ರಕರ್ತರಲ್ಲಿ ಅಧ್ಯಯನ ಆಧಾರಿತ ಲೇಖನಗಳು ಹೆಚ್ಚಾಗಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಯಾದಗಿರಿ ನಗರಸಭೆ ಅಧ್ಯಕ್ಷರಾದ ಕು. ಲಲಿತಾ ಅನಪೂರ, ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಲವೀಶ್ ಒರಡಿಯಾ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬೂರಾವ್ ಕಾಡ್ಲೂರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಶ್ರೀ ಸುಲೈಮಾನ್ ಡಿ. ನದಾಫ್, ಕರ್ನಾಟಕ ಕಾರ್ಯನಿರತ ಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಶ್ರೀ ಸಿದ್ದಪ್ಪ ಲಿಂಗೇರಿ ಅವರು ಉಪಸ್ಥಿತರಿದ್ದರು.

ಕಾರ್ಯಾಗಾರದಲ್ಲಿ ಯಾದಗಿರಿ ಜಿಲ್ಲೆಯ ನೂರಕ್ಕೂ ಅಧಿಕ ಮಾಧ್ಯಮ ಪ್ರತಿನಿಧಿಗಳು ಭಾಗಿಯಾಗಿದ್ದು ವಿಶೇಷವಾಗಿತ್ತು.

# ಭ್ರಷ್ಟಾಚಾರದ ಪಿಡುಗು ತೊಲಗಿದಲ್ಲಿ ಭಾರತ ನಂಬರ್ 1 ದೇಶವಾಗಿ ಹೊರ ಹೊಮ್ಮಲಿದೆ: ಉಪ ಲೋಕಾಯುಕ್ತ ಬಿ ವೀರಪ್ಪ ಸಲಹೆ

ರಾಯಚೂರ ಆ 29: ಭ್ರಷ್ಟಾಚಾರದ ಪಿಡುಗನ್ನು ನಾವೆಲ್ಲ ಸಂಕಲ್ಪ ಮಾಡಿ ತೆಗೆದು ಹಾಕಿದಲ್ಲಿ ಭಾರತ ನಂಬರ್ 1 ದೇಶವಾಗಿ ಹೊರ ಹೊಮ್ಮಲಿದೆ ಎಂದು ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ ವೀರಪ್ಪ ಅವರು ಹೇಳಿದರು.ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಆಗಸ್ಟ್ 29 ರಂದು ನಡೆದ ಸಾರ್ವಜನಿಕರ ಅಹವಾಲು ಸ್ವೀಕರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮಾರಕ ಕ್ಯಾನ್ಸರ್ ಖಾಯಿಲೆಯನ್ನು ಗುಣಪಡಿಸಬಹುದು;ಆದರೆ ಭ್ರಷ್ಟಾಚಾರ ತೊಲಗಿಸಲು ಆಗದು ಎನ್ನುವ ಹಾಗೆ ಎಲ್ಲೆಡೆ ಭ್ರಷ್ಟಾಚಾರವು ಬಹುದೊಡ್ಡ ಪಿಡುಗಾಗಿ ಪರಿಣಮಿಸುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು. ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಭ್ರಷ್ಟರಲ್ಲ; ಕೆಲವರು ಮಾತ್ರ ಹಾದಿ ತಪ್ಪಿದ್ದಾರೆ. 450 ಹಾಜರಿ ಹಾಕಿ, 150 ವಿದ್ಯಾರ್ಥಿಗಳಿಗಷ್ಟೇ ಊಟ ನೀಡಿ, ಬಾಕಿ ಹಾಜರಾತಿಯ ಹಣ ತಿನ್ನುವಂತಹ ಭ್ರಷ್ಟ ವಾರ್ಡನ್, ಅಧಿಕಾರಿಗಳು ನಮ್ಮ ಮಧ್ಯೆ ಇದ್ದಾರೆ. ವಿದ್ಯಾರ್ಥಿಗಳ ಊಟದ ಹಣ ತಿನ್ನುವುದು ಅನ್ನದ ಮೇಲೆ ಮಾಡುವ ಮೋಸವಾಗಿದೆ. ಅನ್ಯರ



ಅನ್ನದ ಹಣ ತಿನ್ನುವುದು ದೇಶಕ್ಕೆ ದ್ರೋಹ ಮಾಡಿದಂತೆ ಎಂದು ಉಪ ಲೋಕಾಯುಕ್ತರು ಎಚ್ಚರಿಕೆ ನೀಡಿದರು.

ಅಧಿಕಾರಿಗಳು, ಭ್ರಷ್ಟದ ಹಣವನ್ನು ಮನೆಗೆ ಒಯ್ದರೆ ಅವರ ಹೆಂಡತಿ ಮತ್ತು ಮಕ್ಕಳು "ನಾವು ಲಂಚದ ಊಟ ಮಾಡುವುದಿಲ್ಲ" ಎಂದು ಹೇಳುವ ಕಾಲ ಬರಬೇಕಿದೆ. ನಾವು ತಿನ್ನುವ ಅಣ್ಣ ಬೇರೆಯವರದಾದರೆ ಅದು ವಿಷ ಎಂದು ಅರ್ಥೈಸಿಕೊಂಡು ಜೀವನ ನಡೆಸಿದಾಗ ಈ ಸಮಾಜದ ಬದಲಾವಣೆ ಸಾಧ್ಯವಿದೆ ಎಂದು ತಿಳಿಸಿದರು.ಹಣ ಪಡೆದು ಓಟು ಹಾಕುವ ಕಾಲ ಬಂದಿದೆ. ಇದರ ಅರ್ಥ ಏನು. ಸಾರ್ವಜನಿಕರ ಮೇಲೆ ಭ್ರಷ್ಟಾಚಾರದ ಆರೋಪ ಬರಬಾರದು. ಶಿಕ್ಷಣದ ಜೊತೆಗೆ ನಮಗೆ ಸಂಸ್ಕಾರ, ಮಾನವೀಯತೆಯ ಗುಣಗಳು ಇರಬೇಕು ಎಂದು ಉಪ ಲೋಕಾಯುಕ್ತರು ಸಲಹೆ ಮಾಡಿದರು.ಮಹಾತ್ಮ ಗಾಂಧೀಜಿ, ಜವಾಹರಲಾಲ್ ನೆಹರು, ಸುಭಾಷಚಂದ್ರ ಬೋಸ್, ವಲ್ಲಭಬಾಯಿ ಪಟೇಲ್ ಸೇರಿದಂತೆ ಅನೇಕ ಮಹನಿಯರು ಈ ದೇಶಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದರು. ಡಾ.ಬಿ.ಆರ್. ಅಂಬೇಡ್ಕರ್ ಅವರು ಜಗತ್ತಿನಲ್ಲಿಯೇ ಅತಿ ಹೆಚ್ಚು ಪದವಿ ಗಳಿಸಿದ ಮಹಾನ್ ಮೇದಾವಿಯಾಗಿದ್ದರು. ಇಂತಹ ಮಹನಿಯರ ಜೀವನದ ಗುಣಗಳನ್ನು ನಮ್ಮ ಜೀವನದಲ್ಲಿ ಶೇ.05ರಷ್ಟು ಅಳವಡಿಸಿಕೊಂಡರೆ ನಾವು ಬದಲಾಗಿ ಸಮಾಜ ತನ್ನಿಂತಾನೆ ಸುಧಾರಣೆಯಾಗಲಿದೆ ಎಂದು ತಿಳಿಸಿದರು.ಒಂದು ಖಾತಾ ಮಾಡೋಕೆ ತಿಂಗಳುಗಟ್ಟಲೇ ಸಮಯ ತೆಗೆದುಕೊಳ್ಳುತ್ತಿದ್ದಾರೆ. ಇದು ಸರಿಯಲ್ಲ. ಕೆಲ ಅಧಿಕಾರಿಗಳ ಮತ್ತು ಸಿಬ್ಬಂದಿಯ ಕಾರ್ಯವೈಖರಿ ಕಂಡು ಜನರು ಬೇಸತ್ತಿದ್ದಾರೆ. ತಮ್ಮ ಹಕ್ಕಿಗಾಗಿ ಸಿಡಿದೇಳುವ ಕಾಲ ದೂರವಿಲ್ಲ ಎಂದು ಉಪ ಲೋಕಾಯುಕ್ತರು ಎಚ್ಚರಿಕೆ ನೀಡಿದರು.ನಾವುಗಳು ನಮ್ಮ ಹಕ್ಕಿಗಾಗಿ ಹೋರಾಡೋಣ. ಜೊತೆಗೆ ಸರಿಯಾದ ದಾರಿಯಲ್ಲಿ ನಡೆಯೋಣ. ನಾವು ಸರಿಯಾಗಿ ಆತ್ಮವಿಮರ್ಶೆ ಮಾಡಿಕೊಳ್ಳದಿದ್ದರೆ ನಮಗೆ ಉಳಿಗಾಲವಿಲ್ಲ ಎಂಬ ಅರಿವು ಇರಬೇಕು ಎಂದು ಉಪ ಲೋಕಾಯುಕ್ತರು ಜನತೆಗೆ ಸಲಹೆ ಮಾಡಿದರು.ಮಹನಿಯರ ಫೋ-ಟೊ ಬಳಸಬೇಡಿ: ಮಹನಿಯರ ಭಾವಚಿತ್ರಗಳನ್ನು ಲೇಟರ ಹೆಡ್ ನಲ್ಲಿ ಬಳಸಬಾರದು. ತಿಳಿವಳಿಕೆಯಿಲ್ಲದೇ, ಮನಸಿಗೆ ಬಂದಂತೆ ಲೇಟರ್ ಬಳಕೆ ಮಾಡುವುದು ತಪ್ಪಾಗುತ್ತದೆ ಎಂದು ಲೋಕಾಯುಕ್ತರು ತಿಳಿಸಿದರು. ಗ್ರಾಪಂ ಸದಸ್ಯರಲ್ಲಿ ಮನವಿ: ಆಯಾ ಗ್ರಾಮಗಳಲ್ಲಿನ ಗಲೀಜು ನೀರು ಕೆರೆ, ಬಾವಿಗೆ, ನದಿಗೆ ಹರಿಯಬಾರದು. ಆ ನೀರಿಗೆ ಇಂಗುಗುಂಡಿ ಮಾಡಿಸಲು ಜಿಲ್ಲೆಯಲ್ಲಿನ ಎಲ್ಲ ಗ್ರಾಮ ಪಂಚಾಯತಗಳ ಸದಸ್ಯರು ಕಾಳಜಿ ವಹಿಸಬೇಕು ಎಂದು ಉಪ ಲೋಕಾಯುಕ್ತರು ಸಲಹೆ ಮಾಡಿದರು. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಮಾತನಾಡಿದರು. ಸಮಾರಂಭದಲ್ಲಿ ಗೌರವಾನ್ವಿತ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ. ಹೆಚ್.ಎ.ಸಾತ್ವಿಕ, ಬೆಂಗಳೂರಿನ ಉಪ ಲೋಕಾಯುಕ್ತ ಕಚೇರಿಯ ಅಪರ ನಿಬಂಧಕರಾದ ರಮಾಕಾಂತ ಚವ್ಹಾಣ್, ಶಿವಾಜಿ ಅನಂತ ನಲವಾಡೆ, ಉಪ ನಿಬಂಧಕರಾದ ಅರವಿಂದ, ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ., ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಬಿ.ಚಿಟುಗುಬ್ಬಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಮಹಾನಗರಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ, ಕರ್ನಾಟಕ ಲೋಕಾಯುಕ್ತದ ಡಿಎಸ್ಪಿಗಳಾದ ರವಿ ಪುರಷೋತ್ತಮ ಉಪಸ್ಥಿತರಿದ್ದರು.ಕೊಪ್ಪಳ ಡಿಎಸ್ಪಿ ವಸಂತಕುಮಾರ ನಿರೂಪಿಸಿದರು. ಮಹಾಲಕ್ಷ್ಮಿ ಅವರು ನಾಡಗೀತೆ ಹೇಳಿದರು.

# ರೈತರಿಗೆ ಕೂಡಲೇ ಎಕರೆಗೆ ಕನಿಷ್ಠ 25 ಸಾವಿರ ರೂ. ಪರಿಹಾರ ನೀಡಬೇಕು: ಬಂಡೆಪ್ಪ ಖಾಶೆಂಪುರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 29 : ಕಳೆದ ಕೆಲ ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ, ಜಮೀನಿನಲ್ಲಿ ನೀರು ನಿಂತು ರೈತರು ಬಿತ್ತನೆ ಮಾಡಿದ ಬೆಳೆಗಳು ಹಾನಿಯಾಗಿದ್ದು, ಸರ್ಕಾರ ಬೆಳೆ ಕಳೆದುಕೊಂಡ ರೈತರಿಗೆ ಎಕ-ರೆಗೆ ಕನಿಷ್ಠ 25 ಸಾವಿರ ರೂ. ಪರಿಹಾರ ಕೂಡಲೇ ನೀಡಬೇಕು ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಒತ್ತಾಯಿಸಿದರು.

ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ರೈತರ ಜಮೀನುಗಳಲ್ಲಿ ನೀರು ನಿಂತು ಬೆಳೆ ಹಾನಿ ಸಂಭವಿಸಿದ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಬುಧೇರಾ, ಮಲ್ಲಿಕ್ ಮರ್ಜಾಪೂರ್, ಖಾಶೆಂಪುರ್ ಪಿ ಸೇರಿದಂತೆ ವಿವಿಧ ಗ್ರಾಮಗಳ ರೈತರ ಜಮೀನುಗಳಿಗೆ ಕೃಷಿ ಇಲಾಖೆಯ ಅಧಿಕಾರಿಗಳೊಂದಿಗೆ ಶುಕ್ರವಾರ ಭೇಟಿ ನೀಡಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.


ಕಳೆದ ಕೆಲ ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಬಹುತೇಕ ಕಡೆಗಳಲ್ಲಿ ಹಳ್ಳ, ಕೆರೆಗಳು ತುಂಬಿ ಹರಿಯುತ್ತಿದ್ದು, ರೈತರ ಜಮೀನುಗಳಲ್ಲಿ ನೀರು ನಿಂತಿವೆ. ಇದರಿಂದ ರೈತರು ಬೆಳೆದ ಸೋಯಾ, ಹೆಸರು, ತೊಗರಿ, ಕಬ್ಬು, ಉದ್ದು ಸೇರಿದಂತೆ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳು ಬಹುತೇಕ ಹಾನಿಯಾಗಿವೆ.

ಅಷ್ಟೇ ಅಲ್ಲದೇ ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿರುವ ಜಮೀನುಗಳಲ್ಲಿ ಬೆಳೆಗಳೇ ಕಾಣದ ರೀತಿಯಲ್ಲಿ ನೀರು ನಿಂತು ಬೆಳೆ ಹಾನಿ ಸಂಭವಿಸಿದೆ. ಇದರಿಂದಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ಬೆಳೆ ಕಳೆದುಕೊಂಡಿರುವ ರೈತರಿಗೆ ಕೂಡಲೇ ಪರಿಹಾರ ಒದಗಿಸಿಕೊಡುವ ಕೆಲಸ ಮಾಡಬೇಕು.

ಕೃಷಿ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಕೂಡಲೇ ಜಂಟಿ ಸಮೀಕ್ಷೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿ ಹೆಚ್ಚಿನ ಪರಿಹಾರಕ್ಕೆ ಮನವಿ ಮಾಡಬೇಕು. ಬೆಳೆ ವಿಮಾ ಕಂಪನಿಗಳು ಕೂಡ ಬೆಳೆ ನಷ್ಟಕ್ಕೆ ಬೆಳೆ ವಿಮೆ ಪರಿಹಾರ ಒದಗಿಸಿಕೊಡಬೇಕು. ಆ ನಿಟ್ಟಿನಲ್ಲಿ ಸಂಬಂಧಿಸಿದವರು ಕೆಲಸ ಮಾಡಬೇಕು. ನಮ್ಮ ಭಾಗದಲ್ಲಿ ಹೊಣಬೇಸಾಯವನ್ನೇ ನಂಬಿಕೊಂಡು ಕುಳಿತ್ತಿದ್ದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮುಖ್ಯಮಂತ್ರಿಗಳು ಶೀಘ್ರದಲ್ಲೇ ಬೆಳೆ ಹಾನಿ ಪರಿಹಾರ ಘೋಷಣೆ ಮಾಡ್ಬೇಕು. ಆ ಮೂಲಕ ಬೆಳೆ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ ರೈತರಿಗೆ ಧೈರ್ಯ ತುಂಬುವ ಕೆಲಸ ಮಾಡ್ಬೇಕು ಎಂದು ಮುಖ್ಯಮಂತ್ರಿಗಳಿಗೆ ಪತ್ರ ಬರೆಯುತ್ತೇನೆ ಎಂದು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ಹೇಳಿದರು.

ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್ ರಾಣಿ, ಉಪ ಕೃಷಿ ನಿರ್ದೇಶಕ ಎಮ್.ಎ.ಕೆ ಅನ್ಸಾರಿ, ಕೃಷಿ ಅಧಿಕಾರಿ ಶತ್ರುಜ್ಞಾ, ಬಗದಲ್ ಕೃಷಿ ಅಧಿಕಾರಿ ಸಂಗಮೇಶ್, ಮನ್ನಳ್ಳಿ ಕೃಷಿ ಅಧಿಕಾರಿ ವಿಜಯಕುಮಾರ್, ರೈತರಾದ ಮಾಣಿಕ್ ಭೀಮಣ್ಣ ಮಚ್ಕುರಿ, ಬಕ್ಕಪ್ಪ ಚಂದಪ್ಪ, ಕೃಷ್ಣ ಸತ್ಯನಾರಾಯಣ, ವಿಕ್ರಮ್ ಶರಣಪ್ಪ, ಶರಣಪ್ಪ ಖಾಶೆಂಪುರ್, ಅಮರೇಶ್ ಪರಮಣ್ಣ, ಲೋಕೇಶ್ ಎಮ್ ಮರ್ಜಾಪೂರ್, ರಮೇಶ್ ಮರ್ಜಾಪೂರ್, ರಾಜಶೇಖರ್ ಚುಲ್ಕೆ, ಶ್ರೀಕಾಂತ್ ನೌಬಾದೆ, ಗಣಪತಿ ಹಾಸ್ಗೊಂಡ, ದಶರಥ ಮೇತ್ರೆ, ಸುನೀಲ್ ತಿಪ್ಗೊಂಡ ಸೇರಿದಂತೆ ಅನೇಕರಿದ್ದರು.

# ಕಾರಂಜಾ ಜಲಾಶಯ ಸುತ್ತಮುತ್ತಲಿನ ಪ್ರದೇಶಗಳಿಗೆ ಸಚಿವ ಈಶ್ವರ ಬಿ.ಖಂಡ್ರೆ ಭೇಟಿ, ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ 29 : ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರಿಂದು ಕಾರಂಜಾ ಜಲಾಶಯ ಸುತ್ತಮುತ್ತಲಿನ ಕಣಜಿ ಸೇರಿದಂತೆ ಅತಿವೃಷ್ಟಿ ಪೀಡಿತ ಗ್ರಾಮಗಳಿಗೆ ಭೇಟಿ ನೀಡಿ ಹಾನಿಗೊಳಗಾದ ಪರಿಸ್ಥಿತಿಯನ್ನು ನೇರವಾಗಿ ಪರಿಶೀಲಿಸಿದರು. ಭಾರಿ ಮಳೆಯಿಂದಾಗಿ ಹೆಸರು, ಉದ್ದು, ತೊಗರಿ ಹಾಗೂ ಸೋಯಾಬೀನ್ ಬೆಳೆಗಳು ಸಂಪೂರ್ಣವಾಗಿ ಹಾನಿಗೊಳಗಾಗಿದ್ದು, ಹಲವೆಡೆ ಮನೆಗಳು ಕುಸಿತಗೊಂಡಿರುವುದರಿಂದ ಗ್ರಾಮಸ್ಥರು ಸಂಕಷ್ಟ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸಚಿವರು ಸ್ಥಳೀಯರ ಸಮಸ್ಯೆಗಳನ್ನು ಆಲಿಸಿ ಶೀಘ್ರದಲ್ಲೇ ಸರ್ಕಾರದ ವತಿಯಿಂದ ಸೂಕ್ತ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ನಂತರ ಜಿಲ್ಲೆಯ ಜೀವನಾಡಿಯಾದ ಕಾರಂಜಾ ಜಲಾಶಯಕ್ಕೆ ಭೇಟಿ ನೀಡಿದ ಸಚಿವರು, ಜಲಾಶಯದ ಸ್ಥಿತಿಗತಿ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು. ಪ್ರಸ್ತುತ 7 ಟಿಎಂಸಿ ಸಾಮರ್ಥ್ಯದ ಜಲಾಶಯ ಸಂಪೂರ್ಣ ಭರ್ತಿಯಾಗಿದ್ದು, 10 ಸಾವಿರ ಕ್ಯೂಸೆಕ್


ನೀರು ಒಳಹರಿವು ಆಗುತ್ತಿದ್ದು 13 ಸಾವಿರ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಚಿವರು ಅಧಿಕಾರಿಗಳಿಗೆ

ನಿಬಂಧನೆಗಳಿಗೆ ಅನುಗುಣವಾಗಿ ಜಲಾಶಯದ ಸ್ಥಿತಿಗತಿ

ಕಾಪಾಡಿಕೊಂಡು, ಜನರ ಜೀವ ಮತ್ತು ಆಸ್ತಿಗೆ ಯಾವುದೇ ಅಪಾಯವಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

# ಕೆಮಿಕಲ್ ಕಾರ್ಖಾನೆಯ ಕಾರಣಕ್ಕೆ ಬೆಳೆ ನಾಶ, ದುರ್ವಾಸನೆ - ಜನ ಹೈರಾಣ, ರೈತರಿಗೆ ಕಳವಳ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್, ಆ 29: ಹುಮನಾಬಾದ್ ಹೊರವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಮಿಕಲ್ ಕಾರ್ಖಾನೆಗಳಿಂದ ಹೊರ ಬೀಳುತ್ತಿರುವ ವಿಷಪೂರಿತ ತ್ಯಾಜ್ಯದಿಂದ ರೈತರ ಬೆಳೆಗಳು ನಾಶವಾಗಿದ್ದು, ರಾತ್ರಿ ಸಮಯದಲ್ಲಿ ಹರಡುವ ದುರ್ವಾಸನೆಯಿಂದ ಸಾರ್ವಜನಿಕರು ತೀವ್ರ ಹೈರಾಣಾಗಿದ್ದಾರೆ. ಗ್ರಾಮಾಂತರ ಪ್ರದೇಶಗಳಲ್ಲಿನ ರೈತರು ಬೆಳೆದ ಶೇಂಗಾ, ಜೋಳ, ಬಟಾಣಿ ಸೇರಿದಂತೆ ಹಲವಾರು ಬೆಳೆಗಳಲ್ಲಿ ಮಾಲಿನ್ಯದ ಪರಿಣಾಮ ಕಾಣಿಸುತ್ತಿದೆ. ಕಾರ್ಖಾನೆಯ ರಾಸಾಯನಿಕ ದ್ರವಗಳು ಸಮೀಪದ ಹಳ್ಳ ಮತ್ತು ಕೊಳ್ಳಗಳಿಗೆ ಹರಿದು ಜಮೀನಿಗೆ ಸೇರುತ್ತಿರುವ ಪರಿಣಾಮವಾಗಿ ಗಿಡಗಳು ಒಣಗುತ್ತಿವೆ, ಇಳುವರಿ ತೀವ್ರವಾಗಿ ಕುಸಿಯುತ್ತಿದೆ ಎಂಬುದು ರೈತರ ದೂರು."ನಮ್ಮ ಪೋಷಣೆಯ ಏಕೈಕ ಆಧಾರವೇ ಈ ಬೆಳೆಗಳು. ಇವೆಲ್ಲ ನಾಶವಾದರೆ ಬದುಕು ಹೇಗೆ?" ಎಂದು ಸ್ಥಳೀಯ ರೈತರು ಆಕ್ರೋಶ ವ್ಯಕ್ತಪಡಿಸಿದರು.ಕಾರ್ಖಾನೆಯಿಂದ ರಾತ್ರಿ ಸಮಯದಲ್ಲಿ ಹರಡುವ ದುರ್ವಾಸನೆಯಿಂದ ಜನರು ನಿದ್ರೆ ಮಾಡಲಾಗದ ಸ್ಥಿತಿಯಲ್ಲಿದ್ದಾರೆ. ಮಕ್ಕಳಿಗೆ ಉಸಿರಾಟದ ತೊಂದರೆ, ಕೆಮ್ಮು, ಕಣ್ಣು ಉರಿಯುವುದು ಸೇರಿದಂತೆ ಆರೋಗ್ಯ ಸಮಸ್ಯೆಗಳು ಕಾಣಿಸುತ್ತಿವೆ ಎಂಬುದಾಗಿ ಗ್ರಾಮಸ್ಥರು ತಿಳಿಸಿದ್ದಾರೆ. ಸ್ಥಳೀಯರು ಈ ಸಮಸ್ಯೆ ಬಗ್ಗೆ ಪಂಚಾಯತ್, ತಾಲೂಕು ಆಡಳಿತದವರೆಗೆ ಅನೇಕ ಬಾರಿ ದೂರು ನೀಡಿದರೂ, ಈವರೆಗೆ ಯಾವುದೇ ತೀವ್ರಕ್ರಮ ಕೈಗೊಳ್ಳಲಾಗಿಲ್ಲ. "ಅಧಿಕಾರಿಗಳು ನಿಗಾ ವಹಿಸದೆ ಕುಳಿತಿದ್ದಾರೆ, ಜನರ ಪ್ರಾಣಕ್ಕೂ ಬೆಲೆ ಇಲ್ಲವೆ?" ಎಂದು ಸ್ಥಳೀಯ ಹೋರಾಟಗಾರರು ಪ್ರಶ್ನಿಸಿದ್ದಾರೆ.

ಅಧಿಕಾರಿಗಳು ಮತ್ತು ಶಾಸಕರು ತಕ್ಷಣ ತನಿಖೆ ನಡೆಸಿ,

ರೈತರಿಗೆ ಪರಿಹಾರ ನೀಡಬೇಕು.

ಮಾಲಿನ್ಯವಾಗದಂತೆ ತ್ಯಾಜ್ಯ ವಿಸರ್ಜನೆಗೆ ಕಟ್ಟುನಿಟ್ಟಿನ ನಿಯಮ ಜಾರಿ ಮಾಡಬೇಕು, ಎಂದು ಪರಿಸರ ಕಾರ್ಯಕರ್ತರು ಆಗ್ರಹಿಸುತ್ತಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.